ಸಂಪುಟ: 06 ಸಂಚಿಕೆ: 183 ಪುಟಗಳು: 06 ಸೋಮವಾರ 14 ಸೆಪ್ಟೆಂಬರ 2026 www.udayavahini.in epaper.udayavahini.in Udayavahini news Udayavahini news Udayavahini news youtube udayavahininews@gmail.com

ಸಂಪಾದಕರು: ಟಿ. ಹೊಂಬೇಗೌಡ RNI No. KARKAN/2021/80833 9448225696 +91 8035621249 ₹5

# ಉದಯ ವಾಹಿನಿ

ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

## ಗಣೇಶ ಹಬ್ಬ ಬಹಳ ಶಾಂತಿಯಿಂದ ಆಚರಿಸಬೇಕು, ಕುತಂತ್ರ ನಡೆಯುವ ಬಗ್ಗೆ ಗೊತ್ತಾಗಿದೆ: ಸಿಎಂ ಡಿ.ಕೆ.ಶಿವಕುಮಾರ್

• **ಉದಯವಾಹಿನಿ, ಬೆಂಗಳೂರು**

ಗಣೇಶ ಹಬ್ಬವನ್ನು ಬಹಳ ಶಾಂತಿಯುತವಾಗಿ ಆಚರಣೆ ಮಾಡಬೇಕು. ಕುತಂತ್ರ ನಡೆಯುತ್ತಿದೆ ಅಂತ ಗೊತ್ತಾಗಿದೆ ಎಂದು ಸಿಎಂ ಡಿ.ಕೆ.ಶಿವಕುಮಾರ್ ತಿಳಿಸಿದರು.ಬೆಂಗಳೂರಲ್ಲಿ ಮಾತನಾಡಿದ ಅವರು, ಗಣೇಶ ಹಬ್ಬ ಸಂಭ್ರಮಾಚರಣೆಗೆ ಕಂಡೀಷನ್ ಹಾಕ್ತಿದ್ದಾರೆ ಎಂಬ ಆರ್.ಅಶೋಕ್ ಆರೋಪ ವಿಚಾರವಾಗಿ ಪ್ರತಿಕ್ರಯಿಸುತ್ತಾ, ಕೆಲವು ಶಿಸ್ತು ಇರಬೇಕು. ಅಶಾಂತಿ ಮೂಡಿಸುವ ಪ್ರಯತ್ನ ನಡೆಯುತ್ತಿದೆ. ಕುತಂತ್ರ ನಡೆಯುತ್ತಿದೆ ಅಂತ ಗೊತ್ತಾಗಿದೆ. ನಮ್ಮ ಪೊಲೀಸರಿಗೆ ಹುಷಾರಾಗಿರಿ ಅಂತ ಹೇಳಿದ್ದೇವೆ.

ಸಮಾಜ ವಿರೋಧಿ ವ್ಯಕ್ತಿಗಳನ್ನು ಬಿಜೆಪಿಯವರು ಜಾಸ್ತಿ ಬಳಕೆ ಮಾಡುತ್ತಿದ್ದಾರೆ. ಎಲ್ಲವೂ ನಮಗೆ ಗೊತ್ತಿದೆ. ಗಣೇಶ ಬಿಜೆಪಿಯವರ ಆಸ್ತಿಯಲ್ಲ, ಎಲ್ಲರ ಆಸ್ತಿ, ಗಣೇಶ ಹಬ್ಬಕ್ಕೆ ರಜಾನೇ ಕೊಟ್ಟಿದ್ದೇವೆ. ಪ್ರೋತ್ಸಾಹ ಕೊಡ್ತಿದ್ದೇವೆ ಎಂದರು. ತಿ.ನರಸೀಪುರ ಪೊಲೀಸ್ ಠಾಣೆಗೆ ಆರ್.ಅಶೋಕ್ ಭೇಟಿ ವಿಚಾರವಾಗಿ ಪ್ರತಿಕ್ರಯೆ ನೀಡಿದ ಸಿಎಂ, ಎಲ್ಲಿ ಬೇಕಾದ್ರು ಹೋಗಲಿ ಏನಾದ್ರು ಮಾಡಲಿ. ಸುಳ್ಳೆ ಅವರ ಮನೆ ದೇವರು..

## ಪ್ರಯಾಣಿಕರ ಸುರಕ್ಷತೆ ಕಾಪಾಡಲು ರೈಲ್ವೆ ಪೊಲೀಸರಿಂದ ಭದ್ರತೆ ಹೆಚ್ಚಳ!

• **ಉದಯವಾಹಿನಿ, ಬೆಂಗಳೂರು**

ಗೌರಿ-ಗಣೇಶ ಹಬ್ಬದ ಹಿನ್ನೆಲೆಯಲ್ಲಿ, ಪ್ರಯಾಣಿಕರ ಸುರಕ್ಷತೆ, ಅನುಕೂಲ ಹಾಗೂ ಹಬ್ಬದ ಅವಧಿಯಲ್ಲಿ ಸುಗಮ ಪ್ರಯಾಣಕ್ಕೆ ಅನುವು ಮಾಡಿಕೊಡಲು, ರೈಲ್ವೆ ರಕ್ಷಣಾ ಪಡೆ ಬೆಂಗಳೂರು ವಿಭಾಗವು ಪ್ರಮುಖ ರೈಲು ನಿಲ್ದಾಣಗಳು ಮತ್ತು ವಿಭಾಗದ ಇತರ ಸೂಕ್ಷ್ಮ ಸ್ಥಳಗಳಲ್ಲಿ ಭದ್ರತಾ ವ್ಯವಸ್ಥೆಗಳನ್ನು ಬಲಪಡಿಸಿದೆ. ವಿಶೇಷವಾಗಿ ಹೆಚ್ಚು ಜನಸಂದಣಿ ಇರುವ ಅವಧಿಗಳಲ್ಲಿ, ಪ್ರಮುಖ ರೈಲು ನಿಲ್ದಾಣಗಳು, ಪ್ಲಾಟ್‌ಫಾರ್ಮ್‌ಗಳು, ನಿಲ್ದಾಣದ ಆವರಣಗಳು, ಪ್ರವೇಶ ಮತ್ತು ನಿರ್ಗಮನ ದ್ವಾರಗಳು ಹಾಗೂ ಇತರ ಸೂಕ್ಷ್ಮ ಸ್ಥಳಗಳಲ್ಲಿ ಹೆಚ್ಚುವರಿ ಆರ್‌ಪಿಎಫ್ ಸಿಬ್ಬಂದಿಯನ್ನು ನಿಯೋಜಿಸಲಾಗಿದೆ. ಜನಸಂದಣಿ ನಿರ್ವಹಣೆ, ಅತಿಯಾದ ಜನದಟ್ಟಣೆಯನ್ನು ತಡೆಗಟ್ಟುವುದು ಮತ್ತು ಪ್ರಯಾಣಿಕರ ಸುಗಮ ಸಂಚಾರಕ್ಕೆ ವಿಶೇಷ ಗಮನಹರಿಸಲಾಗುತ್ತಿದೆ.

ವಿಧ್ವಂಸಕ ಕೃತ್ಯ ತಡೆಗಟ್ಟುವಿಕೆ ಮತ್ತು ಸ್ಫೋಟಕಗಳನ್ನು ಪತ್ತೆಹಚ್ಚುವ ನಿಟ್ಟಿನಲ್ಲಿ ರೈಲು ನಿಲ್ದಾಣಗಳು ಹಾಗೂ ಇತರ ಪ್ರಮುಖ ಸ್ಥಳಗಳಲ್ಲಿ ಆರ್‌ಪಿಎಫ್ ಶ್ವಾನದಳವನ್ನು ನಿಯೋಜಿಸಲಾಗುತ್ತಿದೆ. ಯಾವುದೇ ಅನುಮಾನಾಸ್ಪದ ಅಥವಾ ವಾರಸುದಾರರಿಲ್ಲದ ವಸ್ತುಗಳನ್ನು ಗುರುತಿಸಲು ಇತರ ಭದ್ರತಾ ಸಂಸ್ಥೆಗಳ ಸಹಯೋಗದೊಂದಿಗೆ ನಿಯಮಿತ ತಪಾಸಣೆಗಳನ್ನು ನಡೆಸಲಾಗುತ್ತಿದೆ. ರೈಲು ನಿಲ್ದಾಣಗಳಲ್ಲಿ ಅಳವಡಿಸಲಾಗಿರುವ ಸಿಸಿಟಿವಿ ಜಾಲದ ಮೂಲಕ ಆರ್‌ಪಿಎಫ್ ಸಿಬ್ಬಂದಿ ನಿರಂತರ ನಿಗಾ ವಹಿಸುತ್ತಿದ್ದು, ಅನುಮಾನಾಸ್ಪದ ಚಟುವಟಿಕೆಗಳು, ಮಾಲೀಕರಿಲ್ಲದ ಲಗೇಜ್, ಜನದಟ್ಟಣೆ ಮತ್ತು ಭದ್ರತೆಗೆ ಸಂಬಂಧಿಸಿದ ಇತರ ವಿಷಯಗಳನ್ನು ಪತ್ತೆಹಚ್ಚಲು ಸಿಸಿಟಿವಿ ದೃಶ್ಯಾವಳಿಗಳನ್ನು ನಿರಂತರವಾಗಿ ಪರಿಶೀಲಿಸಲಾಗುತ್ತಿದೆ.

## RSS ಆಕ್ಟೋಪಸ್ ಥರ, ಅದು ಎಲ್ಲೆಲ್ಲೂ ಇದೆ

• **ಉದಯವಾಹಿನಿ, ಬೆಂಗಳೂರು**

ಕೆಪಿಸಿಸಿ ಅಧ್ಯಕ್ಷ ಬಿ.ಕೆ.ಹರಿಪ್ರಸಾದ್ ಮತ್ತೆ ಆರ್‌ಎಸ್‌ಎಸ್ ವಿರುದ್ಧ ವಾಗ್ದಾಳಿ ನಡೆಸಿದ್ದಾರೆ. ಬೆಂಗಳೂರಿನ ಗಾಂಧಿ ಭವನದಲ್ಲಿ ನಡೆದ ಕಾರ್ಯಕ್ರಮದಲ್ಲಿ ಮಾತಾಡಿದ ಹರಿಪ್ರಸಾದ್, ಆರ್‌ಎಸ್‌ಎಸ್ ಆಕ್ಟೋಪಸ್ ಥರ, ಅದು ಎಲ್ಲೆಲ್ಲೂ ಇದೆ. ಕಾರ್ಯಾಂಗ, ನ್ಯಾಯಾಂಗ, ಮಾಧ್ಯಮದಲ್ಲೂ ಈ ಆಕ್ಟೋಪಸ್ ಇದೆ. ದೇಶ ಹಾಳು ಮಾಡೋದು ಹೇಗೆ ಅಂತ ಹೇಳಿಕೊಡೋರು ಆರ್‌ಎಸ್‌ಎಸ್‌ನವ್ರು. ಸ್ವತಂತ್ರ ಭಾರತದ ಆಶಯಗಳಿಗೆ ವಿರೋಧ ಇರೋದನ್ನೇ ಹೇಳಿಕೊಡ್ತಾರೆ. ನಾವು ಕವಲು ದಾರಿಯಲ್ಲಿದ್ದೀವಿ. ಒಂದು ಕಡೆ ಆರ್‌ಎಸ್‌ಎಸ್ ಸಿದ್ಧಾಂತ, ಇನ್ನೊಂದು ಕಡೆ ಗಾಂಧಿ ಸಿದ್ಧಾಂತ. ಯಾವ ಕಡೆ ನಾವು ಹೋಗಬೇಕು ಅಂತ ಆಲೋಚನೆ ಮಾಡಬೇಕು ಎಂದು ಹೇಳಿದರು.

ಮೋಹನ್ ಭಾಗವತ್ ಅವರು ವಿದೇಶದಲ್ಲಿ ಹೋಗಿ, ಮುಸ್ಲಿಮರನ್ನು ವಿರೋಧಿಸೋರು ಹಿಂದೂಗಳೇ ಅಲ್ಲ ಅಂತಾರೆ. ಈ ಮಾತನ್ನು ಭಾರತದಲ್ಲಿ ಹೇಳಿ ಸ್ವಾಮಿ, ವಿದೇಶದಲ್ಲಿ ಹೇಳೋದಲ್ಲ. ಆರ್‌ಎಸ್‌ಎಸ್‌ನವ್ರು ಮೀಸಲಾತಿ ವಿರುದ್ಧ ಜೆನ್-ಝೀಗಳನ್ನು ಎತ್ತಿ ಕಟ್ಟಿದ್ದಾರೆ ಎಂದು ಆರೋಪಿಸಿದರು. ಗಾಂಧಿಯನ್ನು ಕೊಂದ ನಾಥೂರಾಮ್ ಗೋಡ್ಸೆ ಆರ್‌ಎಸ್‌ಎಸ್ ಕಾರ್ಯಕರ್ತ ಅಲ್ಲ ಅಂತ ವಾದ ಮಾಡಿದರು.

## ಚರ್ಚೆಗೆ ಗ್ರಾಸವಾದ ಸಚಿವ ಬಸವರಾಜ ರಾಯರೆಡ್ಡಿ ನಡೆ

• **ಉದಯವಾಹಿನಿ, ಬೆಂಗಳೂರು**

ಇನಾಂ ಭೂಮಿ ವ್ಯಾಪ್ತಿಯಲ್ಲಿರುವ ಕೊಪ್ಪಳ ಜಿಲ್ಲೆ ಕುಕನೂರು ಪಟ್ಟಣದಲ್ಲಿರುವ ರುದ್ರಮುನೇಶ್ವರ ದೇವಸ್ಥಾನದ ಜಾಗದಲ್ಲಿ ಕುಕನೂರು ತಾಲ್ಲೂಕು ಕಚೇರಿ ನಿರ್ಮಾಣಕ್ಕೆ ಸರ್ಕಾರ ಮುಂದಾಗಿದ್ದು, ಕಚೇರಿ ನಿರ್ಮಾಣಕ್ಕೆ ಅಡಿಗಲ್ಲು ಹಾಕಲಾಗಿದೆ. ದೇಗುಲ ಅಥವಾ ಅರ್ಚಕರಿಗೆ ನೀಡಿದ್ದ ಇನಾಂ ಭೂಮಿಯಲ್ಲಿ ಸರ್ಕಾರಿ ಕಟ್ಟಡ ನಿಮರ್ಮಾಣ ವಿಚಾರವೀಗ ಹೊಸ ವಿವಾದಕ್ಕೆ ಕಾರಣವಾಗಿದೆ. ಆದರೆ ಈ ಬಗ್ಗೆ ಪ್ರತಿಕ್ರಿಯಿಸಿರುವ ಸಚಿವ ಬಸವರಾಜ ರಾಯರೆಡ್ಡಿ ಮುಜರಾಯಿ ಇಲಾಖೆ ಭೂಮಿಯನ್ನ ಸರ್ಕಾರಿ ಕೆಲಸಕ್ಕೆ ಬಳಸಬಹುದು. ಭೂಮಿ ಕೊಡುವುದಾದರೆ ನಾನೇ ಪೂಜೆ ಮಾಡುತ್ತೇನೆ. ಬೆಂಗಳೂರಲ್ಲಿ ನನಗೂ ಎರಡು ಎಕರೆ ಕೊಡಿ ಎಂದಿದ್ದಾರೆ. ರುದ್ರಮುನೇಶ್ವರ ಮಠದ ಆಸ್ತಿಯಲ್ಲಿ ಪ್ರಜಾಸೌಧ ನಿರ್ಮಾಣಕ್ಕೆ ಅಂದಿನ ಜಿಲ್ಲಾಧಿಕಾರಿ ಸರ್ಕಾರಕ್ಕೆ ಪ್ರಪೋಸಲ್ ಕಳುಹಿಸಿದ್ದರು. ಅದಕ್ಕೀಗ ಸರ್ಕಾರ ಅಪ್ರೂವಲ್ ಕೊಟ್ಟಿದೆ.

## 30,671 ಗ್ರಾಮಗಳಲ್ಲಿ ಸಮೀಕ್ಷೆ: 14.18 ಲಕ್ಷ ಅಂತರ್ಜಲ ಯೋಜನೆ, 38,960 ಜಲಮೂಲಗಳ ಗಣತಿ

• **ಉದಯವಾಹಿನಿ, ಬೆಂಗಳೂರು**

7ನೇ ಸಣ್ಣ ನೀರಾವರಿ ಗಣತಿ ಹಾಗೂ 2ನೇ ಜಲಮೂಲಗಳ ಗಣತಿಯಲ್ಲಿ ರಾಜ್ಯದ 14,18,894 ಅಂತರ್ಜಲ ಯೋಜನೆಗಳು, 77,573 ಮೇಲ್ಮೈ ಜಲ ಯೋಜನೆಗಳು ಹಾಗೂ 38,960 ಜಲಮೂಲಗಳನ್ನು ದಾಖಲಿಸಲಾಗಿದೆ ಎಂದು ಸಣ್ಣ ನೀರಾವರಿ ಸಚಿವ ಡಾ. ಅಜಯ್ ಧರ್ಮಸಿಂಗ್ ತಿಳಿಸಿದ್ದಾರೆ. ಈ ಸಂಬಂಧ ಮಾಧ್ಯಮ ಪ್ರಕಟಣೆ ಹೊರಡಿಸಿರುವ ಅವರು, ರಾಜ್ಯದ ಜಲಸಂಪನ್ಮೂಲಗಳ ವಾಸ್ತವ ಸ್ಥಿತಿಗತಿಯನ್ನು ಅರಿತು, ಭವಿಷ್ಯದ ನೀರಾವರಿ ಹಾಗೂ ಜಲಸಂರಕ್ಷಣಾ ಯೋಜನೆಗಳನ್ನು ವೈಜ್ಞಾನಿಕವಾಗಿ ರೂಪಿಸಲು ಮಹತ್ವದ್ದಾಗಿರುವ 7ನೇ ಸಣ್ಣ ನೀರಾವರಿ ಗಣತಿ ಹಾಗೂ 2ನೇ ಜಲಮೂಲಗಳ ಗಣತಿಯ ಕ್ಷೇತ್ರಕಾರ್ಯವನ್ನು ಕರ್ನಾಟಕ ಯಶಸ್ವಿಯಾಗಿ ಪೂರ್ಣಗೊಳಿಸಿದೆ. ಗಣತಿಯಲ್ಲಿ ರಾಜ್ಯದ 14,18,894 ಅಂತರ್ಜಲ ಯೋಜನೆಗಳು, 77,573 ಮೇಲ್ಮೈ ಜಲ ಯೋಜನೆಗಳು ಹಾಗೂ 38,960 ಜಲಮೂಲಗಳನ್ನು ದಾಖಲಿಸಲಾಗಿದೆ ಎಂದಿದ್ದಾರೆ.ಕೇಂದ್ರ ಸರ್ಕಾರದ ಜಲಶಕ್ತಿ ಸಚಿವಾಲಯದ ಸಂಪೂರ್ಣ ಆರ್ಥಿಕ ನೆರವಿನೊಂದಿಗೆ 2023-24ನೇ ಸಾಲನ್ನು ಆಧಾರ ವರ್ಷವನ್ನಾಗಿಟ್ಟುಕೊಂಡು ಕೈಗೊಂಡ ಈ ಬೃಹತ್ ಗಣತಿಯ ಕ್ಷೇತ್ರಕಾರ್ಯವು 2026ರ ಆಗಸ್ಟ್‌ನಲ್ಲಿ ಪೂರ್ಣಗೊಂಡಿದೆ. ಅಂತರ್ಜಲ ಹಾಗೂ ಮೇಲ್ಮೈ ಜಲ



**ರಾಜ್ಯದ 30,671 ಗ್ರಾಮಗಳು, 300 ನಗರ ಸ್ಥಳೀಯ ಸಂಸ್ಥೆಗಳು 7,128 ನಗರ ವಾರ್ಡ್‌ಗಳನ್ನು ಗಣತಿ ವ್ಯಾಪ್ತಿಗೆ ಒಳಪಡಿಸಲಾಗಿದೆ ಎಂದು ತಿಳಿಸಿದ್ದಾರೆ. ಸಣ್ಣ ನೀರಾವರಿ ಗಣತಿಯಲ್ಲಿ 2,000 ಹೆಕ್ಟೇರ್‌ವರೆಗಿನ ನೀರಾವರಿ ಸಾಮರ್ಥ್ಯ ಹೊಂದಿರುವ ಯೋಜನೆಗಳ ಮಾಹಿತಿಯನ್ನು ದಾಖಲಿಸಲಾಗಿದ್ದು, ಜಲಮೂಲಗಳ ಗಣತಿಯಲ್ಲಿ ಕೆರೆ, ಕಟ್ಟೆ ಸೇರಿದಂತೆ ವಿವಿಧ ಜಲಮೂಲಗಳ ಸಮಗ್ರ ಮಾಹಿತಿಯನ್ನು ಸಂಗ್ರಹಿಸಲಾಗಿದೆ.**

ಯೋಜನೆಗಳ ಸ್ಥಿತಿಗತಿ ಏನು ಎಂಬ ನಿಖರ ಮಾಹಿತಿ ಲಭ್ಯವಾದರೆ, ಮುಂದಿನ ನೀರಾವರಿ ಮತ್ತು ಜಲಸಂರಕ್ಷಣಾ ಯೋಜನೆಗಳನ್ನು ಹೆಚ್ಚು ವೈಜ್ಞಾನಿಕವಾಗಿ ಹಾಗೂ ಅಗತ್ಯಕ್ಕೆ ಅನುಗುಣವಾಗಿ ರೂಪಿಸಲು ಸಾಧ್ಯವಾಗುತ್ತದೆ ಎಂದಿದ್ದಾರೆ.

ಈ ಅಂಕಿ - ಅಂಶಗಳು ಕೇವಲ ಗಣತಿ ವರದಿಗೆ ಸೀಮಿತವಾಗಬಾರದು. ಬರಪೀಡಿತ ಪ್ರದೇಶಗಳಲ್ಲಿ ಜಲಭದ್ರತೆ ಕಲ್ಪಿಸುವುದು, ಕೆರೆಗಳ ಪುನಶ್ಚೇತನ, ಅಂತರ್ಜಲ ಮರು ಪೂರಣ, ಚೆಕ್ ಡ್ಯಾಂಗಳ ನಿರ್ಮಾಣ ಹಾಗೂ ಕೆರೆ ತುಂಬಿಸುವ ಯೋಜನೆಗಳಿಗೆ ಆದ್ಯತೆ ನಿಗದಿಪಡಿಸಲು ಈ ದತ್ತಾಂಶವನ್ನು ಪರಿಣಾಮಕಾರಿಯಾಗಿ ಬಳಸಬೇಕು.

# ಧರ್ಮ ಸಂಕಟದಲ್ಲಿ 'ವಿಘ್ನ' ವಿನಾಶಕ





ಶಾಸಕ ಪಿ.ರವಿಕುಮಾರ್‌ಗೌಡ ಗಣಿಗ ಅವರು ಬೃಹತ್ ಪರದೆಯನ್ನು ಸರಿಸಿ ಗಣೇಶಮೂರ್ತಿ ಅನಾವರಣ ಮಾಡುವಾಗ ರಿಪೀಸ್ ಪಟ್ಟಿ ಬಿದ್ದು ಹಣೆಗೆ ಪೆಟ್ಟಾಗಿದೆ. ಪರದೆ ಜಾರಬಾರದೆಂದು ರಿಪೀಸ್ ಪಟ್ಟಿ ಹೊಡೆದು ಸ್ಕ್ರೀನ್ ಅಳವಡಿಸಲಾಗಿತ್ತು. ಶಾಸಕರು ಸ್ವಲ್ಪ ಬಲವಾಗಿ ಪರದೆ ಎಳೆದ ಪರಿಣಾಮ ಮೇಲಿಂದ ರಿಪೀಸ್ ಪಟ್ಟಿ ಜಾರಿ ಶಾಸಕರ ಹಣೆ ಮೇಲೆ ಬಿದ್ದಿದೆ.

### ಪರದೆ ಸರಿಸುವಾಗ ಹಣೆಗೆ ಬಡಿದ ಪಟ್ಟಿ

ಈ ಸಂದರ್ಭದಲ್ಲಿ ರಿಪೀಸ್ ಪಟ್ಟಿಯಲ್ಲಿದ್ದ ಮೊಳೆ ಹಣೆಗೆ ತಾಕಿದ ಪರಿಣಾಮ ಶಾಸಕರ ಹಣೆಗೆ ಪೆಟ್ಟು ಬಿದ್ದು, ರಕ್ತ ಚಿಮ್ಮಿದೆ.

ತಕ್ಷಣವೇ ಅವರನ್ನು ನಗರದ ಖಾಸಗಿ ಆಸ್ಪತ್ರೆಗೆ ದಾಖಸಿಸಿ ಚಿಕಿತ್ಸೆ ಕೊಡಲಾಯಿತು. ಆಸ್ಪತ್ರೆಯಲ್ಲಿ ಶಾಸಕ ರವಿಕುಮಾರ್ ಗಣಿಗ ಅವರಿಗೆ ಸಿಟಿ ಸ್ಕ್ಯಾನ್ ಮಾಡಿ, ಬಿಪಿ, ಶುಗರ್ ಇನ್ನಿತರೆ ಪ್ರಾಥಮಿಕ ತಪಾಸಣೆಗಳನ್ನು ಸುಮಾರು ಒಂದು ಗಂಟೆಗಳ ಕಾಲ ನಡೆಸಿ, ಪೆಟ್ಟಾಗಿರುವ ಜಾಗಕ್ಕೆ ಸಣ್ಣ ಪ್ರಮಾಣದ ಹೊಲಿಗೆ ಹಾಕಿದ ನಂತರ ವಿಶ್ರಾಂತಿ ಪಡೆಯುವಂತೆ ವೈದ್ಯರು ಸಲಹೆ ನೀಡಿದರು.

**1** ಗಣೇಶ ಸಮಿತಿ ಯುವಕರಿಗೆ ಬೆದರಿಕೆ ಹಾಕಿದ ಇನ್ಸ್‌ಪೆಕ್ಟರ್ ಧನಂಜಯ್ ಅಮಾನತಿಗೆ ಆಗ್ರಹ.

**2** ಕಾಂಗ್ರೆಸ್ ಸರ್ಕಾರದ ವಿರುದ್ಧ ಟ್ವೀಟ್ ಮೂಲಕ ಹರಿದಾಯ್ದ ಕೇಂದ್ರ ಸಚಿವ ಜೋಶಿ.

**3** ಗಣೇಶೋತ್ಸವ ಆಚರಣೆಗೆ ಅಡ್ಡಿಪಡಿಸುವುದನ್ನು ಯಾವುದೇ ಕಾರಣಕ್ಕೂ ಸಹಿಸುವುದಿಲ್ಲವೆಂದು ಕಟ್ಟುನಿಟ್ಟಿನ ಎಚ್ಚರಿಕೆ.

### ಭಾರಿ ಹೈಡ್ರಾಮಾ

ಟಿ. ನರಸೀಪುರದಲ್ಲಿ ಗಣೇಶ ಪ್ರತಿಷ್ಠಾಪನೆ ಮತ್ತು ಮೆರವಣಿಗೆಗೆ ಸಂಬಂಧಿಸಿದಂತೆ ಇನ್ಸ್‌ಪೆಕ್ಟರ್ ನೀಡಿದ ಎಚ್ಚರಿಕೆಯು ರಾಜಕೀಯ ವಿವಾದಕ್ಕೆ ಕಾರಣವಾಗಿದೆ. ಇನ್ಸ್‌ಪೆಕ್ಟರ್ ಹಿಂದೂ ಕಾರ್ಯಕರ್ತರಿಗೆ ಧಮ್ಕಿ ಹಾಕಿದ್ದಾರೆ ಎಂದು ಆರೋಪಿಸಿ ಬಿಜೆಪಿ ಕಾರ್ಯಕರ್ತರು ಇನ್ಸ್‌ಪೆಕ್ಟರ್ ವಿರುದ್ಧ ಪ್ರತಿಭಟನೆ ನಡೆಸಿದ್ದಾರೆ . ಮಾಜಿ ಸಂಸದ ಪ್ರತಾಪ್ ಸಿಂಹ ಅವರ ಹೇಳಿಕೆ ಖಂಡಿಸಿ ದಲಿತಪರ ಸಂಘಟನೆಗಳು ಮಾಜಿ ಸಂಸದರ ಬಂಧನಕ್ಕೆ ಆಗ್ರಹಿಸಿ ಪ್ರತಿಭಟನೆ ನಡೆಸಿವೆ. ಹೀಗಾಗಿ ಟಿ. ನರಸೀಪುರದಲ್ಲಿ ಭಾರಿ ಹೈಡ್ರಾಮಾ ನಡೆದಿದೆ.

• ಗಣೇಶೋತ್ಸವಕ್ಕೆ ಪೊಲೀಸ್ ಷರತ್ತು • ಗಣೇಶೋತ್ಸವ ವಿವಾದ • ಮಂಡ್ಯ ನಗರದಲ್ಲಿ ಗಣೇಶನ ಮೂರ್ತಿ • ಆಕಸ್ಮಿಕವಾಗಿ ಶಾಸಕ ರವಿಕುಮಾರ್ ಗಣಿಗ ಹಣೆಗೆ ಏಟು ಗಣೇಶನ ಭಕ್ತರ ತಂಟೆಗೆ ಬರುವ ಪೊಲೀಸರ ಗ್ರಹಚಾರವನ್ನು ನಾವು ಬಿಡಿಸುತ್ತೇವೆ: ಆರ್.ಅಶೋಕ್ • ನಾಮ ಹಾಕಿಕೊಂಡು ಓಡಾಡುವ ಡಿಕೆಶಿ ಈಗ ಹಿಂದೂ ಪರ ಎಂದು ತೋರಿಸಲಿ

• **ಉದಯವಾಹಿನಿ, ಬೆಂಗಳೂರು**

ರಾಜ್ಯದಲ್ಲಿ ಗಣೇಶನ ಭಕ್ತರ ತಂಟೆಗೆ ಬರುವ ಪೊಲೀಸರ ಗ್ರಹಚಾರವನ್ನು ನಾವು ಬಿಡಿಸುತ್ತೇವೆ. ಸದಾ ಹಿಂದೂ ಎಂದು ನಾಟಕವಾಡುವ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಈಗ ಭಕ್ತರಿಗೆ ಬೆದರಿಕೆ ಹಾಕಿದ ಪೊಲೀಸ್ ಅಧಿಕಾರಿಯ ವಿರುದ್ಧ ಕ್ರಮವಹಿಸಲಿ ಎಂದು ಪ್ರತಿಪಕ್ಷ ನಾಯಕ ಆರ್. ಅಶೋಕ್ ಆಗ್ರಹಿಸಿದರು. ಟಿ. ನರಸೀಪುರ ಪೊಲೀಸ್ ಠಾಣೆಯ ಮುಂದೆ ಇನ್ಸ್‌ಪೆಕ್ಟರ್ ಧನಂಜಯ ಅಮಾನತಿಗೆ ಆಗ್ರಹಿಸಿ ಮಾತನಾಡಿದ ಅವರು, ಮುಸ್ಲಿಮರ ಮಸೀದಿ ಮುಂದೆ ಹೋಗಬಾರದು, ಗ್ರಹಚಾರ ಬಿಡಿಸುತ್ತೇನೆ ಎಂದು ಆತ ಹೇಳಿದ್ದಾನೆ. ಗಣೇಶೋತ್ಸವ ಆಚರಣೆ ಮಾಡುವವರು ರೌಡಿಗಳಲ್ಲ. ಇವರಿಗೆ ಧಮ್ ಇದ್ದರೆ ಮಸೀದಿಯಿಂದ ಕಲ್ಲು ಹೊಡೆಯುವವರಿಗೆ, ಬಾಂಬ್ ಹಾಕುವವರಿಗೆ ಬೆದರಿಕೆ ಹಾಕಬೇಕಿತ್ತು. ಇಂತಹ ದುರಹಂಕಾರಿ ಪೊಲೀಸ್ ಅಧಿಕಾರಿಯನ್ನು ಇಟ್ಟುಕೊಂಡು ಇಲಾಖೆಗೆ ನಾಚಿಕೆಯಾಗಬೇಕು ಎಂದು ಆಕ್ರೋಶ ಹೊರಹಾಕಿದರು.

ನೆಮ್ಮದಿಯಿಂದ ಗಣೇಶೋತ್ಸವ ಆಚರಿಸಲು ಕೂಡ ಕಾಂಗ್ರೆಸ್ ಸರ್ಕಾರ ಅವಕಾಶ ನೀಡುತ್ತಿಲ್ಲ. ಬಾಲ ಗಂಗಾಧರ ತಿಲಕ್ ಅವರು ಸ್ವಾತಂತ್ರ್ಯ ಹೋರಾಟದ ಭಾಗವಾಗಿ ಈ ಆಚರಣೆಯನ್ನು ತಂದರು. ಕೇವಲ ಕರ್ನಾಟಕ ಮಾತ್ರವಲ್ಲದೆ, ಜಗತ್ತಿನಾದ್ಯಂತ ಗಣೇಶೋತ್ಸವ ಆಚರಣೆ ನಡೆಯುತ್ತಿದೆ. ಆದರೆ ಮೈಸೂರಿನ ಟಿ. ನರಸೀಪುರದಲ್ಲಿ ಒಬ್ಬ ಅಹಂಕಾರಿ ಪೊಲೀಸ್ ಅಧಿಕಾರಿ ಹಿಂದೂ ವಿರೋಧಿ ಹೇಳಿಕೆ ನೀಡಿದ್ದಾನೆ ಎಂದು ಆರೋಪಿಸಿದರು. ನಾವು ಪಾಕಿಸ್ತಾನದಲ್ಲಿಲ್ಲ. ಗಣೇಶ ಮೊದಲು ಬಂದನೋ, ಮಸೀದಿ ಮೊದಲು ಬಂತೋ ಎಂದು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಹೇಳಬೇಕು. ಗಣೇಶನ ಪ್ರತಿಷ್ಠಾಪನೆ ಮಾಡಲು ಗ್ರಾಮ ಪಂಚಾಯಿತಿ, ಪಾಲಿಕೆ, ಜಿಲ್ಲಾಧಿಕಾರಿ ಮೊದಲಾದ ಕಡೆ ಅಲೆಯಬೇಕು. ಮಸೀದಿ ಮುಂದೆ ಹೋದಾಗ ಮಾತ್ರ ಗಲಾಟೆಯಾಗುತ್ತದೆ. ಆದರೆ ಚರ್ಚ್ ಮುಂದೆ ಹೋದಾಗ, ಜೈನರ ಮಂದಿರ, ಸಿಖ್ಖರ ದೇವಾಲಯಗಳ ಮುಂದೆ ಮೆರವಣಿಗೆ ಹೋದಾಗ ಗಲಾಟೆಯಾಗುವುದಿಲ್ಲ ಎಂದು ಹೇಳಿದರು.

ಇಷ್ಟು ನಿರ್ದಿಷ್ಟ ರಸ್ತೆಗಳನ್ನು ಮುಸ್ಲಿಮರಿಗೆ ಬರೆದುಕೊಟ್ಟಿದ್ದೇವೆ ಎಂದು ತಿಳಿಸಲಿ. ಇಲ್ಲಿ ಭಾರತದ ಸಂವಿಧಾನ ಇದೆಯೇ ಹೊರತು, ಪಾಕಿಸ್ತಾನದ ಸಂವಿಧಾನವಲ್ಲ. ಮುಸ್ಲಿಮರು ಉರುಸ್ ಮಾಡುವಾಗ ದೇವಾಲಯಗಳ ಮುಂದೆಯೇ ಮೆರವಣಿಗೆ ಹೋಗುತ್ತಾರೆ. ಆದರೆ ಹಿಂದೂಗಳು ಎಂದಿಗೂ ದೇವಾಲಯದಲ್ಲಿ ಕುಳಿತು ಕಲ್ಲು ಹೊಡೆಯುವುದಿಲ್ಲ. ಇಲ್ಲಿ ತಾಲಿಬಾನ್ ಆಡಳಿತ ನಡೆಯುತ್ತಿದೆ ಎಂದರು.ಒಬ್ಬ ಪೊಲೀಸ್ ಗಣೇಶ ಭಕ್ತರನ್ನು ಕರೆದು ಬೆದರಿಕೆ ಹಾಕುತ್ತಾನೆ ಎಂದರೆ, ಅದಕ್ಕೆ ಗೃಹ ಸಚಿವ ಪ್ರಿಯಾಂಕ್ ಖರ್ಗೆ ಅವರ ಬೆಂಬಲವಿದೆ ಎಂದೇ ಅರ್ಥ. ಹಿಂದೂಗಳು ತಮ್ಮದೇ ದೇಶದಲ್ಲಿ ಸ್ವತಂತ್ರವಾಗಿ ಆಚರಣೆ ಮಾಡಲು ಆಗುತ್ತಿಲ್ಲ. ಸಿಎಂ ಡಿ.ಕೆ. ಶಿವಕುಮಾರ್ ಕಡೆ ಓಡಾಡಿ ನಾಮ ಎಳೆದುಕೊಳ್ಳುತ್ತಾರೆ.

ಆದರೆ ಹಿಂದೂಗಳಿಗೆ ಬೆಂಬಲ ನೀಡಲ್ಲ ಎಂದು ಆಕ್ರೋಶ ವ್ಯಕ್ತಪಡಿಸಿದರು.ಬಾಂಗ್ಲಾ ನಿವಾಸಿಗಳು, ಬಾಂಬ್ ಹಾಕುವ ಉಗ್ರರನ್ನು ಪೊಲೀಸರು ಸೆರೆಹಿಡಿಯಬೇಕು. ಅದನ್ನು ಬಿಟ್ಟು ಭಕ್ತರಿಗೆ ಧಮಕಿ ಹಾಕಬಾರದು. ಮುಖ್ಯಮಂತ್ರಿಗೆ ಹಿಂದೂ ಧರ್ಮದ ಮೇಲೆ ಗೌರವವಿದ್ದರೆ ಆ ಪೊಲೀಸ್ ಅಧಿಕಾರಿಯನ್ನು ಅಮಾನತು ಮಾಡಲಿ ಎಂದು ಆಗ್ರಹಿಸಿದರು.ಪೊಲೀಸರು ಭಕ್ತರಿಗೆ ಕಿರುಕುಳ ಕೊಡಲು ಮುಂದಾದರೆ ಅವರ ಗ್ರಹಚಾರವನ್ನು ನಾವು ಬಿಡಿಸುತ್ತೇವೆ. ಇನ್ನು ಮುಂದೆ ರಸ್ತೆಗಳಲ್ಲಿ ಓಡಾಡುವವರಿಗೂ ಬೆದರಿಕೆ ಹಾಕುತ್ತಾರೆ. ಕಾಂಗ್ರೆಸ್‌ನವರು ಬ್ರಿಟಿಷರಿಗಿಂತಲೂ ಕೀಳಾಗಿದ್ದಾರೆ. ಮಸೀದಿಗಳಲ್ಲಿ ಮೈಕ್ ಬಳಸುತ್ತಾರೆ.

ಧ್ವನಿವರ್ಧಕಗಳ ಬಳಕೆ ಬಗ್ಗೆ ಕೋರ್ಟ್ ಆದೇಶವಿದೆ. ಅದನ್ನು ಸರ್ಕಾರ ಪಾಲಿಸಬೇಕು ಎಂದು ಹೇಳಿದರು.ಜನರು ಮೊದಲು ಎಚ್ಚರಗೊಳ್ಳಬೇಕು. ಇನ್ನು ಮುಂದೆ ಮನೆಯಲ್ಲಿ ಮಾಡುವ ಗಣೇಶೋತ್ಸವ ಆಚರಣೆಗೂ ಕಾಂಗ್ರೆಸ್ ನಿಯಮಗಳನ್ನು ಹೇರಲಿದೆ. ಚುನಾವಣೆ ಬಂದಾಗ ಹಿಂದೂ ಆಗುವ ಡಿ.ಕೆ. ಶಿವಕುಮಾರ್, ಉಳಿದ ಸಮಯದಲ್ಲಿ ಮುಸ್ಲಿಮರ ಬ್ರದರ್ ಆಗುತ್ತಾರೆ ಎಂದು ಆರ್. ಅಶೋಕ್ ವಾಗ್ದಾಳಿ ನಡೆಸಿದರು. ಬಿಜೆಪಿ ದಲಿತ ವಿರೋಧಿ ಎಂದು ಕಾಂಗ್ರೆಸ್‌ನವರು ಹೇಳುತ್ತಿದ್ದರು. ಕೆ.ಎನ್. ರಾಜಣ್ಣ ಅವರನ್ನು ಸಂಪುಟದಿಂದ ವಜಾ ಮಾಡಿದಾಗಲೇ ಯಾರು ದಲಿತ ವಿರೋಧಿ ಎಂದು ಅರ್ಥವಾಗಬೇಕಿತ್ತು. ಈಗ ಸಚಿವ ಸತೀಶ್ ಜಾರಕಿಹೊಳಿ ಅವರಿಗೆ ಕಾಂಗ್ರೆಸ್‌ನವರೇ ದಲಿತ ವಿರೋಧಿ ಎಂದು ಅರಿವಾಗಿದೆ ಎಂದು ಹೇಳಿದರು.



### ಅಮಾನತಿಗೆ ಪ್ರಲ್ಹಾದ್ ಜೋಶಿ ಒತ್ತಾಯ

ಮೈಸೂರು ಜಿಲ್ಲೆಯ ಟಿ. ನರಸೀಪುರದಲ್ಲಿ ಗಣೇಶೋತ್ಸವ ಆಚರಣೆ ವೇಳೆ ಯುವಕರಿಗೆ ಬೆದರಿಕೆ ಹಾಕಿದ ಆರೋಪಕ್ಕೆ ಗುರಿಯಾಗಿರುವ ಇನ್ಸ್‌ಪೆಕ್ಟರ್ ಧನಂಜಯ್ ಅವರನ್ನು ತಕ್ಷಣವೇ ಸೇವೆಯಿಂದ ಅಮಾನತುಗೊಳಿಸಬೇಕೆಂದು ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ ಅವರು ರಾಜ್ಯ ಕಾಂಗ್ರೆಸ್ ಸರ್ಕಾರವನ್ನು ಆಗ್ರಹಿಸಿದ್ದಾರೆ. ಭಕ್ತಿಭಾವದಿಂದ ಹಬ್ಬ ಆಚರಿಸಲು ಬಂದ ಯುವಕರಿಗೆ ಸಾರ್ವಜನಿಕವಾಗಿ ಇನ್ಸ್‌ಪೆಕ್ಟರ್ ಧಮ್ಕಿ ಹಾಕಿರುವುದು ಅಕ್ಷಮ್ಯ ಅಪರಾಧ ಎಂದು ಅವರು ಟ್ವೀಟ್ ಮೂಲಕ ತೀವ್ರ ಆಕ್ರೋಶ ಹೊರಹಾಕಿದ್ದಾರೆ. ನಮ್ಮದೇ ದೇಶದಲ್ಲಿ ಮತ್ತು ನಮ್ಮದೇ ನೆಲದಲ್ಲಿ ವಿಜೃಂಭಣೆಯಿಂದ ಗಣೇಶೋತ್ಸವ ಆಚರಿಸಲು ಹಿಂದೂಗಳು ಗೋಗರೆಯಬೇಕಾದ ಪರಿಸ್ಥಿತಿ ಬಂದಿರುವುದು ಅತ್ಯಂತ ದುರ್ದೈವದ ಸಂಗತಿಯಾಗಿದೆ ಎಂದು ಜೋಶಿ ಆತಂಕ ವ್ಯಕ್ತಪಡಿಸಿದ್ದಾರೆ. ಸಾರ್ವಜನಿಕವಾಗಿ ಯುವಕರಿಗೆ ಬೆದರಿಕೆ ಹಾಕುವಷ್ಟು ಧೈರ್ಯ ಅಧಿಕಾರಿಗೆ ಎಲ್ಲಿಂದ ಬಂತು? ಇದು ಪೊಲೀಸ್ ಇಲಾಖೆಗೆ ಗೃಹ ಸಚಿವರು ನೀಡಿದ ಅಧಿಕಾರವೋ ಅಥವಾ ಡಿ.ಕೆ. ಶಿವಕುಮಾರ್ ಅವರ ನೇತೃತ್ವದ ಕಾಂಗ್ರೆಸ್ ಸರ್ಕಾರದ ತುಷ್ಟಿಕರಣ ರಾಜಕಾರಣದ ಫರ್ಮಾನೋ ಎಂದು ಅವರು ತೀವ್ರವಾಗಿ ಚಾಟಿ ಬೀಸಿದ್ದಾರೆ.



ಗಣಪತಿ ಕೂರಿಸುವ ಯುವಕರಿಗೆ ಇನ್ಸ್‌ಪೆಕ್ಟರ್ ಧಮ್ಕಿ ವಿಚಾರಕ್ಕೆ ಟಿ.ನರಸೀಪುರದ ಸರ್ಕಾರಿ ಅತಿಥಿಗೃಹದಲ್ಲಿ ಪೊಲೀಸ್ ಅಧಿಕಾರಿಗಳು ಬಿಜೆಪಿ ನಾಯಕರ ಸಭೆ ನಡೆದಿದ್ದು, ಸಭೆಯಲ್ಲಿ ಇನ್ಸ್‌ಪೆಕ್ಟರ್ ಸಸ್ಪೆಂಡ್‌ಗೆ ಬಿಜೆಪಿ ನಾಯಕರು ಪಟ್ಟು ಹಿಡಿದಿದ್ದಾರೆ. ಹಿರಿಯ ಪೊಲೀಸ್ ಅಧಿಕಾರಿಗಳು ಹಿಂದೇಟು ಹಾಕಿದ್ದಾರೆ.

### ಶಾಂತಿ ಸಭೆ ವಿಫಲ

ಈ ಹಿನ್ನೆಲೆಯಲ್ಲಿ ಸಭೆ ವಿಫಲವಾಗಿದ್ದು, ಟಿ ನರಸೀಪುರ ಠಾಣೆ ಮುಂದೆ ಅಹೋರಾತ್ರಿ ಧರಣಿ ನಡೆಸಲು ಮಾಜಿ ಸಂಸದ ಪ್ರತಾಪ್ ಸಿಂಹ ಕರೆ ಕೊಟ್ಟಿದ್ದಾರೆ.ಪೊಲೀಸ್ ಅಧಿಕಾರಿಗಳ ಜೊತೆಗಿನ ಸಭೆ ಬಳಿಕ ಮಾತನಾಡಿದ ಮಾಜಿ ಸಂಸದ ಪ್ರತಾಪ್ ಸಿಂಹ, ಟಿ.ನರಸೀಪುರ ಪಿಐ ಧನಂಜಯ ಇಸ್ಪೀಟ್ ದಂಧೆ ನಡೆಸುತ್ತಿದ್ದಾರೆ. ನರಸೀಪುರದ ಅಕ್ರಮಗಳ ಕಿಂಗ್‌ಪಿನ್ ಪಿಐ ಧನಂಜಯ. ಇನ್ಸ್‌ಪೆಕ್ಟರ್ ಧನಂಜಯರನ್ನ ಸಸ್ಪೆಂಡ್ ಮಾಡ್ಬೇಕು. ಸಸ್ಪೆಂಡ್ ಆಗೋವರೆಗೂ ಧರಣಿ ನಡಿಸುತ್ತೇವೆ ಎಂದು ಹೇಳಿದರು. ಮುನ್ನ ಗಣೇಶ ಮೆರವಣಿಗೆ ವೇಳೆ ಮಸೀದಿ ಮುಂದೆ ಪಟಾಕಿ ಸಿಡಿಸಿದರೆ ಗ್ರಹಚಾರ ಬಿಡಿಸ್ತೀನಿ ಎಂದು ಹೇಳಿದ್ದ ಇನ್ಸ್‌ಪೆಕ್ಟರ್ ಧನಂಜಯ ವಿರುದ್ಧ ಕ್ರಮಕ್ಕೆ ಆಗ್ರಹಿಸಿ ಟಿ.ನರಸೀಪುರ ಠಾಣೆ ಮುಂದೆ ಬಿಜೆಪಿ ಕಾರ್ಯಕರ್ತರು ಪ್ರತಿಭಟನೆ ನಡೆಸಿದ್ದರು.

# ಪರಮಾಣು ಅಪಾಯ, ಸಂಘರ್ಷದ ಬಿಕ್ಕಟ್ಟಿನ ಬಗ್ಗೆ ಬ್ರಿಕ್ಸ್ ನಾಯಕರಿಂದ ಕಳವಳ

## ಬ್ರಿಕ್ಸ್ ಶೃಂಗಸಭೆಯ 2ನೇ ದಿನ: ಶೃಂಗದ ವಿಷಯ ವಸ್ತುವಿನ ಕುರಿತು ನಾಯಕರಿಂದ ಮುಕ್ತ ಸಮಾಲೋಚನೆ!

• **ಉದಯವಾಹಿನಿ,** ನವದೆಹಲಿ

ಇಲ್ಲಿ ನಡೆಯುತ್ತಿರುವ ಬ್ರಿಕ್ಸ್ ಶೃಂಗಸಭೆಯ ಮೊದಲ ದಿನದಂದು ಅಂಗೀಕರಿಸಲಾದ ನವದೆಹಲಿ ಘೋಷಣೆಯಲ್ಲಿ 'ಪರಮಾಣು ಅಪಾಯ ಮತ್ತು ಸಂಘರ್ಷದಿಂದ ಹೆಚ್ಚುತ್ತಿರುವ ಬಿಕ್ಕಟ್ಟಿನ' ಬಗ್ಗೆ ಕಳವಳ ವ್ಯಕ್ತಪಡಿಸಲಾಗಿದೆ. ಸಶಸ್ತ್ರ ಸಂಘರ್ಷದ ಸಂದರ್ಭಗಳಲ್ಲಿಯೂ ಪರಮಾಣು ಸುರಕ್ಷತೆ ಮತ್ತು ಭದ್ರತೆಯನ್ನು ಕಡ್ಡಾಯವಾಗಿ ಕಾಪಾಡಿಕೊಳ್ಳಬೇಕು ಎಂದು ಪ್ರತಿಪಾದಿಸಿರುವ ಬ್ರಿಕ್ಸ್ ನಾಯಕರು, ನಾಗರಿಕ ಮೂಲಸೌಕರ್ಯಗಳು ಹಾಗೂ ಅಂತಾರಾಷ್ಟ್ರೀಯ ಪರಮಾಣು ಶಕ್ತಿ ಸಂಸ್ಥೆಯ ಸಂಪೂರ್ಣ ಸುರಕ್ಷತಾ ಕ್ರಮಗಳ ವ್ಯಾಪ್ತಿಯಲ್ಲಿರುವ ಶಾಂತಿಯುತ ಪರಮಾಣು ಸ್ಥಾವರಗಳ ಮೇಲಿನ ಉದ್ದೇಶಪೂರ್ವಕ ದಾಳಿಗಳನ್ನು ಖಂಡಿಸಲಾಗಿದೆ.

ಮೊದಲ ದಿನದ ಸಭೆಯ ಅಂತ್ಯದಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರು 'ದೆಹಲಿ ಘೋಷಣೆ'ಯ ಅಂಗೀಕಾರವನ್ನು ಪ್ರಕಟಿಸಿದರು. ಈ ವೇಳೆ, ಚೀನಾ ಅಧ್ಯಕ್ಷ ಕ್ಸಿ ಜಿನ್‌ಪಿಂಗ್, ರಷ್ಯಾ ಅಧ್ಯಕ್ಷ ವ್ಲಾಡಿಮಿರ್ ಪುಟಿನ್, ಇರಾನ್ ಅಧ್ಯಕ್ಷ ಮಸೂದ್ ಪೆಜೆಶ್ಕಿಯನ್, ಅಬುಧಾಬಿ ರಾಜಕುಮಾರ ಮೊಹಮ್ಮದ್ ಬಿನ್ ಜಾಯೆದ್ ಅಲ್ ನಹ್ಯಾನ್ ಸೇರಿದಂತೆ ಒಕ್ಕೂಟದ ಇತರ ಉನ್ನತ ನಾಯಕರು ಉಪಸ್ಥಿತರಿದ್ದರು. **ಭಾರತಕ್ಕೆ ರಾಜತಾಂತ್ರಿಕ ಗೆಲುವು:** ಪಶ್ಚಿಮ ಏಷ್ಯಾ ಸಂಘರ್ಷಕ್ಕೆ ಸಂಬಂಧಿಸಿದಂತೆ ಯುನೈಟೆಡ್ ಅರಬ್ ಎಮಿರೇಟ್ಸ್ ಮತ್ತು ಇರಾನ್ ನಡುವೆ ತೀವ್ರ ಭಿನ್ನಾಭಿಪ್ರಾಯಗಳಿದ್ದವು. ಆದರೆ, ಅವುಗಳನ್ನು ಭಾರತ ಯಶಸ್ವಿಯಾಗಿ




ಶಮನಗೊಳಿಸಿ ಎಲ್ಲಾ ದೇಶಗಳ ಒಮ್ಮತದೊಂದಿಗೆ ಜಂಟಿ ಹೇಳಿಕೆಯನ್ನು ಹೊರಡಿಸುವಲ್ಲಿ ಯಶಸ್ವಿಯಾಗಿದೆ. ಇದು ಭಾರತಕ್ಕೆ ಸಿಕ್ಕ ರಾಜತಾಂತ್ರಿಕ ಗೆಲುವು ಎಂದೇ ಬಣ್ಣಿಸಲಾಗಿದೆ. ಅಂತಾರಾಷ್ಟ್ರೀಯ ಪರಮಾಣು ಇಂಧನ ಸಂಸ್ಥೆಯ ಸುರಕ್ಷತಾ ವಲಯದಲ್ಲಿನ ಶಾಂತಿಯುತ ಪರಮಾಣು ನೆಲೆಗಳು ಮತ್ತು ನಾಗರಿಕ ಮೌಲಸೌಕರ್ಯಗಳ ಮೇಲಿನ ಉದ್ದೇಶಪೂರ್ವಕ ದಾಳಿಗಳ ಬಗ್ಗೆ ಬ್ರಿಕ್ಸ್ ನಾಯಕರು ತೀವ್ರ ಕಳವಳ ವ್ಯಕ್ತಪಡಿಸಿದ್ದಾರೆ. ಸಶಸ್ತ್ರ ಸಂಘರ್ಷಗಳ ನಡುವೆಯೂ ಪರಮಾಣು ಸುರಕ್ಷತೆಯನ್ನು ಕಡ್ಡಾಯವಾಗಿ ಕಾಯ್ದುಕೊಳ್ಳಬೇಕು ಎಂದು ಘೋಷಣೆಯಲ್ಲಿ ಉಲ್ಲೇಖಿಸಲಾಗಿದೆ. ಜಾಗತಿಕವಾಗಿ ಹೆಚ್ಚುತ್ತಿರುವ ಪರಮಾಣು ಅಪಾಯಗಳ ಬಗ್ಗೆ ಕಳವಳ ವ್ಯಕ್ತಪಡಿಸಿರುವ ಒಕ್ಕೂಟವು, ವಿಶ್ವಶಾಂತಿ ಮತ್ತು ಸ್ಥಿರತೆಗಾಗಿ ನಿಶ್ಶಸ್ತ್ರೀಕರಣ, ಶಸ್ತ್ರಾಸ್ತ್ರ ನಿಯಂತ್ರಣ ಮತ್ತು ಪರಮಾಣು ಪ್ರಸರಣ ರಹಿತ ವ್ಯವಸ್ಥೆಯನ್ನು ಬಲಪಡಿಸುವ ಅಗತ್ಯವನ್ನು ಪುನರುಚ್ಚರಿಸಿದೆ. ಅಲ್ಲದೆ ಮಧ್ಯಪ್ರಾಚ್ಯದಲ್ಲಿ ಪರಮಾಣು ಮುಕ್ತ ವಲಯವನ್ನು ಸ್ಥಾಪಿಸುವ ನಿಟ್ಟಿನಲ್ಲಿ ವಿಶ್ವಸಂಸ್ಥೆಯ ನಿರ್ಣಯವನ್ನು ಅನುಷ್ಠಾನಗೊಳಿಸಲು ಕರೆ ನೀಡಲಾಗಿದೆ. ಇರಾನ್ ಮೇಲಿನ ಅಮೆರಿಕದ ದಾಳಿಗಳು ಅಥವಾ ಗಲ್ಫ್ ಅರಬ್ ರಾಷ್ಟ್ರಗಳ ಮೇಲೆ ಇರಾನ್ ಸೇನೆ ನಡೆಸಿದ ದಾಳಿಗಳ ಬಗ್ಗೆ ಪ್ರಕಟಣೆಯಲ್ಲಿ ಯಾವುದೇ ದೇಶದ ಹೆಸರನ್ನು ಉಲ್ಲೇಖಿಸದೆ ಯುದ್ಧ ನಿಲ್ಲಿಸಲು ಕರೆ ನೀಡಲಾಗಿದೆ. ಆರಂಭದಲ್ಲಿ ಬ್ರೆಜಿಲ್, ರಷ್ಯಾ, ಭಾರತ, ಚೀನಾ ಮತ್ತು ದಕ್ಷಿಣ ಆಫ್ರಿಕಾವನ್ನು ಒಳಗೊಂಡಿದ್ದ ಬ್ರಿಕ್ಸ್ ಒಕ್ಕೂಟವು, 2024 ರಲ್ಲಿ ಈಜಿಪ್ಟ್, ಇಥಿಯೋಪಿಯಾ, ಇರಾನ್, ಯುನೈಟೆಡ್ ಅರಬ್ ಎಮಿರೇಟ್ಸ್ ಮತ್ತು ಸೌದಿ ಅರೇಬಿಯಾವನ್ನು ಸೇರಿಸಿಕೊಳ್ಳುವ ಮೂಲಕ ವಿಸ್ತರಣೆಗೊಂಡಿತು. ಬಳಿಕ, 2025 ರಲ್ಲಿ ಇಂಡೋನೇಷ್ಯಾ ಈ ಕೂಟವನ್ನು ಸೇರಿತು. ಕಳೆದ ವರ್ಷ ಬೆಲಾರಸ್, ಬೊಲಿವಿಯಾ, ಕಝಾಕಿಸ್ತಾನ್, ಕ್ಯೂಬಾ, ಮಲೇಷ್ಯಾ, ನೈಜೀರಿಯಾ, ಥಾಯ್ಲೆಂಡ್, ಉಗಾಂಡಾ, ಉಜ್ಬೇಕಿಸ್ತಾನ್ ಮತ್ತು ವಿಯೆಟ್ನಾಂ ಬ್ರಿಕ್ಸ್‌ನ ಪಾಲುದಾರ ರಾಷ್ಟ್ರಗಳಾಗಿ ಗುರುತಿಸಿಕೊಂಡಿವೆ.

### ಭಿನ್ನಾಭಿಪ್ರಾಯಗಳು ವಿವಾದಗಳಾಗಿ ಪರಿವರ್ತನೆಯಾಗಬಾರದು

ಭಾರತ- ಚೀನಾ ನಡುವಿನ ಗಡಿ ಸಮಸ್ಯೆ ಬಗೆಹರಿಸಿಕೊಳ್ಳುವ ಯತ್ನಗಳು ಸಾಗಿವೆ. ಅದರ ಮುಂದುವರಿದ ಭಾಗವಾಗಿ ದೆಹಲಿಯಲ್ಲಿ ನಡೆಯುತ್ತಿರುವ ಬ್ರಿಕ್ಸ್ ಶೃಂಗಸಭೆಯಲ್ಲೂ ಈ ಬಗ್ಗೆ ಉಭಯ ದೇಶಗಳ ನಾಯಕರ ನಡುವೆ ಧನಾತ್ಮಕ ಮಾತುಕತೆಗಳು ನಡೆದಿವೆ. ಜಾಗತಿಕ ಅನಿಶ್ಚಿತತೆಯ ನಡುವೆ ಉಭಯ ದೇಶಗಳ ಬಾಂಧವ್ಯವನ್ನು ವೃದ್ಧಿಸುವ ನಿಟ್ಟಿನಲ್ಲಿ ಪ್ರಧಾನಿ ನರೇಂದ್ರ ಮೋದಿ ಮತ್ತು ಚೀನಾ ಅಧ್ಯಕ್ಷ ಕ್ಸಿ ಜಿನ್‌ಪಿಂಗ್ ಅವರು ಮಹತ್ವದ ಮಾತುಕತೆ ನಡೆಸಿದ್ದು, ಭಿನ್ನಾಭಿಪ್ರಾಯಗಳಿದ್ದರೂ ವಿವಾದಗಳಾಗಬಾರದು ಎಂದು ಒಪ್ಪಿಕೊಂಡಿದ್ದಾರೆ.ಬ್ರಿಕ್ಸ್ ಶೃಂಗಸಭೆಯ ಸಂದರ್ಭದಲ್ಲಿ ನಡೆದ 45 ನಿಮಿಷಗಳ ಸುದೀರ್ಘ ಸಭೆಯಲ್ಲಿ ಉಭಯ ನಾಯಕರು ಗಡಿ ನಿರ್ವಹಣೆ, ಆರ್ಥಿಕ ಸಹಭಾಗಿತ್ವ ಮತ್ತು ಜಾಗತಿಕ ವಿದ್ಯಮಾನಗಳು ಸೇರಿದಂತೆ ಹಲವು ಪ್ರಮುಖ ವಿಷಯಗಳ ಕುರಿತು ಚರ್ಚಿಸಿದರು. ಗಡಿಯಲ್ಲಿ ಶಾಂತಿ ಕಾಪಾಡುವುದು ದ್ವಿಪಕ್ಷೀಯ ಸಂಬಂಧಗಳ ಮುಂದುವರಿಕೆಗೆ ಅತ್ಯಗತ್ಯ ಎಂದು ಪ್ರಧಾನಿ ಮೋದಿ ಪ್ರತಿಪಾದಿಸಿದ್ದಾರೆ. ಗಡಿ ಸಂಬಂಧಿತ ವಿಷಯಗಳಲ್ಲಿ ಉಭಯ ದೇಶಗಳು ಪ್ರಸ್ತುತ ಒಪ್ಪಂದಗಳು ಮತ್ತು ತಿಳಿವಳಿಕೆಗಳನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು ಎಂದು ಒತ್ತಿಹೇಳಿದ್ದಾಗಿ ವಿದೇಶಾಂಗ ವ್ಯವಹಾರಗಳ ಸಚಿವಾಲಯ ತಿಳಿಸಿದೆ.ಗಡಿ ಸಮಸ್ಯೆಗೆ ನ್ಯಾಯಯುತ, ಸಮಂಜಸ ಮತ್ತು ಪರಸ್ಪರ ಒಪ್ಪತ ಪರಿಹಾರವನ್ನು ಕಂಡುಕೊಳ್ಳಲು ಇಬ್ಬರೂ ನಾಯಕರು ಬದ್ಧತೆ ವ್ಯಕ್ತಪಡಿಸಿದರು.

**ಈ ದಿನದ ದರ** ಪೆಟ್ರೋಲ್: 111.68₹/L ಡೀಸೆಲ್ : 98.77₹/L ಬಂಗಾರ: ₹ 15,458/Gram 24ct ₹ 14,170 /Gram 22ct ಬೆಳ್ಳಿ: ₹253.00/

# ಬೆಂಗಳೂರು ಘಟಕದಲ್ಲಿ ದಾಖಲಾಗಿರುವ ಪ್ರಕರಣಗಳ ಪ್ರಗತಿ ಪರಿಶೀಲನೆಗಾಗಿ ಹಿರಿಯ ಅಧಿಕಾರಿಗಳ ತಾಂತ್ರಿಕ ಸಮಿತಿ ಭೇಟಿ

• ಉದಯವಾಹಿನಿ, ಬೆಂಗಳೂರು

ಜಾರಿ ನಿರ್ದೇಶನಾಲಯದ ಹಿರಿಯ ಅಧಿಕಾರಿಗಳ ನೇತೃತ್ವದ ತಾಂತ್ರಿಕ ಸಮಿತಿಯ ತಂಡ ಬೆಂಗಳೂರಿಗೆ ಆಗಮಿಸಿದೆ. ದೆಹಲಿಯಿಂದ ಅಧಿಕಾರಿಗಳ ತಂಡ ಆಗಮಿಸಿದ್ದು, ಎರಡು ದಿನಗಳ ಕಾಲ ಬೆಂಗಳೂರಿನಲ್ಲೇ ವಾಸ್ತವ್ಯ ಹೂಡಲಿದ್ದಾರೆ. ಭೇಟಿಯ ಕಾರಣ ಬಹಿರಂಗವಾಗಿಲ್ಲವಾದರೂ, ಸಚಿವ ಸತೀಶ್ ಜಾರಕಿಹೊಳಿ ಅವರಿಗೆ ಸಂಬಂಧಿಸಿದ ಸ್ಥಳಗಳಲ್ಲಿ ಪರಿಶೀಲನೆ ನಡೆಸಿದ ಬಳಿಕ ಈ ಭೇಟಿ ತೀವ್ರ ಕುತೂಹಲ ಮೂಡಿಸಿದೆ.

ಇಡಿ ಮೂಲಗಳ ಪ್ರಕಾರ ಬೆಂಗಳೂರು ವಲಯದ ಇಡಿ ಘಟಕದಲ್ಲಿ ದಾಖಲಾಗಿರುವ ಪ್ರಕರಣಗಳ ಪ್ರಗತಿ ಪರಿಶೀಲನೆ ಇಂದು ಮತ್ತು ನಾಳೆ ನಡೆಯಲಿದೆ.

ಸತೀಶ್ ಜಾರಕಿಹೊಳಿ ಅವರಿಂದ ವಿದೇಶದಲ್ಲಿ ಹಣ ಹೂಡಿಕೆ ಪ್ರಕರಣ, ವಾಲ್ಮೀಕಿ ನಿಗಮದ ಅಕ್ರಮ ಪ್ರಕರಣ, ಲೋಕೋಪಯೋಗಿ ಇಲಾಖೆಯಿಂದ ಕಿಕ್ ಬ್ಯಾಕ್, ಕೆಪಿಎಸ್‌ಸಿ ಹಗರಣ, ಮೂಡಾ ನಿವೇಶನಗಳ ಅಕ್ರಮ ಹಂಚಿಕೆ ಪ್ರಕರಣ ಸೇರಿದಂತೆ ರಾಜ್ಯದಲ್ಲಿ ಇಡಿಯಿಂದ ತನಿಖೆ ನಡೆಯುತ್ತಿರುವ ಪ್ರಕರಣಗಳ ಕುರಿತು ಪ್ರಗತಿ ಪರಿಶೀಲನೆ ನಡೆಯಲಿದೆ ಎಂದು ತಿಳಿದು ಬಂದಿದೆ.

# ಬೆಂಗಳೂರು ಲ್ಯಾಬ್‌ಗೆ ಸಚಿವ ರಾಮಲಿಂಗಾರೆಡ್ಡಿ ಎಚ್ಚರಿಕೆ: ತನಿಖೆಗೆ ಆದೇಶ..!

• ಉದಯವಾಹಿನಿ, ಬೆಂಗಳೂರು

ವಿವಿಧ ನಿಯಮ ಉಲ್ಲಂಘನೆಗಳ ಹಿನ್ನೆಲೆಯಲ್ಲಿ ಬೆಂಗಳೂರಿನ ಅನಾಲಿಟಿಕ್ಸ್ ಆಂಡ್ ರಿಸರ್ಚ್ ಲ್ಯಾಬೊರೇಟರಿ ಪ್ರೈವೇಟ್ ಲಿಮಿಟೆಡ್‌ಗೆ ಸಚಿವ ರಾಮಲಿಂಗಾರೆಡ್ಡಿ ಶನಿವಾರ ಕಠಿಣ ಎಚ್ಚರಿಕೆ ನೀಡಿದ್ದಾರೆ. ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ (ಕೆಎಸ್‌ಪಿಸಿಬಿ) ಅಧಿಕಾರಿಗಳ ತಂಡದೊಂದಿಗೆ ಪ್ರಯೋಗಾಲಯಕ್ಕೆ ದಿಢೀರ್ ಭೇಟಿ ನೀಡಿದ ಸಚಿವರು, ಪರಿಶೀಲನೆ ನಡೆಸಿದರು.

ಈ ವೇಳೆ ಪ್ರಯೋಗಾಲಯಕ್ಕೆ ಕೆಎಸ್‌ಪಿಸಿಬಿಯಿಂದ 2025ರವರೆಗೆ ಮಾತ್ರ ಸ್ಥಾಪನಾ ಅನುಮತಿ ಇದ್ದು, ಆ ಬಳಿಕ ಮಾನ್ಯ ಅನುಮತಿ ಪಡೆಯದೇ ಕಾರ್ಯನಿರ್ವಹಿಸುತ್ತಿರುವುದು ಪತ್ತೆಯಾಗಿದೆ. ಇದೇ ವೇಳೆ ಪ್ರಯೋಗಾಲಯದಲ್ಲಿ ತ್ಯಾಜ್ಯ ವಿಲೇವಾರಿಗೆ ಸೂಕ್ತ


ಉದಯವಾಹಿನಿ ಚಿತ್ರ

ವ್ಯವಸ್ಥೆಯೂ ಇಲ್ಲದಿರುವುದು ಕಂಡುಬಂದಿದೆ. ಪ್ರಯೋಗಾಲಯದಿಂದ ಉತ್ಪತ್ತಿಯಾಗುವ ತ್ಯಾಜ್ಯವನ್ನು ಸಂಸ್ಕರಣೆ ಮಾಡದೆ ತೆರೆದ ಗುಂಡಿಗೆ ಸುರಿಯಲಾಗುತ್ತಿತ್ತು ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಇದಲ್ಲದೆ, ಪ್ರಯೋಗಾಲಯದಲ್ಲಿ ಮೂವರು ವಿಶ್ಲೇಷಕರು ಕಾರ್ಯನಿರ್ವಹಿಸಲಿದ್ದಾರೆ ಎಂದು ಕೇಂದ್ರ ಪರಿಸರ, ಅರಣ್ಯ ಮತ್ತು ಹವಾಮಾನ ಬದಲಾವಣೆ ಸಚಿವಾಲಯದಿಂದ ಅನುಮತಿ ಪಡೆಯಲಾಗಿತ್ತು. ಪರಿಶೀಲನೆ ವೇಳೆ ಕೇವಲ ಒಬ್ಬ ವಿಶ್ಲೇಷಕ ಮಾತ್ರ ಕಾರ್ಯನಿರ್ವಹಿಸುತ್ತಿರುವುದು ಪತ್ತೆಯಾಗಿದೆ. ಕೊಳಚೆ ನೀರು ಸಂಸ್ಕರಣಾ ಘಟಕಗಳಿಂದ (ಎಸ್‌ಟಿಪಿ) ನೀರಿನ ಮಾದರಿಗಳ ವಿಶ್ಲೇಷಣೆಗೆ ವಿಧಿಸಲಾಗುತ್ತಿದ್ದ ಶುಲ್ಕ ಹಾಗೂ ಕಾರ್ಖಾನೆಗಳಿಂದ ವಾಯು ಮಾಲಿನ್ಯದ ಮಾದರಿಗಳನ್ನು ಸಂಗ್ರಹಿಸಿ ವಿಶ್ಲೇಷಿಸಲು ವಿಧಿಸಲಾಗುತ್ತಿದ್ದ ಶುಲ್ಕದಲ್ಲೂ ವ್ಯತ್ಯಾಸಗಳು ಕಂಡುಬಂದಿವೆ.

ಕೇಂದ್ರ ಮಾಲಿನ್ಯ ನಿಯಂತ್ರಣ ಮಂಡಳಿ ನಿಗದಿಪಡಿಸಿರುವ ದರಪಟ್ಟಿ ಹಾಗೂ ಮಾರ್ಗಸೂಚಿಗಳನ್ನು ಪ್ರಯೋಗಾಲಯ ಪಾಲಿಸುತ್ತಿಲ್ಲ ಎಂದು ತಂಡ ಗಮನಿಸಿದೆ. ಸ್ಥಳದಲ್ಲಿ ಸಂಗ್ರಹಿಸಲಾದ ಅಂಕಿ-ಅಂಶಗಳು ಹಾಗೂ ಅಂತಿಮ ವಿಶ್ಲೇಷಣಾ ವರದಿಯಲ್ಲಿ ದಾಖಲಿಸಿರುವ ಅಂಕಿ-ಅಂಶಗಳ ನಡುವೆ ಕೂಡ ವ್ಯತ್ಯಾಸ ಕಂಡುಬಂದಿದೆ.

## ದಶಕದ ದಾಖಲೆ ಮುರಿದ ಬಿಸಿಲು, 32.6 ಡಿಗ್ರಿ ಸೆಲ್ಸಿಯಸ್ ತಾಪಮಾನ ದಾಖಲು..!

• ಉದಯವಾಹಿನಿ, ಬೆಂಗಳೂರು

ಸಿಲಿಕಾನ್ ಸಿಟಿ ಬೆಂಗಳೂರಿನಲ್ಲಿ ವಾತಾವರಣ ತಂಪಾಗಿರಬೇಕಾದ ಸೆಪ್ಟೆಂಬರ್ ತಿಂಗಳಲ್ಲೇ ಬಿಸಿಲಿನ ಬೇಗೆ ಜೋರಾಗಿದೆ. ಬೆಂಗಳೂರು ನಗರದ ಹವಾಮಾನ ಕೇಂದ್ರದಲ್ಲಿ ಗರಿಷ್ಠ 32.6 ಡಿಗ್ರಿ ಸೆಲ್ಸಿಯಸ್ ತಾಪಮಾನ ದಾಖಲಾಗಿದ್ದು, ಇದು ಕಳೆದ ಒಂದು ದಶಕದಲ್ಲೇ ಸೆಪ್ಟೆಂಬರ್ ತಿಂಗಳಲ್ಲಿ ದಾಖಲಾದ ಅತಿ ಹೆಚ್ಚಿನ ಉಷ್ಣಾಂಶವಾಗಿದೆ.

ಇನ್ನೊಂದೆಡೆ, ನಗರದ ಹೊರವಲಯದ ದೇವನಹಳ್ಳಿಯಲ್ಲಿರುವ ಕೆಂಪೇಗೌಡ ಅಂತರರಾಷ್ಟ್ರೀಯ ವಿಮಾನ ನಿಲ್ದಾಣದ ಹವಾಮಾನ ಕೇಂದ್ರದಲ್ಲಿ ಬಿಸಿಲಿನ ತೀವ್ರತೆ ಮತ್ತಷ್ಟು ಹೆಚ್ಚಾಗಿದ್ದು, ಬರೋಬ್ಬರಿ 33.9 ಡಿಗ್ರಿ ಸೆಲ್ಸಿಯಸ್ ತಾಪಮಾನ ದಾಖಲಾಗಿದೆ.

ಹವಾಮಾನ ಇಲಾಖೆಯ ಮಾಹಿತಿಯನ್ನು ಗಮನಿಸಿದರೆ, ಇದು 1951ರ ನಂತರ ಅಂದರೆ ಕಳೆದ 75 ವರ್ಷಗಳಲ್ಲಿ ಸೆಪ್ಟೆಂಬರ್ ತಿಂಗಳಲ್ಲಿ ಬೆಂಗಳೂರು ಭಾಗದಲ್ಲಿ ದಾಖಲಾದ ಸಾರ್ವಕಾಲಿಕ ಗರಿಷ್ಠ ಉಷ್ಣಾಂಶವಾಗಿದೆ. ಈ ಹಿಂದೆ 1951ರ ಸೆಪ್ಟೆಂಬರ್ 16 ರಂದು ಇಷ್ಟೇ ಪ್ರಮಾಣದ ಗರಿಷ್ಠ ತಾಪಮಾನ ದಾಖಲಾಗಿತ್ತು. ಕಳೆದ ಒಂದು ವಾರಕ್ಕೂ ಹೆಚ್ಚು ಕಾಲ ಬೆಂಗಳೂರಿನಲ್ಲಿ ಗರಿಷ್ಠ ತಾಪಮಾನ 31ರಿಂದ 32 ಡಿಗ್ರಿ ಸೆಲ್ಸಿಯಸ್‌ವರೆಗೆ ದಾಖಲಾಗುತ್ತಿದೆ ಎಂದು ಐಎಂಡಿ ಅಧಿಕಾರಿಗಳು ತಿಳಿಸಿದ್ದಾರೆ.

ಋತುಮಾನಕ್ಕೆ ಅನುಗುಣವಾಗಿ ಬೀಸಬೇಕಿದ್ದ ನೈಋತ್ಯ ಮಾರುತಗಳ ಬದಲಿಗೆ ಮೇಲ್ಮೈ ಮಟ್ಟದಲ್ಲಿ ವಾಯುವ್ಯ ಮಾರುತಗಳು ಬೀಸುತ್ತಿವೆ. ಮೋಡಗಳ ಕೊರತೆ ಹಾಗೂ ದುರ್ಬಲ ಮುಂಗಾರು ಮಳೆಯಿಂದಾಗಿ ತಾಪಮಾನದಲ್ಲಿ ಏರಿಕೆಯಾಗಿದೆ ಎಂದು ಐಎಂಡಿ ಬೆಂಗಳೂರು ಪ್ರಭಾರ ನಿರ್ದೇಶಕ ಎನ್. ಪುವಿಯರಸನ್ ಹೇಳಿದ್ದಾರೆ.

ಮೇಲ್ಮೈಯಲ್ಲಿ ಬೀಸುತ್ತಿರುವ ಗಾಳಿ ಒಣಗಿದ್ದು, ತೇವಾಂಶವನ್ನು ಹೊಂದಿಲ್ಲ. ಇದರಿಂದ ವಿಶೇಷವಾಗಿ ಕರ್ನಾಟಕದ ದಕ್ಷಿಣ ಭಾಗ ಮತ್ತು ಒಳನಾಡು ಪ್ರದೇಶಗಳಲ್ಲಿ ತಾಪಮಾನ ಹೆಚ್ಚಾಗಿದೆ ಎಂದು ತಿಳಿಸಿದ್ದಾರೆ.

# ನಮ್ಮ ಸನಾತನ ಸಂಸ್ಕೃತಿ, ಆಚರಣೆ, ಭಕ್ತಿಭಾವಕ್ಕೆ ಧಕ್ಕೆ ತಂದರೆ ಸುಮ್ಮನಿರಲ್ಲ

## ನಮ್ಮ ನೆಲದಲ್ಲಿ ವಿಜೃಂಭಣೆಯಿಂದ ಗಣೇಶೋತ್ಸವ ಆಚರಿಸಲು ಹಿಂದೂಗಳು ಗೋಗರೆಯಬೇಕಾದ ಪರಿಸ್ಥಿತಿ ರಾಜ್ಯದಲ್ಲಿರುವುದು ದುರದೃಷ್ಟಕರ ಸಂಗತಿ.

• ಉದಯವಾಹಿನಿ, ಬೆಂಗಳೂರು

ರಾಜ್ಯದಲ್ಲಿ ಗಣೇಶೋತ್ಸವ ಆಚರಣೆಗೆ ಪೊಲೀಸರು ಅನಗತ್ಯ ನಿರ್ಬಂಧ ವಿಧಿಸುತ್ತಿದ್ದಾರೆ ಹಾಗೂ ಗಣೇಶ ಸಮಿತಿಯ ಯುವಕರಿಗೆ ಬೆದರಿಕೆ ಹಾಕಲಾಗುತ್ತಿದೆ ಎಂದು ಆರೋಪಿಸಿ ಬಿಜೆಪಿ ನಾಯಕರು ಕಾಂಗ್ರೆಸ್ ಸರ್ಕಾರದ ವಿರುದ್ಧ ತೀವ್ರ ವಾಗ್ದಾಳಿ ನಡೆಸಿದ್ದಾರೆ.

ಮಾಜಿ ಕೇಂದ್ರ ಸಚಿವ ಹಾಗೂ ಬಿಜೆಪಿ ನಾಯಕ ಪ್ರಲ್ಹಾದ್ ಜೋಶಿ, ಮೈಸೂರು ಜಿಲ್ಲೆಯ ಟಿ. ನರಸೀಪುರದಲ್ಲಿ ಗಣೇಶ ಸಮಿತಿಯ ಯುವಕರಿಗೆ ಪೊಲೀಸ್ ಇನ್ಸ್‌ಪೆಕ್ಟರ್ ಸಾರ್ವಜನಿಕವಾಗಿ ಬೆದರಿಕೆ ಹಾಕಿರುವ ಘಟನೆ ಕುರಿತು ಆಕ್ರೋಶ ವ್ಯಕ್ತಪಡಿಸಿದ್ದಾರೆ.

ನಮ್ಮ ದೇಶದಲ್ಲೇ, ನಮ್ಮ ನೆಲದಲ್ಲಿ ವಿಜೃಂಭಣೆಯಿಂದ ಗಣೇಶೋತ್ಸವ ಆಚರಿಸಲು ಹಿಂದೂಗಳು ಗೋಗರೆಯಬೇಕಾದ ಪರಿಸ್ಥಿತಿ ರಾಜ್ಯದಲ್ಲಿರುವುದು ದುರದೃಷ್ಟಕರ ಎಂದು ಹೇಳಿದ್ದಾರೆ.

ಸುವ್ಯವಸ್ಥೆ ಕಾಪಾಡಬೇಕಾದ ಅಧಿಕಾರಿಯೇ ಒಂದು ಸಮುದಾಯದ ಪರವಾಗಿ ವರ್ತಿಸುವಂತೆ ಕಂಡುಬಂದು, ಹಬ್ಬ ಆಚರಿಸಲು ಬಂದ ಯುವಕರಿಗೆ ಬೆದರಿಕೆ ಹಾಕಿರುವುದು ಅಕ್ಷಮ್ಯ.

ಯುವಕರಿಗೆ ಬೆದರಿಕೆ ಹಾಕಿದ್ದಾರೆ ಎನ್ನಲಾದ ಇನ್ಸ್‌ಪೆಕ್ಟರ್ ಧನಂಜಯ್ ಅವರನ್ನು ತಕ್ಷಣ ಸೇವೆಯಿಂದ ಅಮಾನತುಗೊಳಿಸಬೇಕು ಎಂದು ಸರ್ಕಾರವನ್ನು ಒತ್ತಾಯಿಸಿದ್ದಾರೆ.

ಕಾನೂನು ಮತ್ತು ಸುವ್ಯವಸ್ಥೆಯ ನೆಪದಲ್ಲಿ ಹಿಂದೂ ಹಬ್ಬಗಳ ಆಚರಣೆಯನ್ನೇ ನಿಯಂತ್ರಿಸಲು ಸರ್ಕಾರ ಮುಂದಾಗಿರುವುದು ಅದರ ಹಿಂದೂ ವಿರೋಧಿ ಧೋರಣೆಗೆ ಸಾಕ್ಷಿಯಾಗಿದೆ. ಸನಾತನ ಸಂಸ್ಕೃತಿ, ಆಚರಣೆ ಮತ್ತು ಭಕ್ತಿಭಾವಕ್ಕೆ ಧಕ್ಕೆ ತರಲು ಯಾವುದೇ ಪ್ರಯತ್ನ ನಡೆದರೂ


ಉದಯವಾಹಿನಿ ಚಿತ್ರ

ಸಹಿಸುವುದಿಲ್ಲ ಎಂದು ಎಚ್ಚರಿಕೆ ನೀಡಿದ್ದಾರೆ.

ಇದೇ ವಿಚಾರವಾಗಿ ಬಿಜೆಪಿ ನಾಯಕ ಆರ್. ಅಶೋಕ್ ಕೂಡ ಕಾಂಗ್ರೆಸ್ ಸರ್ಕಾರದ ವಿರುದ್ಧ ವಾಗ್ದಾಳಿ ನಡೆಸಿದ್ದಾರೆ. ಕರ್ನಾಟಕದಲ್ಲಿ ಸಂವಿಧಾನದ ಆಡಳಿತವಿದೆಯೇ ಅಥವಾ ಶರಿಯಾ ಕಾನೂನು ಇದೆಯೇ, ಪ್ರಜಾಪ್ರಭುತ್ವವಿದೆಯೇ ಅಥವಾ ತಾಲಿಬಾನಿ ಆಡಳಿತವಿದೆಯೇ ಎಂದು ಪ್ರಶ್ನಿಸಿರುವ ಅವರು, ಗಣೇಶೋತ್ಸವ ಮೆರವಣಿಗೆ ಮಸೀದಿ ಮುಂದೆ ಸಾಗಬಾರದು ಮತ್ತು ಅಲ್ಲಿ ಪಟಾಕಿ ಸಿಡಿಸಬಾರದು ಎಂಬಂತಹ ನಿರ್ಬಂಧಗಳನ್ನು ಏಕೆ ವಿಧಿಸಲಾಗುತ್ತಿದೆ ಎಂದು ಪ್ರಶ್ನಿಸಿದ್ದಾರೆ. ಗಣೇಶೋತ್ಸವ ಆಚರಣೆಗೆ ನಿರ್ಬಂಧಗಳನ್ನು ವಿಧಿಸಿ ಭಕ್ತರಿಗೆ ಬೆದರಿಕೆ ಹಾಕುವ ಮಟ್ಟಕ್ಕೆ ಪೊಲೀಸರು ಇಳಿದಿರುವುದು ಕಾಂಗ್ರೆಸ್ ಸರ್ಕಾರದ ತುಷ್ಟೀಕರಣ ರಾಜಕಾರಣದ ಪರಾಕಾಷ್ಠೆ ಎಂದು ಆರೋಪಿಸಿದ್ದಾರೆ. ಕಳೆದ ವರ್ಷ ಗಣಪತಿ ವಿಗ್ರಹವನ್ನು ಪೊಲೀಸ್ ವಾಹನಕ್ಕೆ ಹತ್ತಿಸಿ ಅವಮಾನಿಸಲಾಗಿದೆ ಎಂದು ಆರೋಪಿಸಿದ ಅವರು, ಈ ಬಾರಿ ಗಣೇಶೋತ್ಸವ ಆರಂಭಕ್ಕೂ ಮುನ್ನವೇ ಹಿಂದೂಗಳ ಧಾರ್ಮಿಕ ಹಕ್ಕುಗಳನ್ನು ಕಸಿದುಕೊಳ್ಳಲು ಸರ್ಕಾರ ಮುಂದಾಗಿದೆ ಎಂದು ಟೀಕಿಸಿದ್ದಾರೆ. ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಹಾಗೂ ಗೃಹ ಸಚಿವ ಪ್ರಿಯಾಂಕ್ ಖರ್ಗೆ ಅವರು ಹಿಂದೂಗಳ ಧಾರ್ಮಿಕ ಭಾವನೆಗಳಿಗೆ ಧಕ್ಕೆ ತರುವ ಯಾವುದೇ ಕ್ರಮ ಕೈಗೊಳ್ಳಬಾರದು ಎಂದು ಒತ್ತಾಯಿಸಿದ್ದಾರೆ.

> ಲೋಕಮಾನ್ಯ ತಿಲಕರು ಬ್ರಿಟಿಷರ ವಿರುದ್ಧದ ಸ್ವಾತಂತ್ರ್ಯ ಹೋರಾಟದ ಸಂದರ್ಭದಲ್ಲಿ ಆರಂಭಿಸಿದ ಸಾರ್ವಜನಿಕ ಗಣೇಶೋತ್ಸವ ಇಂದಿಗೂ ಕೋಟ್ಯಂತರ ಭಾರತೀಯರ ಸಾಂಸ್ಕೃತಿಕ ಜೀವನದ ಅವಿಭಾಜ್ಯ ಅಂಗವಾಗಿದೆ ಎಂದು ಹೇಳಿದ್ದಾರೆ. -ಆರ್. ಅಶೋಕ್

### ಹೋರಾಟ ಅನಿವಾರ್ಯವಾಗಲಿದೆ ಎಚ್ಚರಿಕೆ

ಗಣೇಶೋತ್ಸವ ಆಚರಣೆಗೆ ವಿಧಿಸಿರುವ ನಿರ್ಬಂಧಗಳನ್ನು ತಕ್ಷಣ ಹಿಂಪಡೆದು, ಹಿಂದೂಗಳು ನೆಮ್ಮದಿಯಿಂದ ಹಬ್ಬ ಆಚರಿಸಲು ಅವಕಾಶ ನೀಡಬೇಕು. ಇಲ್ಲದಿದ್ದರೆ ಸರ್ಕಾರದ ವಿರುದ್ಧ ಬೀದಿಗಿಳಿದು ಹೋರಾಟ ನಡೆಸುವುದು ಅನಿವಾರ್ಯವಾಗಲಿದೆ ಎಂದು ಎಚ್ಚರಿಕೆ ನೀಡಿದ್ದಾರೆ.

# ಚಿನ್ನದ ಗಣಿಗಾರಿಕೆ ಕುರಿತ ಆರೋಪ ಸಾಬೀತುಪಡಿಸಲಿ- ಸತೀಶ್ ಜಾರಕಿಹೊಳಿ ಸವಾಲು!

• ಉದಯವಾಹಿನಿ, ಬೆಂಗಳೂರು


ಉದಯವಾಹಿನಿ ಚಿತ್ರ

ಜಾರಿ ನಿರ್ದೇಶನಾಲಯ ಇತ್ತೀಚೆಗೆ ನಡೆಸಿದ ದಾಳಿಗಳಿಗೆ ಕಾರಣವಾದ ಮಾಹಿತಿಯನ್ನು ಕಾಂಗ್ರೆಸ್ ನೊಂದಿಗೆ ಸಂಪರ್ಕ ವಿದ್ದರೂ ರಾಜಕೀಯವಾಗಿ ಬಿಜೆಪಿಯತ್ತ ಒಲವು ಹೊಂದಿರುವ ವ್ಯಕ್ತಿಯೊಬ್ಬರು ನೀಡಿದ್ದಾರೆ ಎಂದು ಲೋಕೋಪಯೋಗಿ ಸಚಿವ ಸತೀಶ್ ಜಾರಕಿಹೊಳಿ ಸ್ಫೋಟಕ ಹೇಳಿಕೆ ನೀಡಿದ್ದಾರೆ. ದೂರು ನೀಡಿದವರು ಯಾರೆಂದು ತಮಗೆ ತಿಳಿದಿದೆ ಮತ್ತು ಆ ವಿಷಯವನ್ನು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರ ಗಮನಕ್ಕೆ ತಂದಿರುವುದಾಗಿ ಜಾರಕಿಹೊಳಿ ತಿಳಿಸಿದ್ದಾರೆ. ಸುದ್ದಿಗಾರರೊಂದಿಗೆ ಮಾತನಾಡಿದ ಸಚಿವರು, ಇಡಿ ದಾಳಿಗೂ ಮುಂಚೆಯೇ ದೂರು ನೀಡಿದವರು ಯಾರೆಂದು ನನಗೆ ತಿಳಿದಿತ್ತು. ಇದನ್ನು ಈಗಾಗಲೇ ಮುಖ್ಯಮಂತ್ರಿಗೆ ತಿಳಿಸಿದ್ದೇನೆ.

ಅವರು ಅದನ್ನು ನೋಡಿಕೊಳ್ಳುತ್ತಾರೆ. ದೂರು ನೀಡಬಾರದು ಎಂದೇನಿಲ್ಲ; ಪ್ರತಿಯೊಬ್ಬರಿಗೂ ದೂರು ನೀಡುವ ಹಕ್ಕಿದೆ. ಅವರು ಸಂಪೂರ್ಣವಾಗಿ ನಮ್ಮ ಪಕ್ಷದವರು ಎಂದು ಹೇಳಲಾಗುವುದಿಲ್ಲ. ಅವರ ಸಂಬಂಧಗಳು ಕಾಂಗ್ರೆಸ್‌ನೊಂದಿಗೆ ಇವೆ, ಆದರೆ ಅವರ ಮತಗಳು ಬಿಜೆಪಿಗೆ ಹೋಗುತ್ತವೆ. ತಮ್ಮ ಪರವಾಗಿ ಬೆಂಬಲ ವ್ಯಕ್ತಪಡಿಸಿ ಮಾಜಿ ಮದ್ಯದ ಉದ್ಯಮಿ ವಿಜಯ್ ಮಲ್ಯ 'ಎಕ್ಸ್'ನಲ್ಲಿ ಮಾಡಿದ್ದ ಪೋಸ್ಟ್‌ಗೆ ಪ್ರತಿಕ್ರಿಯಿಸಿದ ಜಾರಕಿಹೊಳಿ, ಧನ್ಯವಾದಗಳು ಎಂದಷ್ಟೇ ಹೇಳಿದರು. ಆಫ್ರಿಕಾದ ಚಿನ್ನದ ಗಣಿಗಾರಿಕೆ ಕಂಪನಿಯೊಂದರಲ್ಲಿ ತಮಗೆ ಶೇ. 40ರಷ್ಟು ಪಾಲು ಇದೆ ಎಂಬ ಇಡಿಯ ಆರೋಪದ ಕುರಿತು ಮಾತನಾಡಿದ ಜಾರಕಿಹೊಳಿ, ದಾಖಲೆಗಳೊಂದಿಗೆ ಆ ಆರೋಪವನ್ನು ಸಾಬೀತುಪಡಿಸುವಂತೆ ಸಂಸ್ಥೆಗೆ ಸವಾಲು ಹಾಕಿದರು. ದಾಖಲೆಗಳಿದ್ದರೆ, ಅದನ್ನು ಸಾಬೀತುಪಡಿಸಲಿ ಎಂದರು.

# ನಾಗೇಂದ್ರ ಆಯ್ತು, ಈಗ ಡಿಕೆಶಿ ಸಂಪುಟದ 2ನೇ ವಿಕೆಟ್ ಪತನಕ್ಕೆ ಎದುರು ನೋಡ್ತಾ ಇರುವ ಬಿಜೆಪಿ!

• ಉದಯವಾಹಿನಿ, ಬೆಂಗಳೂರು

ನಾಗೇಂದ್ರ ಆಯ್ತು, ಈಗ ಡಿಕೆ ಶಿವಕುಮಾರ್ ಸಂಪುಟದ ಎರಡನೇ ವಿಕೆಟ್ ಪತನಕ್ಕೆ ಪ್ರತಿಪಕ್ಷ ಬಿಜೆಪಿ ಎದುರು ನೋಡುತ್ತಿದೆ. ಜಾರಿ ನಿರ್ದೇಶನಾಲಯದ ತನಿಖೆ ಪೂರ್ಣಗೊಂಡು ಅವರು ನಿರ್ದೋಷಿ ಎಂದು ಸಾಬೀತಾಗುವವರೆಗೆ, ಲೋಕೋಪಯೋಗಿ ಇಲಾಖೆ ಸಚಿವ ಸತೀಶ್ ಜಾರಕಿಹೊಳಿ ಅವರನ್ನು ಸಂಪುಟದಿಂದ ತಕ್ಷಣವೇ ಕೈಬಿಡಬೇಕು ಎಂದು ವಿಧಾನಸಭೆಯ ವಿರೋಧ ಪಕ್ಷದ ನಾಯಕ ಆರ್. ಅಶೋಕ್ ಆಗ್ರಹಿಸಿದ್ದಾರೆ.

ಇಂತಹ ಗಂಭೀರ ಆರೋಪಗಳನ್ನು ಎದುರಿಸುತ್ತಿರುವ ಸಚಿವರು ತನಿಖೆ ನಡೆಯುತ್ತಿರುವಾಗ ಹುದ್ದೆಯಲ್ಲಿ ಮುಂದುವರಿಯಲು ಸಾಧ್ಯವಿಲ್ಲ ಮತ್ತು ಕರ್ನಾಟಕದ ಸಾರ್ವಜನಿಕ ಹಣವು ವಿದೇಶದಲ್ಲಿ ಯಾರದ್ದೋ ಖಾಸಗಿ ಆಸ್ತಿಯಾಗಲು ಬಿಡಲ್ಲ ಎಂದು ಅವರು ಹೇಳಿದರು.

ಇಡಿ ಬಿಡುಗಡೆ ಮಾಡಿರುವ ಹೇಳಿಕೆಯು ಕರ್ನಾಟಕದಲ್ಲಿನ ರಾಹುಲ್ ಗಾಂಧಿಯವರ ಎಟಿಎಂ ಸರ್ಕಾರದ ಮೇಲೆ ತೀವ್ರ ಅನುಮಾನದ ಕಾರ್ಮೋಡವನ್ನು ಸೃಷ್ಟಿಸಿದೆ. ಪಿಡಬ್ಲ್ಯುಡಿ ಗುತ್ತಿಗೆಗಳ ಮೂಲಕ ಸಂಗ್ರಹಿಸಿದ ಹಣವನ್ನು ವಿದೇಶದಲ್ಲಿ ಚಿನ್ನದ ಗಣಿಗಾರಿಕೆಯಾಗಿ ಪರಿವರ್ತಿಸಿದರೆಂಬ ಗಂಭೀರ


ಉದಯವಾಹಿನಿ ಚಿತ್ರ

ಆರೋಪವನ್ನು ಸಚಿವ ಸತೀಶ್ ಜಾರಕಿಹೊಳಿ ಈಗ ಎದುರಿಸುತ್ತಿದ್ದಾರೆ ಎಂದು ಅವರು ತಿಳಿಸಿದರು.

ಇಡಿ ಬಹಿರಂಗಪಡಿಸಿರುವ ವಿಷಯಗಳು ಬೆಚ್ಚಿಬೀಳಿಸುವಂತಿವೆ. ಗುತ್ತಿಗೆದಾರರಿಂದ ಸಂಗ್ರಹಿಸಿದ ಹಣವನ್ನು ಅನಧಿಕೃತ ಮಾರ್ಗಗಳ ಮೂಲಕ ವಿದೇಶದಲ್ಲಿ ಆಸ್ತಿಗಳನ್ನು ಖರೀದಿಸಲು ಮತ್ತು ಡೆಮಾಕ್ರಟಿಕ್ ರಿಪಬ್ಲಿಕ್ ಆಫ್ ಕಾಂಗೋದಲ್ಲಿನ ಚಿನ್ನದ ಗಣಿಗಾರಿಕೆ ಕಂಪನಿಯೊಂದರಲ್ಲಿ ಸುಮಾರು ಶೇ. 40ರಷ್ಟು ಪಾಲು ಪಡೆಯಲು ಬಳಸಲಾಗಿದೆ ಎಂದು ಕೇಂದ್ರ ಸಂಸ್ಥೆ ಆರೋಪಿಸಿದೆ ಎಂದು ಅಶೋಕ್ ವಿವರಿಸಿದರು.

# ಮೈಸೂರಿನ 'ಪೇಟೆ ರೌಡಿ' ಪೊಲೀಸ್ ಠಾಣೆಗೆ ನುಗ್ಗಿದ್ರೆ, ನಾನು ಸೀದಾ ಪರಪ್ಪನ ಅಗ್ರಹಾರಕ್ಕೆ ನುಗ್ಗಿಸುತ್ತೇನೆ

• ಉದಯವಾಹಿನಿ, ಬೆಂಗಳೂರು

ಮೈಸೂರಿನ ಕಡೆಯ ಪೇಟೆ ರೌಡಿಯೊಬ್ಬ ಪೊಲೀಸರನ್ನು ಬೆದರಿಸುವ ಮಾತುಗಳನ್ನಾಡಿದ್ದಾನೆ ಎಂದು ಮಾಜಿ ಸಂಸದ ಪ್ರತಾಪ್ ಸಿಂಹ ಅವರ ವಿರುದ್ಧ ಗೃಹ ಸಚಿವ ಪ್ರಿಯಾಂಕ್ ಖರ್ಗೆ ಅವರು ಕಿಡಿಕಾರಿದ್ದಾರೆ.

ಅಸ್ತಿತ್ವ ಕಳೆದುಕೊಂಡ ಕತ್ತಲೆ ಜಗತ್ತಿನ ಆತ್ಮದಂತೆ ಪರಿತಪಿಸುತ್ತಿರುವ ಆ ವ್ಯಕ್ತಿ ವಾರಕ್ಕೊಮ್ಮೆ ಗೋಗರೆದು ಮಾಧ್ಯಮಗಳನ್ನು ಕರೆಸಿಕೊಂಡು ಅಸಂಬದ್ಧ ಹೇಳಿಕೆ ನೀಡುತ್ತಾ ಅಸ್ತಿತ್ವ ಉಳಿಸಿಕೊಳ್ಳುವ ಪ್ರಯತ್ನ ಮಾಡುತ್ತಿದ್ದಾನೆ ಎಂದು ಎಕ್ಸ್‌ನಲ್ಲಿ ಪ್ರಿಯಾಂಕ್ ಖರ್ಗೆ ಅವರು ಪೋಸ್ಟ್ ಮಾಡಿದ್ದಾರೆ.

ಪೊಲೀಸ್ ಠಾಣೆಗೆ ನುಗ್ಗುತ್ತೇನೆ ಎಂದಿರುವ ಆ ವ್ಯಕ್ತಿಗೆ ಮುಕ್ತ ಆಹ್ವಾನವಿದೆ, ಪೊಲೀಸ್ ಠಾಣೆಗೆ ನುಗ್ಗಿದ ನಂತರ ಸೀದಾ ಪರಪ್ಪನ ಅಗ್ರಹಾರಕ್ಕೆ ನುಗ್ಗಿಸುವ ವ್ಯವಸ್ಥೆಯನ್ನು ಉಚಿತವಾಗಿ ಕಲ್ಪಿಸಲಾಗುವುದು ಎಂದು ಮಾಜಿ ಸಂಸದರಿಗೆ ಗೃಹ ಸಚಿವರು ಖಡಕ್ ಎಚ್ಚರಿಕೆ ನೀಡಿದ್ದಾರೆ. ಕಾನೂನು ಸುವ್ಯವಸ್ಥೆ ಕಾಪಾಡುವಲ್ಲಿ ಪೊಲೀಸರ ಕರ್ತವ್ಯಕ್ಕೆ ಯಾರೇ ಅಡ್ಡಿಪಡಿಸಿದರೂ


ಉದಯವಾಹಿನಿ ಚಿತ್ರ

ಮುಲಾಜಿಲ್ಲದೆ ಕಾನೂನು ಕ್ರಮ ಜರುಗಿಸಲು ಸನ್ನದ್ಧವಾಗಿದೆ ಗೃಹ ಇಲಾಖೆ, ಸೂಕ್ಷ್ಮ ಸಂದರ್ಭಗಳನ್ನು ಬಳಸಿಕೊಂಡು ಸಮಾಜದ ಸ್ವಾಸ್ಥ್ಯ ಕದಡುವ ಪ್ರಯತ್ನಗಳನ್ನು ಯಾವುದೇ ಕಾರಣಕ್ಕೂ ಸಹಿಸುವುದಿಲ್ಲ. ಪೊಲೀಸರ ನೈತಿಕ ಸ್ಥೈರ್ಯ ಕಸಿಯಲು ಬಿಡುವುದಿಲ್ಲ ಎಂದು ಪ್ರಿಯಾಂಕ್ ಖರ್ಗೆ ಗುಡುಗಿದ್ದಾರೆ.

# ಹಿರಿಯ ನಾಗರಿಕರ ಕಾರ್ಡ್ ವಿತರಿಸಿದ ಶಾಸಕ ಕೆ. ಗೋಪಾಲಯ್ಯ

• ಉದಯವಾಹಿನಿ, ಬೆಂಗಳೂರು

ಮಹಾಲಕ್ಷ್ಮಿ ಲೇಔಟ್ ವಿಧಾನಸಭಾ ಕ್ಷೇತ್ರದ ನಾಗಪುರವಾರ್ಡಿನಲ್ಲಿರುವ ಶಾಸಕರ ಕಚೇರಿಯಲ್ಲಿ ಇಂದು ಹಿರಿಯ ನಾಗರಿಕರಿಗೆ 'ಸೀನಿಯರ್ ಸಿಟಿಜನ್ ಕಾರ್ಡ್' ವಿತರಣಾ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು. ಸ್ಥಳೀಯ ಶಾಸಕರಾದ ಕೆ. ಗೋಪಾಲಯ್ಯ ಅವರು ಅರ್ಹ ಫಲಾನುಭವಿಗಳಿಗೆ ಕಾರ್ಡ್‌ಗಳನ್ನು ವಿತರಿಸಿ ಶುಭ ಹಾರೈಸಿದರು.

ಸರ್ಕಾರದ ಯೋಜನೆಗಳು ಹಾಗೂ ಸೌಲಭ್ಯಗಳು ಹಿರಿಯ ನಾಗರಿಕರಿಗೆ ತಲುಪುವಂತಾಗಲು ಈ ಕಾರ್ಡ್‌ಗಳು ಸಹಕಾರಿಯಾಗಲಿವೆ ಎಂದು ಈ ಸಂದರ್ಭದಲ್ಲಿ ತಿಳಿಸಿದರು. ಈ ಕಾರ್ಯಕ್ರಮದಲ್ಲಿ ಮಂಡಲ ಅಧ್ಯಕ್ಷರಾದ ಡಾ. ನಾಗೇಂದ್ರ, ಮುಖಂಡರಾದ ಜಯರಾಮ್, ವೆಂಕಟೇಶ್ ಮೂರ್ತಿ, ಶಿವಾನಂದ ಮೂರ್ತಿ, ವೆಂಕಟೇಶ್, ರೈಲ್ವೆ ನಾರಾಯಣ್, ಅವೀನ್ ಆರಾಧ್ಯ ಸೇರಿದಂತೆ ಹಲವು ಸ್ಥಳೀಯ ಪ್ರಮುಖರು ಭಾಗವಹಿಸಿದ್ದರು


ಉದಯವಾಹಿನಿ ಚಿತ್ರ

# ಟ್ರಾಫಿಕ್ ಕಿರಿಕಿರಿ ತಪ್ಪಿಸಲು ವೇಳಾಪಟ್ಟಿ ಬದಲಾವಣೆಗೆ ಸರ್ಕಾರದ ಚಿಂತನೆ

• ಉದಯವಾಹಿನಿ, ಬೆಂಗಳೂರು

ರಾಜಧಾನಿ ಬೆಂಗಳೂರಿನ ರಸ್ತೆಗಳಲ್ಲಿ ದಿನೇದಿನೆ ಹೆಚ್ಚುತ್ತಿರುವ ಸಂಚಾರ ದಟ್ಟಣೆಯು ಕೇವಲ ಉದ್ಯೋಗಿಗಳಿಗಷ್ಟೇ ಅಲ್ಲದೆ ಶಾಲೆಗೆ ಹೋಗುವ ಪುಟ್ಟ ಮಕ್ಕಳು ಹಾಗೂ ಶಿಕ್ಷಕರ ದೈನಂದಿನ ನೆಮ್ಮದಿಯನ್ನೇ ಕಸಿದುಕೊಳ್ಳುತ್ತಿದೆ. ಗಂಟೆಗಟ್ಟಲೆ ವಾಹನಗಳ ನಡುವೆ ಸಿಲುಕಿ ಪರದಾಡುವ ಈ ಸಮಸ್ಯೆಗೆ ಕೊನೆಗೂ ರಾಜ್ಯ ಸರ್ಕಾರ ಒಂದು ಮಹತ್ವದ ಪರಿಹಾರ ಹುಡುಕಲು ಹೊರಟಿದ್ದು, ನಗರದ ಸರ್ಕಾರಿ ಶಾಲೆಗಳ ವೇಳಾಪಟ್ಟಿಯಲ್ಲಿ ದೊಡ್ಡ ಬದಲಾವಣೆ ತರಲು ಮುಂದಾಗಿದೆ.

ಅದರಂತೆ, ಬೆಂಗಳೂರಿನಲ್ಲಿ ಸಂಚಾರ ದಟ್ಟಣೆ ಸಮಸ್ಯೆಯನ್ನು ನಿಯಂತ್ರಿಸಲು, ನಗರದ ಶಾಲಾ - ಕಾಲೇಜುಗಳ ಸಮಯದ ಪರಿಷ್ಕರಣೆಗೆ ಸಂಬಂಧಿಸಿದಂತೆ ವಿವಿಧ ಇಲಾಖೆಗಳು ಹಾಗೂ ಪಾಲುದಾರರೊಂದಿಗೆ ಸಮಾಲೋಚನೆ ನಡೆಸಿ ಶೀಘ್ರದಲ್ಲೇ ಸೂಕ್ತ ನಿರ್ಧಾರ ಕೈಗೊಳ್ಳಲಾಗುವುದು ಶಿಕ್ಷಣ ಸಚಿವ ಮಧು ಬಂಗಾರಪ್ಪ ತಿಳಿಸಿದ್ದಾರೆ.

ಬೆಳಗ್ಗೆ ಮತ್ತು ಸಂಜೆ ಪೀಕ್ ಅವರ್‌ಗಳಲ್ಲಿ ಶಾಲಾ ವಾಹನಗಳು ರಸ್ತೆಗಿಳಿಯುವುದರಿಂದ ಭಾರಿ ಟ್ರಾಫಿಕ್ ಜಾಮ್ ಉಂಟಾಗುತ್ತಿದೆ. ಕಚೇರಿಗಳಿಗೆ ಹೋಗುವವರ ಸಮಯ ಮತ್ತು ಶಾಲಾ ಸಮಯ


ಉದಯವಾಹಿನಿ ಚಿತ್ರ

ಪರಸ್ಪರ ಮುಖಾಮುಖಿಯಾಗದಂತೆ ತಡೆಯುವುದು ಇದರ ಮುಖ್ಯ ಉದ್ದೇಶವಾಗಿದೆ. ಹಾಗಾಗಿ, ಶಾಲಾ ಸಮಯವನ್ನು 30 ನಿಮಿಷಗಳಿಂದ 1 ಗಂಟೆಯವರೆಗೆ ಬದಲಾಯಿಸುವ (ಮುಂದೂಡುವ ಅಥವಾ ಮುಂಚಿತವಾಗಿ ಆರಂಭಿಸುವ) ಸಾಧ್ಯತೆಗಳಿವೆ.

ಇದಕ್ಕೂ ಮುನ್ನ ಸದ್ಯ ಬೆಂಗಳೂರಿನ ಸರ್ಕಾರಿ ಶಾಲೆಗಳು ಬೆಳಗ್ಗೆ 10:30 ರಿಂದ ಸಂಜೆ 4:30 ರವರೆಗೆ ನಡೆಯುತ್ತಿವೆ. ಟ್ರಾಫಿಕ್‌ನಿಂದಾಗಿ ತಡವಾಗುತ್ತಿರುವುದರಿಂದ ಈ ಸಮಯವನ್ನು ಬೆಳಗ್ಗೆ 8:30 ರಿಂದ ಮಧ್ಯಾಹ್ನ 3:30 ಕ್ಕೆ ಬದಲಾಯಿಸುವಂತೆ ಸರ್ಕಾರಿ ಶಾಲಾ ಶಿಕ್ಷಕರು ವಿನಂತಿಸಿದ್ದಾರೆ. ಇದರೊಂದಿಗೆ ಖಾಸಗಿ ಶಾಲೆಗಳ ಒಕ್ಕೂಟವೂ ಸಹ ಸಮಯ ಬದಲಾವಣೆಗೆ ಮನವಿ ಮಾಡಿತ್ತು.

ಜೊತೆಗೆ, ಈ ಹಿಂದೆ ಕರ್ನಾಟಕ ಹೈಕೋರ್ಟ್ ಕೂಡ ಬೆಂಗಳೂರಿನ ಸಂಚಾರ ದಟ್ಟಣೆ ನಿಯಂತ್ರಿಸಲು ಶಾಲಾ-ಕಾಲೇಜುಗಳು ಮತ್ತು ಐಟಿ/ಬಿಟಿ ಕಂಪನಿಗಳ ಕೆಲಸದ ಸಮಯವನ್ನು ಪರಿಷ್ಕರಿಸುವಂತೆ ಸರ್ಕಾರಕ್ಕೆ ಸಲಹೆ ನೀಡಿತ್ತು.

# KPSC ವಿರುದ್ಧ ಹೋರಾಟಕ್ಕೆ CJP ಎಂಟ್ರಿ: ನೊಂದ ಅಭ್ಯರ್ಥಿಗಳಿಗೆ ನ್ಯಾಯದ ಭರವಸೆ

• ಉದಯವಾಹಿನಿ, ಬೆಂಗಳೂರು

ಕರ್ನಾಟಕವಷ್ಟೇ ಅಲ್ಲ, ಇಡೀ ದೇಶದಲ್ಲೇ ಇನ್ನು ಮುಂದೆ ಯಾವುದೇ ಪ್ರಶ್ನೆಪತ್ರಿಕೆ ಸೋರಿಕೆಯನ್ನು ಸಹಿಸುವುದಿಲ್ಲ ಎಂದು ಕಾಕ್ರೋಚ್ ಜನತಾ ಪಕ್ಷದ ರಾಷ್ಟ್ರೀಯ ಸಹ ಸಂಚಾಲಕ ಅಶುತೋಷ್ ರಾಂಕಾ ಅವರು ಗುಡುಗಿದ್ದಾರೆ. ಬೆಂಗಳೂರಿನಲ್ಲಿ ಆಯೋಜಿಸಲಾಗಿದ್ದ ಪತ್ರಿಕಾಗೋಷ್ಠಿ ಉದ್ದೇಶಿಸಿ ಮಾತನಾಡಿದ ರಾಂಕಾ, ಕರ್ನಾಟಕ ಲೋಕಸೇವಾ ಆಯೋಗದ ನೇಮಕಾತಿ ಹಗರಣದ ವಿರುದ್ಧ ಶೀಘ್ರದಲ್ಲೇ ದೊಡ್ಡ ಮಟ್ಟದಲ್ಲಿ ಹೋರಾಟ ಹಮ್ಮಿಕೊಳ್ಳುವುದಾಗಿ ಘೋಷಿಸಿದ್ದಾರೆ.

ಕೆಪಿಎಸ್‌ಸಿ ನೇಮಕಾತಿಯಲ್ಲಿ ನಡೆದಿರುವ ಸಾಲು ಸಾಲು ಅಕ್ರಮಗಳ ಬಗ್ಗೆ ಸಾಕಷ್ಟು ಯುವಕರು ನೇರವಾಗಿ ನಮ್ಮ ಗಮನಕ್ಕೆ ತಂದಿದ್ದಾರೆ. ಈ ಹಗರಣದ ಕುರಿತು ಪ್ರಸ್ತುತ ಎಲ್ಲ ಮೂಲಗಳಿಂದ ಸಂಪೂರ್ಣ ಮಾಹಿತಿಯನ್ನ ಕಲೆಹಾಕಲಾಗುತ್ತಿದೆ. ಅನ್ಯಾಯಕ್ಕೊಳಗಾದ, ಪರೀಕ್ಷೆ ಬರೆದು ವಂಚನೆಗೆ ಒಳಗಾದ ಮತ್ತು ನೊಂದ ವಿದ್ಯಾರ್ಥಿಗಳ ಜೊತೆ ನಿರಂತರವಾಗಿ ಚರ್ಚೆ ನಡೆಸುತ್ತಿದ್ದೇವೆ ಎಂದು ರಾಂಕಾ ತಿಳಿಸಿದ್ದಾರೆ. ಬೀದಿಗಿಳಿದು ಪ್ರತಿಭಟನೆ ನಡೆಸುವ ಕ್ರಮಗಳನ್ನ ಕೈಗೊಳ್ಳುವ ಬಗ್ಗೆ ವಿದ್ಯಾರ್ಥಿಗಳಿಗೆ ಮಾಹಿತಿ ನೀಡಲಾಗಿದೆ ಎಂದು ಅವರು ಸ್ಪಷ್ಟಪಡಿಸಿದರು.

## ಮೊಬೈಲ್ ಫೋನ್ ಎಗರಿಸಿ ಪರಾರಿಯಾದ ಬೈಕ್ ಟ್ಯಾಕ್ಸಿ ಚಾಲಕ

• ಉದಯವಾಹಿನಿ, ಬೆಂಗಳೂರು

ಆಪ್ ಆಧಾರಿತ ಬೈಕ್ ಟ್ಯಾಕ್ಸಿಯ ಚಾಲಕನೊಬ್ಬ ಪ್ರಯಾಣಿಕನನ್ನು ಯಾಮಾರಿಸಿ ಮೊಬೈಲ್ ಫೋನ್ ಕದ್ದೊಯ್ದಿರುವ ಘಟನೆ ಮಡಿವಾಳ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ನಡೆದಿದೆ. ಮಡಿವಾಳದ ಇಂಡಿಯನ್ ಆಯಿಲ್ ಪೆಟ್ರೋಲ್ ಬಂಕ್ ಬಳಿ ಘಟನೆ ನಡೆದಿದ್ದು, ಅಶುತೋಷ್ ಕುಮಾರ್ ಎಂಬ ರೈಡರ್ ಸ್ಕೂಟರ್‌ನ ಟಯರ್‌ನಲ್ಲಿ ಗಾಳಿ ತಪಾಸಣೆ ಮಾಡುವ ನೆಪದಲ್ಲಿ ಪ್ರಯಾಣಿಕನನ್ನು ಕೆಳಗಿಳಿಸಿ 50 ಸಾವಿರ ರೂ. ಬೆಲೆ ಬಾಳುವ ಸ್ಮಾರ್ಟ್‌ಫೋನ್ ಕದ್ದು ಎಸ್ಕೇಪ್ ಆಗಿದ್ದಾನೆ. ಮೊಬೈಲ್ ಕಳೆದುಕೊಂಡಿರುವ ತ್ರಿದೀಪ್ ದೇಬನಾಥ್ ನೀಡಿರುವ ದೂರಿನನ್ವಯ ಮಡಿವಾಳ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ. ಸೆ. 6ರಂದು ಬೆಳಗ್ಗೆ 5.50ರ ಸುಮಾರಿಗೆ ನಾರಾಯಣಪ್ಪ ಗಾರ್ಡನ್ 4ನೇ ಕ್ರಾಸ್‌ನಿಂದ ಮಾರತ್‌ಹಳ್ಳಿಗೆ ಹೋಗಲು ತ್ರಿದೀಪ್ ದೇಬನಾಥ್ ಬೈಕ್ ಟ್ಯಾಕ್ಸಿ ಬುಕ್ ಮಾಡಿದ್ದರು. ಆಪ್‌ನಲ್ಲಿ ಬೇರೆ ನಂಬರಿನ ದ್ವಿಚಕ್ರ ವಾಹನ ತೋರಿಸಿದ್ದರೂ, ಸ್ಥಳಕ್ಕೆ ಅಶುತೋಷ್ ಕುಮಾರ್ ಎಂಬಾತ ಬಿಳಿ ಬಣ್ಣದ ಸ್ಕೂಟರ್‌ನಲ್ಲಿ ಬಂದು ಪ್ರಯಾಣಿಕನನ್ನು ಹತ್ತಿಸಿಕೊಂಡಿದ್ದ. ಪ್ರಯಾಣದ ಮಧ್ಯೆ ಮೊಬೈಲ್ ಚಾರ್ಜ್ ಖಾಲಿಯಾಗಿದೆ ಎಂದು ತಿಳಿದ ತ್ರಿದೀಪ್ ದೇಬನಾಥ್ ಚಾಲಕನ ಅನುಮತಿ ಪಡೆದು ತಮ್ಮ ಫೋನ್ ಅನ್ನು ಸ್ಕೂಟಿಯಲ್ಲಿ ಚಾರ್ಜ್ ಮಾಡಲು ನೀಡಿದ್ದರು. ಚಾಲಕ ಅಶುತೋಷ್ ಕುಮಾರ್ ಸ್ಕೂಟರ್ ಟಯರ್‌ನಲ್ಲಿ ಗಾಳಿ ಇದೆಯೇ ಎಂದು ತಪಾಸಣೆ ಮಾಡಬೇಕೆಂದು ಹೇಳಿದ್ದಾನೆ.

# ರಾಜ್ಯಾದ್ಯಂತ 16,951 ಸ್ಥಳಗಳಲ್ಲಿ ಶೋಧ ಕಾರ್ಯಾಚರಣೆ

## ಸೆಪ್ಟೆಂಬರ್ 8 ರಂದು ಮುಖ್ಯಮಂತ್ರಿಗಳು ಎಪಿಎಂಸಿ ಮಾರುಕಟ್ಟೆಗೆ ಮುಂಜಾನೆ ಭೇಟಿ ನೀಡಿದ ನಂತರ ಈ ಕಾರ್ಯಾಚರಣೆ ಕೈಗೊಳ್ಳಲಾಗಿದೆ

• ಉದಯವಾಹಿನಿ, ಬೆಂಗಳೂರು

1 5,897 ಸ್ಥಳಗಳಲ್ಲಿ ಪೊಲೀಸ್ ಪರಿಶೀಲನೆ

2 800 ಬಾಲ ಕಾರ್ಮಿಕರನ್ನು ರಕ್ಷಿಸಲಾಗಿದೆ

3 ಕಾರ್ಖಾನೆಗಳು, ಅಂಗಡಿಗಳು, ಗ್ಯಾರೇಜ್‌ಗಳು

ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಇತ್ತೀಚೆಗೆ ಯಶವಂತಪುರದ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ (ಎಪಿಎಂಸಿ) ಆವರಣಕ್ಕೆ ಅನಿರೀಕ್ಷಿತ ಭೇಟಿ ನೀಡಿದಾಗ ಅಲ್ಲಿ ಮಕ್ಕಳು ಕೆಲಸ ಮಾಡುತ್ತಿರುವುದನ್ನು ಗಮನಿಸಿ ತಕ್ಷಣ ಕ್ರಮ ಕೈಗೊಳ್ಳುವಂತೆ ಅಧಿಕಾರಿಗಳಿಗೆ ಸೂಚಿಸಿದ್ದರು.

ಇದರ ಬೆನ್ನಲ್ಲೇ, ರಾಜ್ಯಾದ್ಯಂತ 16,951 ಸ್ಥಳಗಳಲ್ಲಿ ಪೊಲೀಸರು ನಡೆಸಿದ ಕಾರ್ಯಾಚರಣೆಯಲ್ಲಿ ಒಟ್ಟು 800 ಬಾಲ ಕಾರ್ಮಿಕರನ್ನು ರಕ್ಷಿಸಲಾಗಿದೆ. ನಗರ ಪೊಲೀಸರು 503 ಬಾಲ ಕಾರ್ಮಿಕರನ್ನು ರಕ್ಷಿಸುವ ಮೂಲಕ ಬೆಂಗಳೂರು ಪಟ್ಟಿಯಲ್ಲಿ ಅಗ್ರಸ್ಥಾನದಲ್ಲಿದ್ದರೆ, ವಿಜಯಪುರದಲ್ಲಿ 72, ತುಮಕೂರಿನಲ್ಲಿ 33, ಕೊಪ್ಪಳದಲ್ಲಿ 27, ಕಲಬುರಗಿಯಲ್ಲಿ 22, ಬಳ್ಳಾರಿಯಲ್ಲಿ 15 ಮತ್ತು ಮೈಸೂರಿನಲ್ಲಿ 13 ಮಕ್ಕಳನ್ನು ರಕ್ಷಿಸಲಾಗಿದೆ.

ಬೆಂಗಳೂರು ನಗರದಲ್ಲಿ ಆರಂಭವಾದ ಈ ವಿಶೇಷ ಕಾರ್ಯಾಚರಣೆಯ ನೇತೃತ್ವವನ್ನು ನಗರದ ಎಲ್ಲಾ 11 ಪೊಲೀಸ್ ವಿಭಾಗಗಳ ಡಿಸಿಪಿಗಳು ಕೇಂದ್ರ ಅಪರಾಧ ವಿಭಾಗದ ಇಬ್ಬರು ಡಿಸಿಪಿಗಳು ವಹಿಸಿದ್ದರು. ವಾಣಿಜ್ಯ ಸಂಸ್ಥೆಗಳು, ಕೈಗಾರಿಕಾ ಪ್ರದೇಶಗಳು, ಕಾರ್ಖಾನೆಗಳು, ಅಂಗಡಿಗಳು, ಗ್ಯಾರೇಜ್‌ಗಳು,


ಉದಯವಾಹಿನಿ ಚಿತ್ರ

ನಿರ್ಮಾಣ ಸ್ಥಳಗಳು, ಹೋಟೆಲ್‌ಗಳು, ಪೆಟ್ರೋಲ್ ಬಂಕ್‌ಗಳು, ಮಾಲ್‌ಗಳು ಮತ್ತು ಇತರ ಸಂಸ್ಥೆಗಳು ಸೇರಿದಂತೆ ಮಕ್ಕಳು ಕೆಲಸ ಮಾಡುತ್ತಿರಬಹುದಾದ 5,897 ಸ್ಥಳಗಳಲ್ಲಿ ಪೊಲೀಸ್ ತಂಡಗಳು ಪರಿಶೀಲನೆ ಮತ್ತು ದಾಳಿ ನಡೆಸಿವೆ. ಸೆಪ್ಟೆಂಬರ್ 8 ರಂದು ಮುಖ್ಯಮಂತ್ರಿಗಳು ಎಪಿಎಂಸಿ ಮಾರುಕಟ್ಟೆಗೆ ಮುಂಜಾನೆ ಭೇಟಿ ನೀಡಿದ ನಂತರ ಈ ಕಾರ್ಯಾಚರಣೆ ಕೈಗೊಳ್ಳಲಾಗಿದೆ. ಅವರು ರೈತರು, ಕಾರ್ಮಿಕರು ಮತ್ತು ವ್ಯಾಪಾರಿಗಳೊಂದಿಗೆ ಸಂವಾದ ನಡೆಸಿ ಅವರ ಅಹವಾಲುಗಳನ್ನು ಆಲಿಸಿದ್ದರು. ಮಕ್ಕಳನ್ನು ಕೆಲಸಕ್ಕೆ ನೇಮಿಸಿಕೊಳ್ಳುವ ಅಂಗಡಿಗಳ ವಿರುದ್ಧ ಕಾನೂನು ಕ್ರಮ: ಮಕ್ಕಳನ್ನು ಕೆಲಸಕ್ಕೆ ನೇಮಿಸಿಕೊಳ್ಳುವ ಅಂಗಡಿಗಳ ವಿರುದ್ಧ ಕಾನೂನು ಕ್ರಮಕ್ಕಾಗಿ ತ್ವರಿತವಾಗಿ ಕಾರ್ಯನಿರ್ವಹಿಸಿದ ಉತ್ತರ ವಿಭಾಗದ ಪೊಲೀಸರು, ಉಪ ಪೊಲೀಸ್ ಆಯುಕ್ತರ ಮೇಲ್ವಿಚಾರಣೆಯಲ್ಲಿ ಸಹಾಯಕ ಪೊಲೀಸ್ ಆಯುಕ್ತರು, ಪೊಲೀಸ್ ನಿರೀಕ್ಷಕರು ಮತ್ತು ಕಾರ್ಮಿಕ ನಿರೀಕ್ಷಕರನ್ನು ಒಳಗೊಂಡ ಐದು ವಿಶೇಷ ತಂಡಗಳನ್ನು ರಚಿಸಿದ್ದರು. ಬಾಲ ಕಾರ್ಮಿಕರು, ಮಕ್ಕಳ ಹಕ್ಕು, ಮಕ್ಕಳ ಮೇಲಿನ ಅಪರಾಧಗಳ ಬಗ್ಗೆ **ಹೆಚ್ಚಿನ ಗಮನ ಹರಿಸಬೇಕಿದೆ:** ವಾಸುದೇವ್ ಶರ್ಮಾ (ಸಂದರ್ಶನ) ಈ ತಂಡಗಳು ಅದೇ ದಿನ ಎಪಿಎಂಸಿ ಮಾರುಕಟ್ಟೆಯಲ್ಲಿ ಗುರಿಯಾಗಿಸಿಕೊಂಡು, ಕಾರ್ಯಾಚರಣೆ ನಡೆಸಿ, ಇತರ ರಾಜ್ಯಗಳ ಮಕ್ಕಳು ಸೇರಿದಂತೆ 19 ಬಾಲಕಾರ್ಮಿಕರನ್ನು ರಕ್ಷಿಸಿದ್ದಾರೆ. ಹೆಚ್ಚಿನ ವಿಚಾರಣೆ ನಡೆಯುತ್ತಿದ್ದು, ಸಂಬಂಧಪಟ್ಟ ವ್ಯಕ್ತಿಗಳು ಮತ್ತು ಬಾಲಕಾರ್ಮಿಕರನ್ನು ನೇಮಿಸಿಕೊಳ್ಳುವ ಸಂಸ್ಥೆಗಳ ವಿರುದ್ಧ ಅಗತ್ಯ ಕಾನೂನು ಕ್ರಮ ಕೈಗೊಳ್ಳಲಾಗುವುದು. ಬಾಲಕಾರ್ಮಿಕ ಪದ್ಧತಿಯನ್ನು ನಿರ್ಮೂಲನೆ ಮಾಡುವಲ್ಲಿ ಸಾರ್ವಜನಿಕರ ಸಹಕಾರ ಅತ್ಯಗತ್ಯ ಎಂದು ಅಧಿಕಾರಿಯೊಬ್ಬರು ಹೇಳಿದರು.

> ಮಾರುಕಟ್ಟೆಯಲ್ಲಿ ಮಕ್ಕಳು ಕೆಲಸ ಮಾಡುತ್ತಿರುವುದನ್ನು ಗಮನಿಸಿದ ಅವರು, ಬಾಲ ಕಾರ್ಮಿಕರನ್ನು ನೇಮಿಸಿಕೊಳ್ಳುವ ಸಂಸ್ಥೆಗಳ ವಿರುದ್ಧ ಕ್ರಮ ಕೈಗೊಳ್ಳಲು ಮತ್ತು ಮಕ್ಕಳನ್ನು ರಕ್ಷಿಸಲು ಪೊಲೀಸ್ ಹಾಗೂ ಇತರ ಅಧಿಕಾರಿಗಳಿಗೆ ಸೂಚನೆ ನೀಡಿದ್ದರು. -ಅಧಿಕಾರಿ

### ಹದಿನೆಂಟು ಪ್ರಕರಣ

ಬಾಲ ಕಾರ್ಮಿಕರನ್ನು ಕೆಲಸಕ್ಕೆ ನೇಮಿಸಿಕೊಂಡಿದ್ದ ಅಂಗಡಿ ಮಾಲೀಕರ ವಿರುದ್ಧ 'ಬಾಲ ಮತ್ತು ಹದಿಹರೆಯದವರ ಕಾರ್ಮಿಕ (ನಿಷೇಧ ಮತ್ತು ನಿಯಂತ್ರಣ) ಕಾಯ್ದೆ' ಹಾಗೂ 'ಬಾಲ ನ್ಯಾಯ ಕಾಯ್ದೆಯಡಿ ಹದಿನೆಂಟು ಪ್ರಕರಣಗಳನ್ನು ದಾಖಲಿಸಲಾಗಿದೆ.

ಉದಯವಾಹಿನಿ
ಸೋಮವಾರ
14 ಸೆಪ್ಟೆಂಬರ್ 2026
03



# ಹೆದ್ದಾರಿಯಲ್ಲಿ ಪಲ್ಟಿಯಾದ ಲಾರಿ; ರಸ್ತೆ ತುಂಬಾ ಈರುಳ್ಳಿ ಬೆಳ್ಳುಳ್ಳಿ ರಾಶಿ

• ಉದಯವಾಹಿನಿ, ಕೆಜಿಎಫ್

ಬೆಂಗಳೂರು-ಚೆನ್ನೈ ಎಕ್ಸ್‌ಪ್ರೆಸ್ ಹೈವೇಯಲ್ಲಿ ಸಂಚರಿಸುತ್ತಿದ್ದ ಪ್ರಯಾಣಿಕರಿಗೆ ಅಚ್ಚರಿಯ ದೃಶ್ಯವೊಂದು ಎದುರಾಯಿತು. ಅದುವೇ, ರಸ್ತೆಯ ತುಂಬಾ ರಾಶಿ ರಾಶಿಯಾಗಿ ಹರಡಿದ್ದ ಈರುಳ್ಳಿ, ಬೆಳ್ಳುಳ್ಳಿ ಹಾಗೂ ಅವುಗಳನ್ನು ಯಾರೂ ಕೊಂಡೊಯ್ಯದಂತೆ ಲಾರಿ ಹಿಡಿದು ಕಾಯುತ್ತಿದ್ದ ಪೊಲೀಸರು ಎಲ್ಲರ ಗಮನ ಸೆಳೆದರು.

ಕೋಲಾರ ಜಿಲ್ಲೆಯ ಕೆಜಿಎಫ್ ತಾಲ್ಲೂಕಿನ ವಡ್ಡರಹಳ್ಳಿ ಗ್ರಾಮದ ಬಳಿ ಹಾದುಹೋಗುವ ಚೆನ್ನೈ - ಬೆಂಗಳೂರು ಎಕ್ಸ್‌ಪ್ರೆಸ್ ಹೈವೇಯಲ್ಲಿ, ಬೆಂಗಳೂರಿನಿಂದ ಆಂಧ್ರಪ್ರದೇಶದ ಚಿತ್ತೂರಿಗೆ ಈರುಳ್ಳಿ ಮತ್ತು ಬೆಳ್ಳುಳ್ಳಿಯನ್ನು ಲೋಡ್ ಮಾಡಿಕೊಂಡು ಹೋಗುತ್ತಿದ್ದ ಕ್ಯಾಂಟರ್ ಲಾರಿಯೊಂದು


ಉದಯವಾಹಿನಿ ಚಿತ್ರ

ಚಾಲಕನ ನಿಯಂತ್ರಣ ತಪ್ಪಿ ಹೆದ್ದಾರಿಯಲ್ಲೇ ಪಲ್ಟಿಯಾಗಿದೆ. ಇನ್ನು, ಲಾರಿ ಮಗುಚಿ ಬಿದ್ದ ರಭಸಕ್ಕೆ ಈರುಳ್ಳಿ ಮತ್ತು ಬೆಳ್ಳುಳ್ಳಿ ರಸ್ತೆಯುದ್ದಕ್ಕೂ ಸಂಪೂರ್ಣವಾಗಿ ಚೆಲ್ಲಾಪಿಲ್ಲಿಯಾಗಿ ಹರಡಿಕೊಂಡವು, ಅದೃಷ್ಟವಶಾತ್ ಈ ಭೀಕರ ಅಪಘಾತದಲ್ಲಿ ಲಾರಿಯ ಚಾಲಕ ಮತ್ತು ಕ್ಲೀನರ್ ಪ್ರಾಣಾಪಾಯದಿಂದ ಪಾರಾಗಿದ್ದಾರೆ.

ಏತನ್ಮಧ್ಯೆ, ಮಾರುಕಟ್ಟೆಯಲ್ಲಿ ಈರುಳ್ಳಿ ಮತ್ತು ಬೆಳ್ಳುಳ್ಳಿ ಬೆಲೆ ದುಬಾರಿಯಾಗಿರುವುದರಿಂದ, ರಸ್ತೆಯಲ್ಲಿ ಬಿದ್ದ ಸರಕನ್ನು ಸಾರ್ವಜನಿಕರು ಹಾಗೂ ಸ್ಥಳೀಯರು ಲೂಟಿ ಮಾಡಬಹುದು ಎಂಬ ಭೀತಿಯಿತ್ತು.

ಈ ಕಾರಣಕ್ಕಾಗಿ ಅಪಘಾತದ ವಿಷಯ ತಿಳಿಯುತ್ತಿದ್ದಂತೆ ಬೇತಮಂಗಲ ಠಾಣೆಯ ಪೊಲೀಸರು ತಕ್ಷಣವೇ ಸ್ಥಳಕ್ಕೆ ಧಾವಿಸಿ ಇಡೀ ಪ್ರದೇಶವನ್ನು ತಮ್ಮ ಸುಪರ್ದಿಗೆ ಪಡೆದು, ಸರಕು ಕಳ್ಳತನವಾಗದಂತೆ ಕಾವಲು ನಿಂತರು. ಆದರೆ, ಎಕ್ಸ್‌ಪ್ರೆಸ್‌ವೇ ಮಧ್ಯದಲ್ಲೇ ಲಾರಿ ಬಿದ್ದಿದ್ದರಿಂದ ವಾಹನ ಸಂಚಾರಕ್ಕೆ ತೊಂದರೆಯಾಗಿತ್ತು. ಹಾಗಾಗಿ, ಪೊಲೀಸರು ಕಾವಲು ಕಾಯುವುದರ ಜೊತೆಗೆ ಕ್ರೇನ್ ಬಳಸಿ ಲಾರಿಯನ್ನು ಪಕ್ಕಕ್ಕೆ ಸರಿಸಿ, ರಸ್ತೆಯನ್ನು ಸ್ವಚ್ಛಗೊಳಿಸಿ ಸಂಚಾರಕ್ಕೆ ಅನುವು ಮಾಡಿಕೊಟ್ಟರು.

# ಪ್ರಜೆಗಳ ಸಮಸ್ಯೆಗಳಿಗೆ ಶೀಘ್ರ ಪರಿಹಾರ ನೀಡಲು ಆಗ್ರಹ

• ಉದಯವಾಹಿನಿ, ಕೋಲಾರ

ವೇಮಗಲ್ ಪಟ್ಟಣದಲ್ಲಿ ನಡೆದ ಪ್ರಜಾ ಸೇವಾ ಆಂದೋಲನ ಕಾರ್ಯಕ್ರಮದಲ್ಲಿ ರೈತರು ಹಾಗೂ ಜನಸಾಮಾನ್ಯರ ವಿವಿಧ ಸಮಸ್ಯೆಗಳಿಗೆ ಶೀಘ್ರವಾಗಿ ಮತ್ತು ನ್ಯಾಯಬದ್ಧವಾಗಿ ಪರಿಹಾರ ಕಲ್ಪಿಸಬೇಕೆಂದು ಶಾಸಕ ಕೊತ್ತೂರು ಜಿ. ಮಂಜುನಾಥ್ ಅವರಿಗೆ ರೈತ ನಾಯಕ ಪ್ರೊ. ನಂಜುಂಡಸ್ವಾಮಿ ಬಣದ ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ವತಿಯಿಂದ ರೈತಮುಖಂಡ ಕಲ್ವಮಂಜಲಿ ರಾಮುಶಿವಣ್ಣ ಒತ್ತಾಯಿಸಿದರು. ಗಣಿ ಇಲಾಖೆ, ಶಿಕ್ಷಣ ಇಲಾಖೆ, ಕಂದಾಯ ಇಲಾಖೆ, ಕೃಷಿ ಇಲಾಖೆ, ತೋಟಗಾರಿಕೆ ಇಲಾಖೆ, ಆಹಾರ ಇಲಾಖೆ, ಪಿಡಬ್ಲ್ಯೂಡಿ ಇಲಾಖೆ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ರೇಷ್ಮೆ ಇಲಾಖೆ ಸೇರಿದಂತೆ ವೇಮಗಲ್ ಕುರುಗಲ್ ಪಟ್ಟಣ ಪಂಚಾಯಿತಿಗೆ ಸಂಬಂಧಿಸಿದಂತೆ ರೈತರು ಹಾಗೂ ಸಾರ್ವಜನಿಕರು ಎದುರಿಸುತ್ತಿರುವ ವಿವಿಧ ಸಮಸ್ಯೆಗಳ ಕುರಿತು ಮನವಿ ಪತ್ರಗಳನ್ನು ಸಲ್ಲಿಸಿ ಅವರು ಮಾತನಾಡಿದರು. ರೈತರ ಜಮೀನು, ಕೃಷಿ, ಮೂಲಸೌಕರ್ಯ, ಸಾರ್ವಜನಿಕ ಸೌಲಭ್ಯಗಳು ಹಾಗೂ ವಿವಿಧ ಸರ್ಕಾರಿ ಇಲಾಖೆಗಳ ಸೇವೆಗಳಿಗೆ ಸಂಬಂಧಿಸಿದ ಸಮಸ್ಯೆಗಳನ್ನು ಶೀಘ್ರವಾಗಿ ಪರಿಹರಿಸುವಂತೆ ಮನವಿ ಮಾಡಲಾಯಿತು.

# ಬಿಜೆಪಿ ಆರ್.ಎಸ್.ಎಸ್. ಅಸ್ಪೃಶ್ಯತೆ ಆಚರಣೆ ಕಾಂಗ್ರೇಸ್ ಖಂಡನೆ

## ಭಾರತದ ಇತಿಹಾಸದಲ್ಲಿ ಸ್ವಾತಂತ್ರ್ಯದ ನಂತರ ಸುಮಾರು 7-8 ದಶಕಗಳ ಇತಿಹಾಸದಲ್ಲಿ ಇಂಥಹ ಅಪಮಾಕರವಾದ ಘಟನೆ ನಡೆದಿಲ್ಲ

• ಉದಯವಾಹಿನಿ, ಕೋಲಾರ

ಉತ್ತರಾಖಂಡದ ಹಲ್ದ್ವಾನಿ ರಾಮಲೀಲಾ ಮೈದಾನದಲ್ಲಿ ಕಾಂಗ್ರೇಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರು ಆಗಸ್ಟ್ 8 ರಂದು ಬಿಜೆಪಿ ಹಾಗೂ ಆರ್.ಎಸ್.ಎಸ್. ವಿರುದ್ದ ಮಾಡಿದ ಭಾಷಣದ ವೇದಿಕೆಯನ್ನು ಆಗಸ್ಟ್ 10 ರಂದು ಗೋ ಮೂತ್ರ ಹಾಗೂ ಗಂಗಾಜಲ ಮೂಲಕ ಶುದಿಕರಣ ಮಾಡಿರುವುದು ದಲಿತರು ಮತ್ತು ಶೋಷಿತ ವರ್ಗಗಳಿಗೆ ಮಾಡಿದ ಅವಮಾನವಾಗಿದೆ ಎಂದು ಜಿಲ್ಲಾ ಕಾಂಗ್ರೇಸ್ ಪ್ರಚಾರ ಸಮಿತಿಯ ಅಧ್ಯಕ್ಷ ಎಂ.ರಮೇಶ್ ತೀವ್ರವಾಗಿ ಖಂಡಿಸಿದರು.

1 ದಲಿತ ಎಂಬ ಪದ ಬಳಿಕೆಯನ್ನು
2 ವೇದಿಕೆ ಶುದ್ದೀಕರಣ ನಡೆಸಿರುವುದು
3 ದಲಿತ ಎಂಬ ಪದ ಬಳಿಕೆಯನ್ನು

ನಗರದ ಪತ್ರಕರ್ತರ ಭವನದಲ್ಲಿ ಜಿಲ್ಲಾ ಕಾಂಗ್ರೇಸ್ ಪ್ರಚಾರ ಸಮಿತಿಯ ಸದಸ್ಯರು ರಾಜ್ಯಾಧ್ಯಕ್ಷ ವಿನಯಕುಮಾರ್ ಸೊರಕ್ಕಿಯ ಅವರ ಆದೇಶದ ಮೇರೆಗೆ ಇಂದು ಕಪ್ಪು ಪಟ್ಟಿ ಧರಿಸಿ ಬಿ,ಆರ್,ಅಂಬೇಡ್ಕರ್ ಅವರ ಭಾವಚಿತ್ರದೊಂದಿಗೆ ಸುದ್ದಿಗೋಷ್ಠಿಯಲ್ಲಿ ಅವರು ಮಾತನಾಡಿದರು.

ಭಾರತದ ಇತಿಹಾಸದಲ್ಲಿ ಸ್ವಾತಂತ್ರ್ಯದ ನಂತರ ಸುಮಾರು 7-8 ದಶಕಗಳ ಇತಿಹಾಸದಲ್ಲಿ ಇಂಥಹ ಅಪಮಾಕರವಾದ ಘಟನೆ ನಡೆದಿಲ್ಲ.

ದಲಿತ ಸಮುದಾಯದ ಮುಖಂಡರಾಗಿ ಬಳದು ಬಂದ ಪಾರ್ಲಿಮೆಂಟ್ ವಿಪಕ್ಷದ ನಾಯಕರಾದ ಹಿರಿಯ ಮಲ್ಲಿಕಾರ್ಜುನ ಖರ್ಗೆ ಅವರನ್ನು ದಲಿತ ಜಾತಿಯ ಕಾರಣಕ್ಕಾಗಿ ಅವಮಾನಿಸುವ ರೀತಿಯಲ್ಲಿ ವೇದಿಕೆ ಶುದ್ದೀಕರಣ ನಡೆಸಿರುವುದು ಸಮಾಜದಲ್ಲಿರುವ ಜಾತಿ ತಾರತಮ್ಯದ ಆಸ್ಪೃಶ್ಯತೆಯ ಮನಸ್ಥಿತಿಯನ್ನು ಪ್ರತಿಬಿಂಬಿಸುತ್ತದೆ. ಸಮಾಜಿಕ ವಿಭಜನೆಯನ್ನು ಉತ್ತೇಜಿಸುತ್ತದೆ ಎಂದು ಅಕ್ಷೇಪಿಸಿದರು.

ವೇದಿಕೆ ಶುದ್ದೀಕರಣ ಹೆಸರಿನಲ್ಲಿ ನಡೆದಿರುವ ಕೃತ್ಯವು ಇಡೀ ದಲಿತ


ಉದಯವಾಹಿನಿ ಚಿತ್ರ

ಸಮುದಾಯದ ಭಾವನೆಗಳಿಗ ಧಕ್ಕ ತಂದಿದೆ ಎಂದು ಪಾರ್ಲಿಮೆಂಟ್‌ನಲ್ಲಿ ಆರೋಪಿಸಿ ರಾಹುಲ್ ಗಾಂಧಿ ಪ್ರತಿಭಟಿಸಿದ ಹಿನ್ನಲೆಯಲ್ಲಿ ಅವರ ವಿರುದ್ದ ದಲಿತ ಎಂಬ ಪದ ಬಳಿಕೆಯನ್ನು ಮುಂದಿಟ್ಟು ಕೊಂಡು ಎಫ್‌ಐಆರ್ ಮಾಡಲಾಗಿದೆ. ಸಂವಿಧಾನಬದ್ಧವಾಗಿ ನ್ಯಾಯ ಕೇಳಿದ ನಮ್ಮ ನಾಯಕರಿಗ ಬ್ಲಾಕ್ ಮೇಲ್ ಬದರಿಕೆ ಹಾಕುವ ಪರಿಸ್ಥಿತಿ ನಿರ್ಮಾಣ ಮಾಡಲಾಗಿದೆ ಎಂದು ದೂರಿದರು. ಖರ್ಗೆ ಅವರು ಪರಿಶಿಷ್ಟಜಾತಿಗೆ ಸೇರಿದವರಾಗಿರುವ ಕಾರಣ ಅವರ ಉಪಸ್ಥಿತಿಯಿಂದ ಮೈದಾನ ಅಪವಿತ್ರವಾಗಿದೆ ಎಂಬ ರೀತಿಯಲ್ಲಿ ಬಿಂಬಿಸಿ ಶುದ್ದೀಕರಣ ನಡೆಸಲಾಗಿದೆ ಇದು ಕೇವಲ ರಾಜೀಕಿಯ ವಿರೋಧವಲ್ಲ ಜಾತಿ ಅಧಾರಿತ ಅವಮಾನ ಮತ್ತು ದಲಿತ ಸಮುದಾಯದ ಘನತೆಗೆ ಧಕ್ಕೆಯುಂಟು ಮಾಡಿದೆ. ಜಾತಿ ಮತ್ತು ಧರ್ಮದ ಹೆಸರಿನಲ್ಲಿ ಜನರನ್ನು ವಿಭಜಿಸುವ ಪ್ರಯತ್ನಗಳು ದೇಶದ ಪ್ರಜಾಪ್ರಭುತ್ವ ವ್ಯವಸ್ಥೆ ಹಾಗೂ ಸಾಮಾಜಿಕ ಸೌಹಾರ್ದತೆಗ ಅಪಾಯಕಾರಿಯಾಗಿವೆ. ರಾಜಕೀಯ ಲಾಭಕ್ಕಾಗಿ ಸಮಾಜದಲ್ಲಿ ದ್ವೇಷ ಮತ್ತು ಅಶಾಂತಿ ಮೂಡಿಸುವಂತಹ ಕೃತ್ಯಗಳಿಗ ಕಡಿವಾಣ ಹಾಕಬೇಕಿದೆ ಎಂದು ಆಗ್ರಹಿಸಿದರು. ಈ ಸಂದರ್ಭದಲ್ಲಿ ಜಿಲ್ಲಾ ಕಾಂಗ್ರೇಸ್ ಪ್ರಚಾರ ಸಮಿತಿಯ ಉಪಾಧ್ಯಕ್ಷ ವಿ,ರಮಾನುಜ, ಜಿಲ್ಲಾ ಸಂಯೋಜಕ ಗಿರೀಶ್, ಸದಸ್ಯರಾದ ನಾಗರಾಜ್ ಗೌಡ, ಪಿ.ನಾರಾಯಣಪ್ಪ, ವೆಂಕಟೇಶ್ ರಾಜು, ಸುಬ್ರಮಣಿ, ರಾಮಮೂರ್ತಿ ನಾಯ್ಡು, ರಂಜಿತ್ ಕುಮಾರ್, ಮುನಿಯಪ್ಪ, ದೇವಕುಮಾರ್, ಕೆ.ಎನ್. ಸುರೇಶ್, ಶ್ರೀರಾಮುಲು, ವಿ.ರೂಪ ಇದ್ದರು.

> ಭಾರತದ ಸಂವಿಧಾನ ಶಿಲ್ಪಿ ಡಾ.ಬಿ.ಆರ್.ಅಂಬೇಡ್ಕರ್ ಅವರು ದೇಶದಲ್ಲಿ ಸಮಾನತೆ, ಸ್ವಾತಂತ್ರ್ಯ ಹಾಗೂ ಸಾಮಾಜಿಕ ನ್ಯಾಯವನ್ನು ಸ್ಥಾಪಿಸುವ ಉದ್ದೇಶದಿಂದ ಸಂವಿಧಾನದಲ್ಲಿ ಮಹತ್ವದ ಹಕ್ಕುಗಳನ್ನು ಕಲ್ಪಿಸಿದ್ದಾರೆ.- ಉಪಾಧ್ಯಕ್ಷ ವಿ.ರಾಜಪ್ಪ

### ಸಂವಿಧಾನದ ಮೂಲ ಆಶಯ

ಸಂವಿಧಾನದ 17ನೇ ವಿಧಿಯಡಿ ಅಸ್ಪೃಶ್ಯತೆಯನ್ನು ಸಂಪೂರ್ಣವಾಗಿ ನಿಷೇಧಿಸಲಾಗಿದೆ. ಆದರೂ ಸಾರ್ವಜನಿಕವಾಗಿ ಜಾತೀಯತೆಯನ್ನು ಪ್ರದರ್ಶಿಸುವ ಮೂಲಕ ಸಂವಿಧಾನದ ಮೂಲ ಆಶಯಗಳನ್ನ ಅಪಮಾನಿಸುವಂತಹ ಘಟನೆಗಳು ನಡೆಯುತ್ತಿರುವುದು ದುರದೃಷ್ಟಕರ ಎಂದು ವಿಷಾಧಿಸಿದರು.



# ಘನತ್ಯಾಜ್ಯ ವಿಲೇವಾರಿ ಘಟಕದಲ್ಲಿ ಕಸ ಸಮಗ್ರ ಸಂಸ್ಕರಣೆ ಮೂಲಕ ಪಾರಂಪರಿಕ ತ್ಯಾಜ್ಯಕ್ಕೆ ಮುಕ್ತಿ

• ಉದಯವಾಹಿನಿ, ಚಿಕ್ಕನಾಯಕನಹಳ್ಳಿ

ಘನತ್ಯಾಜ್ಯ ವಿಲೇವಾರಿ ಘಟಕದಲ್ಲಿ ಶೇಖರಿಸಲಾಗಿದ್ದ ಪಾರಂಪರಿಕ ತ್ಯಾಜ್ಯವನ್ನು ಸರಿಯಾದ ರೀತಿಯಲ್ಲಿ ಸಂಸ್ಕರಿಸುವ ಮೂಲಕ ಕಸದ ಸಮಸ್ಯೆಯನ್ನು ತಪ್ಪಿಸಿ, ಇದರಿಂದ ಗೊಬ್ಬರವನ್ನು ತಯಾರಿಸಿ ರೈತರಿಗೆ ಕಡಿಮೆ ಬೆಲೆಯಲ್ಲಿ ನೀಡುವಂತೆ ಶಾಸಕ ಸಿ.ಬಿ.ಸುರೇಶ್‌ಬಾಬು ಸೂಚಿಸಿದರು.

ಪಟ್ಟಣದ ಹೊರವಲಯದಲ್ಲಿರುವ ಘನತ್ಯಾಜ್ಯ ವಿಲೇವಾರಿ ಘಟಕದಲ್ಲಿ ಕಸ ವಿಲೇವಾರಿ ಮಾಡುವ ಯಂತ್ರಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ಈ ಘಟಕದಲ್ಲಿರುವ ಸುಮಾರು 25 ವರ್ಷಗಳಿಂದ ಪಾರಂಪರಿಕ ಕಸವನ್ನು ಈ ಯಂತ್ರಗಳ ಮೂಲಕ ಸರಿಯಾದ ರೀತಿಯಲ್ಲಿ 50 ದಿನಗಳಲ್ಲಿ ವಿಲೇವಾರಿ ಮಾಡಿ ಇದರಲ್ಲಿ ಹಸಿ ಕಸ ಹಾಗೂ ಒಣ ಕಸಗಳನ್ನು ಬೇರ್ಪಡಿಸಿ ಸರಿಯಾದ ರೀತಿಯಲ್ಲಿ ಗೊಬ್ಬರನವ್ನು ತಯಾರಿಸಿ ಅದನ್ನು ರೈತರಿಗೆ ಮಾರಾಟ ಮಾಡಿ ಸಾಧ್ಯವಾದಷ್ಟೂ ಭೂಮಿಗೆ ಯಾವುದೇ ರೀತಿಯ ತ್ಯಾಜ್ಯ ಸೇರದಂತೆ ಎಚ್ಚರಿಕೆ ವಹಿಸಿ ಎಂದರು.

ಕಸವಿಲೇವಾರಿಯು ಪ್ರತಿ ಮನೆಗಳಿಂದಲೇ ಮಾಡಿದಾಗ ಮಾತ್ರ ಈ ಕಸದ ಸಮಸ್ಯೆ ತಪ್ಪುತ್ತದೆ ಎಂದ ಅವರು, ಗಾಜು, ಪ್ಲಾಸ್ಟಿಕ್‌ನಂತಹ ವಸ್ತುಗಳನ್ನು ಸರಿಯಾದ ರೀತಿಯಲ್ಲಿ ಬೇರ್ಪಡಿಸಿ ಹಸಿ ಕಸದಿಂದ ತಯಾರಿಸಬಹುದಾದಂತಹ ಇಂಜಿನಿಯರ್ ಮಂಜುನಾಥ್ ಮಾತನಾಡಿ, ಪಟ್ಟಣದಲ್ಲಿ ಪ್ರತಿದಿನ ಸುಮಾರು 10 ಟನ್ ಕಸ ಶೇಖರಣೆಯಾಗುತ್ತಿದ್ದು ಅಂದಿನ ಕಸವನ್ನು ಅಂದೇ ಸರಿಯಾದ ರೀತಿಯಲ್ಲಿ ವಿಂಗಡಣೆ ಮಾಡಲಾಗುತ್ತಿದ್ದು ಇಷ್ಟು ದಿನ ಶೇಖರಣೆಯಾಗಿದ್ದ ಕಸವನ್ನು ಈ ಯಂತ್ರದ ಮೂಲಕ ಅದಷ್ಟು ವಿಲೇ ಮಾಡಲಾಗುವುದು.

# ಜನರ ಸಮಸ್ಯೆಗಳನ್ನು ಆಲಿಸಿ,ಸ್ಥಳದಲ್ಲೆ ಸಮಸ್ಯೆ ಪರಿಹಾರ

• ಉದಯವಾಹಿನಿ, ಮಾಲೂರು

ರಾಜ್ಯ ಸರ್ಕಾರದ ಮಹತ್ವಾಕಾಂಕ್ಷೆಯ ಯೋಜನೆಗಳಲ್ಲಿ ಒಂದಾದ 'ಪ್ರಜಾ ಸೇವಾ ಆಂದೋಲನ-ಬಾಗಿಲಿಗೆ ಬಂತು ಸರ್ಕಾರ, ಸೇವೆಗೆ ಇರಲಿ ಸಹಕಾರ' ಕಾರ್ಯಕ್ರಮದ ಮೂಲಕ ಗ್ರಾಮೀಣ ಭಾಗದ ಜನರ ಸಮಸ್ಯೆಗಳನ್ನು ಆಲಿಸಿ, ಸಾಧ್ಯವಾದಷ್ಟು ಸ್ಥಳದಲ್ಲಿಯೇ ಪರಿಹಾರ ಕಲ್ಪಿಸಲಾಗುತ್ತಿದೆ ಎಂದು ಶಾಸಕ ಕೆ.ವೈ.ನಂಜೇಗೌಡ ಹೇಳಿದರು.

ಟೇಕಲ್‌ನಲ್ಲಿ ನಡೆದ ಪ್ರಜಾಸೇವಾ ಇಲಾಖೆಯಿಂದ ಹಮ್ಮಿಕೊಂಡಿದ್ದ ಪ್ರಜಾ ಸೇವಾ ಆಂದೋಲನ ಕಾರ್ಯಕ್ರಮಕ್ಕೆ ಚಾಲನೆ ನೀಡಿ, ಸಾರ್ವಜನಿಕರಿಂದ ಅಹವಾಲುಗಳನ್ನು ಸ್ವೀಕರಿಸಿ ಅವರು ಮಾತನಾಡಿದರು.

ಜನಸಾಮಾನ್ಯರು ತಮ್ಮ ಕೆಲಸ-ಕಾರ್ಯಗಳಿಗಾಗಿ ಸರ್ಕಾರಿ ಕಚೇರಿಗಳಿಗೆ ಅಲೆದಾಡುವುದನ್ನು ತಪ್ಪಿಸುವ ಉದ್ದೇಶದಿಂದ ಸರ್ಕಾರ ಈ ಕಾರ್ಯಕ್ರಮವನ್ನು ರೂಪಿಸಿದೆ. ಪ್ರತಿ ತಿಂಗಳ ಮೊದಲ ಹಾಗೂ ಮೂರನೇ ಹೋಬಳಿ ಕೇಂದ್ರಗಳಲ್ಲಿ ಸಭೆ ನಡೆಸಿ, ವಿವಿಧ ಇಲಾಖೆಗಳ ಸಮಸ್ಯೆ ಹಾಗೂ ಕುಂದುಕೊರತೆಗಳ ಕುರಿತು ಸಾರ್ವಜನಿಕರಿಂದ ಅಹವಾಲುಗಳನ್ನು ಸ್ವೀಕರಿಸಲಾಗುವುದು. ಸ್ಥಳದಲ್ಲಿಯೇ ಪರಿಹರಿಸಲು ಸಾಧ್ಯವಾಗುವ ಸಮಸ್ಯೆಗಳಿಗೆ ಅಧಿಕಾರಿಗಳು ತಕ್ಷಣ ಕ್ರಮ ಕೈಗೊಳ್ಳಬೇಕು ಎಂದು ಸೂಚಿಸಲಾಗಿದೆ


ಉದಯವಾಹಿನಿ ಚಿತ್ರ

ಎಂದರು. ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರ ಆಶಯದಂತೆ ರೂಪಿಸಿರುವ ಈ ಕಾರ್ಯಕ್ರಮದ ನಿಜವಾದ ಪ್ರತಿಫಲ ಬಡವರು ಹಾಗೂ ಸಾಮಾನ್ಯ ಜನರಿಗೆ ತಲುಪಬೇಕು.

ಪಹಣಿ ತಿದ್ದುಪಡಿ, ಖಾತೆ ಬದಲಾವಣೆ, ಮಾಸಾಶನ, ನಿವೇಶನ ಹೊಂದಿರುವವರಿಗೆ ಮನೆ ಮಂಜೂರು, ನಿವೇಶನವಿಲ್ಲದವರಿಗೆ ಉಚಿತ ನಿವೇಶನ, ಪಡಿತರ ಚೀಟಿ, ರಸ್ತೆ, ಸಾರಿಗೆ, ಕುಡಿಯುವ ನೀರು, ದೇವಾಲಯ, ಅಂಗನವಾಡಿ ಹಾಗೂ ಶಾಲಾ ಕಟ್ಟಡ, ವಸತಿ ಯೋಜನೆ, ಪೊಲೀಸ್ ಇಲಾಖೆ ಸೇರಿದಂತೆ ವಿವಿಧ ಇಲಾಖೆಗಳ ಸಮಸ್ಯೆಗಳ ಬಗ್ಗೆ ಅಹವಾಲು ಸಲ್ಲಿಸಬಹುದಾಗಿದೆ ಎಂದು ತಿಳಿಸಿದರು.

ತಹಸೀಲ್ದಾರ್ ಎಂ.ವಿ.ರೂಪ ಮಾತನಾಡಿ. ಸಂಬಂಧಪಟ್ಟ ಇಲಾಖೆಗಳ ಅಧಿಕಾರಿಗಳು ಸ್ಥಳದಲ್ಲಿಯೇ ಸಮಸ್ಯೆಗಳನ್ನು ಪರಿಶೀಲಿಸಿ ಪರಿಹಾರ ಕಲ್ಪಿಸಬೇಕು ಎಂದರು.

# ಸಮಾಜದಲ್ಲಿ ಸೌಹಾರ್ದ ಬೆಳಸಲು ಕರೆ

• ಉದಯವಾಹಿನಿ, ಮಾಲೂರು

ಗಣೇಶೋತ್ಸವ ಕೇವಲ ಹಬ್ಬವಲ್ಲ. ಇದು ಗ್ರಾಮಗಳ ಯುವಕರನ್ನು ಒಗ್ಗೂಡಿಸಿ, ಸಮಾಜದಲ್ಲಿ ಸೌಹಾರ್ದತೆ ಬೆಳೆಸುವುದರ ಜೊತೆಗೆ ನಮ್ಮ ಸಂಸ್ಕೃತಿ ಮತ್ತು ಪರಂಪರೆಯನ್ನು ಮುಂದಿನ ಪೀಳಿಗೆಗೆ ಕೊಂಡೊಯ್ಯುವ ವೇದಿಕೆಯಾಗಿದೆ ಎಂದು ಮಾಲೂರು ಶಾಸಕ ಹಾಗೂ ಕೋಮುಲ್ ಅಧ್ಯಕ್ಷ ಕೆ.ವೈ. ನಂಜೇಗೌಡ ಹೇಳಿದರು. ಮಾಲೂರು ತಾಲ್ಲೂಕಿನ ಟೇಕಲ್ ಹೋಬಳಿಯ ಕೊಮ್ಮನಹಳ್ಳಿ ಗ್ರಾಮದ ಶಾಸಕರ ನಿವಾಸದಲ್ಲಿ ಗೌರಿ-ಗಣೇಶ ಹಬ್ಬದ ಅಂಗವಾಗಿ ತಾಲ್ಲೂಕಿನ ವಿವಿಧ ಗ್ರಾಮಗಳ ಯುವಕರಿಗೆ ಗಣೇಶೋತ್ಸವ ಆಚರಣೆಗೆ ಆರ್ಥಿಕ ಸಹಾಯ ವಿತರಿಸಿ ಮಾತನಾಡಿದರು.

ರಾಜ್ಯ ಯುವ ಕಾಂಗ್ರೇಸ್ ಪ್ರಧಾನ ಕಾರ್ಯದರ್ಶಿ ಸುನೀಲ್ ಗೌಡ ಕೆ.ಎನ್. ಅವರ ನೇತೃತ್ವದಲ್ಲಿ ಯುವಕರಿಗೆ ತಮ್ಮ ತಮ್ಮ ಗ್ರಾಮಗಳಲ್ಲಿ ಗಣೇಶೋತ್ಸವವನ್ನು ಆಚರಿಸಲು ತಲಾ 5 ಸಾವಿರ ಆರ್ಥಿಕ ಸಹಕಾರ ನೀಡಲಾಯಿತು. ಗಣೇಶೋತ್ಸವವನ್ನು ಸಂಭ್ರಮದಿಂದ ಆಚರಿಸುವುದರ ಜೊತೆಗೆ ಶಾಂತಿ, ಸೌಹಾರ್ದತೆ ಕಾಪಾಡಬೇಕು. ತಾಲ್ಲೂಕು ಆಡಳಿತ ಹಾಗೂ ಪೊಲೀಸ್ ಇಲಾಖೆ ನೀಡಿರುವ ನಿಯಮಗಳು ಮತ್ತು ಮಾರ್ಗಸೂಚಿಗಳನ್ನು ಕಡ್ಡಾಯವಾಗಿ ಪಾಲಿಸುವ ಮೂಲಕ ಯಾವುದೇ ಅಹಿತಕರ ಘಟನೆಗಳಿಗೆ ಅವಕಾಶ ನೀಡದೆ ಹಬ್ಬವನ್ನು ಅರ್ಥಪೂರ್ಣವಾಗಿ ಆಚರಿಸಬೇಕು ಎಂದು ಶಾಸಕರು ಯುವಕರಿಗೆ ಕರೆ ನೀಡಿದರು.ತಾಲ್ಲೂಕಿನಲ್ಲಿ ಯಾವುದೇ ಭ್ರಷ್ಟಾಚಾರ ನಡೆದಿಲ್ಲ. ವಿರೋಧ ಪಕ್ಷದವರು ಮಾಡುತ್ತಿರುವ ಟೀಕೆಗಳಿಗೆ ತಲೆಕೆಡಿಸಿಕೊಳ್ಳುವುದಿಲ್ಲ. ತಾಲ್ಲೂಕಿನ ಅಭಿವೃದ್ಧಿ ಹಾಗೂ ತಾಲ್ಲೂಕಿನ ಪ್ರಗತಿಗೆ ಆದ್ಯತೆ ನೀಡಿ ಕೆಲಸ ಮಾಡಲಾಗುತ್ತಿದೆ ಎಂದು ಕೆ.ವೈ. ನಂಜೇಗೌಡ ಹೇಳಿದರು.

# ರೈತರ ಪರ ಹೋರಾಟವೇ ರೈತ ಸಂಘದ ಶಕ್ತಿ : ಶಿವಪುರ ಮಹದೇವಪ್ಪ

• ಉದಯವಾಹಿನಿ, ಗುಂಡ್ಲುಪೇಟೆ

ರೈತರ ಪರ ಗಟ್ಟಿದನಿಯಾಗಿ ಹೋರಾಡಲು ರೈತರಿಂದ ಮಾತ್ರವೇ ಸಾಧ್ಯ. ರೈತರ ಹಕ್ಕುಗಳಿಗಾಗಿ ನಡೆಯುವ ಹೋರಾಟವೇ ರೈತ ಸಂಘದ ಶಕ್ತಿ ಎಂದು ಶಿವಪುರ ಮಹದೇವಪ್ಪ ಹೇಳಿದರು.

ತಾಲ್ಲೂಕಿನ ಬೆಳವಾಡಿ ಗ್ರಾಮದಲ್ಲಿ ಕರ್ನಾಟಕ ರಾಜ್ಯ ರೈತ ಸಂಘದ ಗ್ರಾಮ ಘಟಕ ಉದ್ಘಾಟನಾ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ತಾಲ್ಲೂಕಿನಲ್ಲಿ ರೈತ ಸಂಘ ಅದಮ್ಯ ಶಕ್ತಿಯಾಗಿ ಬೆಳೆಯುತ್ತಿದ್ದು, ರೈತರ ಹಕ್ಕುಗಳನ್ನ ಪಡೆಯಲು ಯಾವುದೇ ಹೋರಾಟಕ್ಕೂ ಸಿದ್ಧವಾಗಿದೆ ಎಂದರು. ವಿವಿಧ ಬೇಡಿಕೆಗಳನ್ನ ಮುಂದಿಟ್ಟುಕೊಂಡು ಸರ್ಕಾರ ಹಾಗೂ ಜಿಲ್ಲಾಡಳಿತದ ವಿರುದ್ಧ



ಉದಯವಾಹಿನಿ ಚಿತ್ರ

ನಡೆಸುತ್ತಿರುವ ಹೋರಾಟ 20 ದಿನ ಪೂರೈಸಿದೆ. ರೈತರು ಇಡೀ ಜಗತ್ತಿಗೆ ಅನ್ನ ಉಣಬಡಿಸುವ ಅಕ್ಷಯ ಪಾತ್ರೆಯಂತಿದ್ದು, ರೈತರ ಹಿತ ಕಾಪಾಡಬೇಕಾದ ಸರ್ಕಾರಗಳು ರೈತರ ಪಾಲಿಗೆ ಮರಣಶಾಸನ ಬರೆಯಲು ಮುಂದಾಗಿರುವುದನ್ನ ಸಹಿಸಲು ಸಾಧ್ಯವಿಲ್ಲ ಎಂದು ಆಕ್ರೋಶ ವ್ಯಕ್ತಪಡಿಸಿದರು.ರೈತರಿಗೆ ದಕ್ಕಬೇಕಿರುವ ಸಾಗುವಳಿ ಚೀಟಿ ನೀಡುವಲ್ಲಿ ವಿಳಂಬ ನೀತಿ ಅನುಸರಿಸಲಾಗುತ್ತಿದೆ. ರೈತರ ಸಮಸ್ಯೆಗಳನ್ನ ಬಗೆಹರಿಸಲು ಅಧಿಕಾರಿಗಳು ಇಚ್ಛಾಶಕ್ತಿ ತೋರಿಸುತ್ತಿಲ್ಲ ಎಂದು ತಾಲ್ಲೂಕು ಅಧ್ಯಕ್ಷ ಶಿವಣ್ಣ ಆರೋಪಿಸಿದರು. ಮುಂದಿನ ದಿನಗಳಲ್ಲಿ ರೈತರ ಬೇಡಿಕೆಗಳನ್ನ ಈಡೇರಿಸದಿದ್ದರೆ ಉಗ್ರ ಹೋರಾಟ ನಡೆಸಲಾಗುವುದು ಎಂದು ಎಚ್ಚರಿಕೆ ನೀಡಿದರು. ಇದೇ ವೇಳೆ ಸುಮಾರು 40 ಮಂದಿ ರೈತರು ರೈತ ಸಂಘಕ್ಕೆ ಸೇರ್ಪಡೆಯಾದರು. ಕಾರ್ಯಕ್ರಮದಲ್ಲಿ ತಾಲ್ಲೂಕು ಪ್ರಧಾನ ಕಾರ್ಯದರ್ಶಿ ಪ್ರಸಾದ್ ಕೋಡಹಳ್ಳಿ, ಹಕ್ಕಲಪುರ ಕುಮಾರ್, ಸುಭಾಷ್, ಜವರಶೆಟ್ಟಿ, ಶಿವಕುಮಾರ್, ರವಿಚಂದ್ರು, ಮಹಿಳಾ ಘಟಕದ ಪ್ರಧಾನ ಕಾರ್ಯದರ್ಶಿ ಚಿಕ್ಕಸಿದ್ದಮ್ಮ, ತಾಲ್ಲೂಕು ಉಪಾಧ್ಯಕ್ಷೆ ನೀಲಮ್ಮ ಸೇರಿದಂತೆ ರೈತ ಸಂಘದ ಕಾರ್ಯಕರ್ತರು ಉಪಸ್ಥಿತರಿದ್ದರು.

# ಕೇಂದ್ರ ಬಿಜೆಪಿ ಸರ್ಕಾರದ ವಿರುದ್ಧ ಮೌನ ಪ್ರತಿಭಟನೆ

## ಬಿಜೆಪಿ ತನ್ನ ಶೋಷಕ ಹಾಗೂ ಮನುಸ್ಮೃತಿಯ ಕಲ್ಪನೆಯ ಮನಸ್ಥಿತಿಯನ್ನು ಮತ್ತೊಮ್ಮೆ ಬಯಲುಗೊಳಿಸಿದೆ

• ಉದಯವಾಹಿನಿ, ಮೈಸೂರು

ನಗರಾ (ಜಿಲ್ಲಾ) ಕಾಂಗ್ರೆಸ್ ಅಧ್ಯಕ್ಷರಾದ ಆರ್. ಮೂರ್ತಿ ರವರು ಮತ್ತು ಕೆಪಿಸಿಸಿ ಪ್ರಚಾರ ಸಮಿತಿ ಉಪಾಧ್ಯಕ್ಷರಾದ ಮಾಜಿ ಸಚಿವರು ಆದ ಎಂ. ಕೋಟೆ ಶಿವಣ್ಣ ರವರ ಸಹಯೋಗದೊಂದಿಗೆ ಮೈಸೂರು ನಗರ (ಜಿಲ್ಲಾ) ಪ್ರಚಾರ ಸಮಿತಿಯ ಅಧ್ಯಕ್ಷರಾದ ರಘುರಾಜೇ ಅರಸ್ ನೇತೃತ್ವದಲ್ಲಿ ಶ್ರೀ ಮಲ್ಲಿಕಾರ್ಜುನ್ ಖರ್ಗೆ ಅವರು ಭಾಷಣ ಮಾಡಿದ ಸ್ಥಳವನ್ನು ಶುದ್ಧೀಕರಣ ,ರಾಹುಲ್ ಗಾಂಧಿಯವರ ವಿರುದ್ಧ ಸುಳ್ಳು ಎಫ್ ಐ ಆರ್ ದಾಖಲೆಸಿರುವ ಬಗ್ಗೆ ಬಿಜೆಪಿ ಸರ್ಕಾರದ ದ್ವೇಷದ ರಾಜಕಾರಣವನ್ನು ಖಂಡಿಸಿ ಬಿಜೆಪಿ ಸರ್ಕಾರದ ವಿರುದ್ಧ ಹಣೆಗೆ ಕಪ್ಪು ಪಟ್ಟಿಯನ್ನು ಧರಿಸುವ ಮೂಲಕ ಕ್ಯಾಂಡಲ್ ಹಿಡಿದು ಮೌನ ಪ್ರತಿಭಟನೆಯನ್ನು ಅರಮನೆಯ ಕೋಟೆ ಆಂಜನೇಯ ಸ್ವಾಮಿ ದೇವಸ್ಥಾನದಿಂದ ಗಾಂಧಿ ವೃತ್ತದ ವರೆಗೆ ಮೌನ ಮೆರವಣಿಗೆ ಮಾಡಲಾಯಿತು.

1 ಪ್ರಜಾಪ್ರಭುತ್ವದ ಧ್ವನಿ ಹಡಗಿಸುವ ಯತ್ನ
2 ದಲಿತ ನಾಯಕರಿಗೆ ಸಂವಿಧಾನಕ್ಕೆ ಅಪಮಾನ
3 ಧ್ವನಿಯನ್ನು ಅಡಗಿಸಲು ಹುನ್ನಾರ ನಡೆಸುತ್ತಿದೆ.

ಉತ್ತರಾಖಂಡದ ಹಲ್ದ್ವಾನಿಯಲ್ಲಿ ಎಐಸಿಸಿ ಅಧ್ಯಕ್ಷರೂ ಹಾಗೂ ರಾಜ್ಯಸಭೆಯ ವಿರೋಧ ಪಕ್ಷದ ನಾಯಕರಾದ ಡಾ. ಮಲ್ಲಿಕಾರ್ಜುನ ಖರ್ಗೆಯವರು ಭಾಷಣ ಮಾಡಿದ ಮೈದಾನದ ಸ್ಥಳವನ್ನು


ಉದಯವಾಹಿನಿ ಚಿತ್ರ

ಬಿಜೆಪಿಯವರು ಶುದ್ಧೀಕರಿಸಿದ ಸಂವಿಧಾನ ವಿರೋಧಿ ಕೃತ್ಯ ಮತ್ತು ಈ ಘಟನೆಯನ್ನು ಖಂಡಿಸಿದ ಲೋಕಸಭೆಯ ವಿರೋಧ ಪಕ್ಷದ ನಾಯಕರಾದ ಶ್ರೀ ರಾಹುಲ್ ಗಾಂಧಿಯವರ ಮೇಲೆ ದ್ವೇಷಪೂರಿತವಾಗಿ ಎಫ್‌ಐಆರ್ ದಾಖಲಿಸಿರುವ ಉತ್ತರಾಖಂಡ ಸರ್ಕಾರದ ನಡವಳಿಕೆಯನ್ನು ಕಾಂಗ್ರೆಸ್ ಪಕ್ಷ ತೀವ್ರವಾಗಿ ಖಂಡಿಸುತ್ತದೆ.ಮಲ್ಲಿಕಾರ್ಜುನ ಖರ್ಗೆಯವರಂತಹ ಹಿರಿಯ ದಲಿತ ನಾಯಕರು ಭಾಷಣ ಮಾಡಿದ ಸ್ಥಳವನ್ನು ಶುದ್ಧೀಕರಿಸುವ ಮೂಲಕ ಬಿಜೆಪಿ ತನ್ನ ಶೋಷಕ ಹಾಗೂ ಮನುಸ್ಮೃತಿಯ ಕಲ್ಪನೆಯ ಮನಸ್ಥಿತಿಯನ್ನು ಮತ್ತೊಮ್ಮೆ ಬಯಲುಗೊಳಿಸಿದೆ. ಇದು ಕೇವಲ ಒಬ್ಬ ವ್ಯಕ್ತಿಗೆ ಆದ ಅಪಮಾನವಲ್ಲ, ಇಡೀ ದಲಿತ ಸಮುದಾಯಕ್ಕೆ ಮತ್ತು ಭಾರತದ ಸಂವಿಧಾನಕ್ಕೆ ಎಸಗಿದ ದ್ರೋಹ.

ಉತ್ತರಾಖಂಡದ ಬಿಜೆಪಿ ಸರ್ಕಾರವು ಪೊಲೀಸ್ ಮತ್ತು ಸರ್ಕಾರಿ ಯಂತ್ರವನ್ನು ದುರುಪಯೋಗಪಡಿಸಿಕೊಂಡು ವಿರೋಧ ಪಕ್ಷದ ನಾಯಕರ ಧ್ವನಿಯನ್ನು ಅಡಗಿಸಲು ಹುನ್ನಾರ ನಡೆಸುತ್ತಿದೆ. ರಾಹುಲ್ ಗಾಂಧಿಯವರ ವಿರುದ್ಧ ದಾಖಲಿಸಲಾಗಿರುವ ಸುಳ್ಳು ಎಫ್‌ಐಆರ್ ಅನ್ನು ಉತ್ತರಾಖಂಡ ಸರ್ಕಾರ ತಕ್ಷಣವೇ ಹಿಂಪಡೆಯಬೇಕು. ಮಲ್ಲಿಕಾರ್ಜುನ ಖರ್ಗೆಯವರನ್ನು ಮತ್ತು ದಲಿತ ಸಮುದಾಯವನ್ನು ಅಪಮಾನಿಸಿದ ಬಿಜೆಪಿಯ ಜಾತೀಯ ಮನಸ್ಥಿತಿಯ ವಿರುದ್ಧ ಸಾರ್ವಜನಿಕ ಕ್ಷಮೆಯಾಚನೆ ಮಾಡಬೇಕು.ಈ ಅಸ್ಪೃಶ್ಯತಾ ಸಾದೃಶ್ಯದ ಕೃತ್ಯವೆಸಗಿದ ತಪ್ಪಿತಸ್ಥರ ವಿರುದ್ಧ ಕಠಿಣ ಕಾನೂನು ಕ್ರಮ ಕೈಗೊಳ್ಳಬೇಕು. ಈ ಕಾರ್ಯಕ್ರಮದಲ್ಲಿ ಡಿಸಿಸಿ ಪ್ರಧಾನ ಕಾರ್ಯದರ್ಶಿಗಳಾದ ಡಿ ಈಶ್ವರ್ ಚಕ್ಕಿ, ಶೌಕತ್ ಅಲಿಖಾನ್, ಕಾರ್ಯದರ್ಶಿಗಳಾದ ಆರ್ ಎಚ್ ಕುಮಾರ್, ಡೈರಿ ವೆಂಕಟೇಶ್ ಡಿಸಿಸಿ ಬ್ಲಾಕ್ ಅಧ್ಯಕ್ಷರಾದ ನಾಗಭೂಷಣ್ ಪ್ರಚಾರ ಸಮಿತಿಯ ಉಪಾಧ್ಯಕ್ಷರಾದ ಲತಾ ರಂಗನಾಥ್, ಶ್ರೀನಿವಾಸ್ ಯಾದವ್ ಮುಖ್ಯ ಸಂಯೋಜಕರುಗಳಾದ ಮಹೇಂದ್ರ, ಕಾಗಿನೆಲೆ, ರಾಕೇಶ್ ಕುಮಾರ್, ಯೋಗೇಶ್ ಪ್ರಚಾರ ಸಮಿತಿಯ ಬ್ಲಾಕ್ ಅಧ್ಯಕ್ಷರಾದ ರಂಗಸ್ವಾಮಿ, ಚಂದ್ರಕಲಾ ಕೃಷ್ಣರಾಜ ವಿಧಾನಸಭಾ ಕ್ಷೇತ್ರದ ಅಧ್ಯಕ್ಷರಾದ ಹೊಯ್ಸಳ ಡಿಸಿಸಿ ಪ್ರಚಾರ ಸಮಿತಿಯ

> ಅಧಿಕಾರದ ಮದದಲ್ಲಿ ಮೆರೆಯುತ್ತಿರುವ ಬಿಜೆಪಿ ಸರ್ಕಾರದ. ಇಂತಹ ಸಂವಿಧಾನ ವಿರೋಧಿ ಮತ್ತು ದ್ವೇಷಪೂರಿತ ನಡೆಯ ವಿರುದ್ಧ ಕಾಂಗ್ರೆಸ್ ಪಕ್ಷವು ಬೀದಿಗಿಳಿದು ಹೋರಾಟ ನಡೆಸಲಿದ್ದು,ಈ ಹೋರಾಟವು ನ್ಯಾಯ ಸಿಗುವವರೆಗೆ ವಿಶ್ರಮಿಸುವುದಿಲ್ಲ. -ಆರ್. ಮೂರ್ತಿ

## ಮಿನಿ ನ್ಯೂಸ್

### ಜಮೀನು ವ್ಯಾಜ್ಯ ಪರಿಹಾರಕ್ಕೆ ಅಧಿಕಾರಿಗಳು ಕ್ರಮವಹಿಸಬೇಕು


ಉದಯವಾಹಿನಿ ಚಿತ್ರ

• ಉದಯವಾಹಿನಿ, ಮಂಡ್ಯ

ಕೊತ್ತತ್ತಿ ಹೋಬಳಿಯಲ್ಲಿ ಹಲವು ವರ್ಷಗಳಿಂದ ಕೃಷಿ ಮಾಡಿ ಕೊಂಡು ಜೀವನ ನಡೆಸು ತ್ತಿರುವ ರೈತ ಕುಟುಂಬಗಳ ಜಮೀನು ವ್ಯಾಜ್ಯಗಳನ್ನು ಪರಿಹರಿಸುವ ನಿಟ್ಟಿನಲ್ಲಿ ಅಧಿಕಾರಿಗಳು ಸಮರ್ಪಕ ವಾಗಿ ಕಾರ್ಯನಿರ್ವಹಿಸ ಬೇಕು ಎಂದು ಶ್ರೀರಂಗಪಟ್ಟಣ ಕ್ಷೇತ್ರದ ಶಾಸಕ ಎ.ಬಿ.ರಮೇಶ ಬಂಡಿಸಿದ್ದೇಗೌಡ ಅವರು ಸೂಚಿಸಿದರು. ತಾಲ್ಲೂಕಿನ ಕೊತ್ತತ್ತಿ-1ನೇ ಹೋಬಳಿಯ ಕೊತ್ತತ್ತಿ ಗ್ರಾಮದ ಶ್ರೀವಿದ್ಯಾಗಣಪತಿ ಪ್ರೌಢಶಾಲಾ ಆವರಣದಲ್ಲಿ ನಡೆದ ಪ್ರಜಾ ಸೇವೆ ಆಂದೋಲನ ಕಾರ್ಯ ಕ್ರಮದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಕೊತ್ತತ್ತಿ ಹೋಬಳಿಯಲ್ಲಿ 1960ಕ್ಕೂ ಹಿಂದಿನಿಂದಲೂ ಕೆಲವು ಕುಟುಂಬಗಳು ಜಮೀನಿನಲ್ಲಿ ವ್ಯವಸಾಯ ಮಾಡಿಕೊಂಡು ಬರುತ್ತಿದ್ದು, ಕೆಲವರ ಬಳಿ ಅಗತ್ಯ ದಾಖಲೆಗಳಿವೆ. ಇನ್ನು ಕೆಲವು ಕುಟುಂಬಗಳ ಬಳಿ ದಾಖಲೆಗಳ ಕೊರತೆಯಿರು ವುದರಿಂದ ಜಮೀನು ಸಂಬಂಧಿತ ವ್ಯಾಜ್ಯಗಳು ಉಂಟಾಗಿವೆ.ಈ ಹಿನ್ನಲೆಯಲ್ಲಿ ಕಂದಾಯ ದಾಖಲೆಗಳನ್ನು ಪರಿಶೀಲಿಸಿ, ಅರ್ಹ ರೈತ ಕುಟುಂಬಗಳಿಗೆ ನ್ಯಾಯ ಒದಗಿಸುವ ನಿಟ್ಟಿನಲ್ಲಿ ಅಧಿಕಾರಿಗಳು ಕ್ರಮವಹಿಸಬೇಕು ಎಂದರು.

ಕಂದಾಯ ಇಲಾಖೆಯ ಹಲವು ದಾಖಲೆಗಳನ್ನು ಡಿಜಿಟಲೀಕರಣಗೊಳಿಸಲಾಗಿದ್ದು, ದಾಖಲೆಗಳಲ್ಲಿ ಫಲಾನುಭವಿಗಳ ಹೆಸರುಗಳು ಲಭ್ಯವಿದ್ದಲ್ಲಿ ನಿಯಮಾನುಸಾರ ಒನ್ ಟು ಫೈಲ್ ಮಾಡಿ, ಅರ್ಹರಿಗೆ ಅಗತ್ಯ ದಾಖಲೆಗಳನ್ನು ಒದಗಿಸಲು ಕ್ರಮ ಕೈಗೊಳ್ಳ ಬೇಕು ಎಂದು ಅಧಿಕಾರಿ ಗಳಿಗೆ ಮನವಿ ಮಾಡಿದರು.

### ಸಮರ್ಪಕ ವಿದ್ಯುತ್ ನೀಡದ ಬೆಸ್ಕಾಂ ವಿರುದ್ಧ ರೈತರ ಆಕ್ರೋಶ


ಉದಯವಾಹಿನಿ ಚಿತ್ರ

• ಉದಯವಾಹಿನಿ, ಹುಳಿಯಾರು

ಸಮರ್ಪಕವಾಗಿ ವಿದ್ಯುತ್ ಪೂರೈಸದೆ ಅಧಿಕಾರಿಗಳು ಹಾಗೂ ಜನಪ್ರತಿನಿಧಿಗಳು ರೈತರ ಬದುಕಿನೊಂದಿಗೆ ಚೆಲ್ಲಾಟವಾಡುತ್ತಿದ್ದಾರೆ. ಹೀಗೆಯೇ ಮುಂದುವರಿದರೆ ನಾವು ಬದುಕು ಕಟ್ಟಿಕೊಳ್ಳಲು ಸಾಧ್ಯವಿಲ್ಲ, ಊರು ಬಿಟ್ಟು ಗುಳೆ ಹೋಗಬೇಕಾಗುತ್ತದೆ ಎಂದು ಹುಳಿಯಾರು ಹೋಬಳಿಯ ಟಿ.ಎಸ್.ಹಳ್ಳಿ ಭಾಗದ ರೈತರು ಹುಳಿಯಾರಿನ ಕೆಪಿಟಿಸಿಎಲ್ ಕಚೇರಿ ಮುಂದೆ ತೀವ್ರ ಆಕ್ರೋಶ ವ್ಯಕ್ತಪಡಿಸಿದರು. ಕಳೆದ 3-4 ದಿನಗಳಿಂದ ರಾತ್ರಿ ವೇಳೆ ನಿರಂತರವಾಗಿ ವಿದ್ಯುತ್ ಕಡಿತಗೊಳ್ಳುತ್ತಿದ್ದು, ಸಿಂಗಲ್ ಫೇಸ್ ಕರೆಂಟ್ ಇಲ್ಲದೆ ಕುಡಿಯುವ ನೀರಿಗೂ ಹಾಗೂ ಮೊಬೈಲ್ ಚಾರ್ಜ್ ಮಾಡಿಕೊಳ್ಳಲು ಪರದಾಡುವಂತಾಗಿದೆ. ಹಗಲಿನಲ್ಲಿ 2 ಗಂಟೆ ಕರೆಂಟ್ ಕೊಡುವುದಾಗಿ ಹೇಳಿ, ಎಲ್‌ಸಿ ಹಾಗೂ ಲೈನ್ ರಿಪೇರಿ ನೆಪದಲ್ಲಿ ಅರ್ಧದಿಂದ ಮುಕ್ಕಾಲು ಗಂಟೆ ಹೆಚ್ಚು ಕಟ್ ಮಾಡಲಾಗುತ್ತಿದೆ ಎಂದು ರೈತರು ದೂರಿದರು.

ಇಲಾಖೆ ನಿಗದಿಪಡಿಸಿದ ಸಮಯದ ಚಾರ್ಟ್ ಪ್ರಕಾರವೇ ನಿಖರವಾಗಿ ವಿದ್ಯುತ್ ನೀಡಬೇಕು. ಮಧ್ಯದಲ್ಲಿ ಪದೇ ಪದೇ ಚಾರ್ಟ್ ಬದಲಾಯಿಸುವುದರಿಂದ ಕೃಷಿ ಹಾಗೂ ಪಂಪ್‌ಸೆಟ್‌ಗಳಿಗೆ ತೀವ್ರ ತೊಂದರೆಯಾಗುತ್ತಿದೆ ಎಂದು ಆಕ್ರೋಶ ಹೊರ ಹಾಕಿದರು. ಪ್ರಸ್ತುತ ದೂರದಲ್ಲಿರುವ ಬರಕನಾಳು ಫೀಡರ್‌ನಿಂದ ವಿದ್ಯುತ್ ಸರಬರಾಜು ಮಾಡುವುದನ್ನು ಕೂಡಲೇ ಕೈಬಿಡಬೇಕು. ಕೇವಲ 3 ಕಿ.ಮೀ ಅಂತರದಲ್ಲಿರುವ ಹುಳಿಯಾರಿನಿಂದ ಟಿ.ಎಸ್. ಹಳ್ಳಿಗೆ ಪ್ರತ್ಯೇಕವಾದ ಪ್ರತ್ಯೇಕ ಟಿ.ಎಸ್.ಹಳ್ಳಿ ಫೀಡರ್ ಮಾಡಿಕೊಡಬೇಕು ಎಂದು ರೈತರು ಆಗ್ರಹಿಸಿದರು. ಜನರಿಗೆ ಅನ್ನ ಸಿಗಲು ಹೇಗೆ ಸಾಧ್ಯ ಎಂದು ಪ್ರಶ್ನಿಸಿದರಲ್ಲದೆ ಅಧಿಕಾರಿಗಳು ಹಾಗೂ ಸಿಬ್ಬಂದಿ ವರ್ಗದವರು ಕೂಡಲೇ ಎಚ್ಚೆತ್ತುಕೊಂಡು ಸಮಸ್ಯೆ ಬಗೆಹರಿಸಬೇಕು.

### ವಾರದಲ್ಲಿ 5ದಿನ ಬ್ಯಾಂಕಿಂಗ್ ವ್ಯವಸ್ಥೆ ಜಾರಿಗೆ ಒತ್ತಾಯ



ಉದಯವಾಹಿನಿ ಚಿತ್ರ

• ಉದಯವಾಹಿನಿ, ತುಮಕೂರು

ವಾರಕ್ಕೆ ಐದು ದಿನಗಳ ಬ್ಯಾಂಕಿಂಗ್ ವ್ಯವಸ್ಥೆ ಜಾರಿಗೆ ತರುವುದು ಸೇರಿದಂತೆ ವಿವಿಧ ಬೇಡಿಕೆಗಳ ಈಡೇರಿಕೆಗೆ ಒತ್ತಾಯಿಸಿ ಬ್ಯಾಂಕ್ ನೌಕರರು ನಗರದಲ್ಲಿ ಪ್ರತಿಭಟನೆ ನಡೆಸಿದರು.

ನಗರದ ಎಸ್‌ಬಿಐ ಬ್ಯಾಂಕ್ ಮುಂಭಾಗ ಯುನೈಟೆಡ್ ಫೋರಮ್ ಆಫ್ ಬ್ಯಾಂಕ್ ಯೂನಿಯನ್ಸ್ ನೇತೃತ್ವದಲ್ಲಿ ಪ್ರತಿಭಟನೆ ನಡೆಯಿತು. ನಗರದ ಎಸ್‌ಬಿಐ ಬ್ಯಾಂಕ್ ಮುಂಭಾಗ ಬ್ಯಾಂಕ್ ನೌಕರರು ಹಾಗೂ ಅಧಿಕಾರಿಗಳು ತಮ್ಮ ಬೇಡಿಕೆಗಳ ಈಡೇರಿಸುವಂತೆ ಘೋಷಣೆಗಳನ್ನು ಕೂಗಿದರು.

ವಾರಕ್ಕೆ ಐದು ದಿನಗಳ ಬ್ಯಾಂಕಿಂಗ್ ವ್ಯವಸ್ಥೆ ಜಾರಿಗೆ ತರಬೇಕು ಎಂಬುದು ಪ್ರಮುಖ ಬೇಡಿಕೆಯಾಗಿದೆ. 2015 ರಿಂದ ಈ ಕುರಿತು ಚರ್ಚೆಗಳು ನಡೆಯುತ್ತಿದ್ದು, 2024ರ ಒಪ್ಪಂದದಲ್ಲಿ ಉಳಿದ ಶನಿವಾರಗಳನ್ನು ರಜಾ ದಿನಗಳನ್ನಾಗಿ ಮಾಡುವ ಪ್ರಸ್ತಾವನೆಗೆ ಒಪ್ಪಿಗೆ ದೊರೆತಿತ್ತು ಎಂದು ಪ್ರತಿಭಟನಾನಿರತ ಬ್ಯಾಂಕ್ ನೌಕರರು ಹೇಳಿದರು.

ಸೋಮವಾರದಿಂದ ಶುಕ್ರವಾರದವರೆಗೆ ಪ್ರತಿದಿನ 40 ನಿಮಿಷಗಳ ಹೆಚ್ಚುವರಿ ಕೆಲಸದ ಅವಧಿಗೆ ಸಂಘಟನೆಗಳು ಸಮ್ಮತಿಸಿದ್ದವು. ಈ ಬೇಡಿಕೆಯ ಅನುಷ್ಠಾನಕ್ಕೆ ಸಂಬಂಧಿಸಿದಂತೆ ಸೆಪ್ಟೆಂಬರ್ 8 ಮತ್ತು 9ರಂದು ಮುಖ್ಯ ಕಾರ್ಮಿಕ ಆಯುಕ್ತರು ಹಾಗೂ ಉಪ ಮುಖ್ಯ ಕಾರ್ಮಿಕ ಆಯುಕ್ತರ ನೇತೃತ್ವದಲ್ಲಿ ಸಂಧಾನ ಸಭೆ ನಡೆದಿತ್ತು. ಹಣಕಾಸು ಸಚಿವಾಲಯದ ಅಧಿಕಾರಿಗಳೂ ಸಭೆಯಲ್ಲಿ ಭಾಗವಹಿಸಿದ್ದರು. ಆದರೆ ಐದು ದಿನಗಳ ಬ್ಯಾಂಕಿಂಗ್ ವ್ಯವಸ್ಥೆ ಜಾರಿಗೆ ಸಂಬಂಧಿಸಿದಂತೆ ಸ್ಪಷ್ಟ ಭರವಸೆ ದೊರೆಯದ ಹಿನ್ನೆಲೆಯಲ್ಲಿ ಯಾವುದೇ ಒಪ್ಪಂದ ಸಾಧ್ಯವಾಗಲಿಲ್ಲ ಎಂದು ಬೇಸರ ವ್ಯಕ್ತಪಡಿಸಿದರು.

# ಗೌರಿ ಗಣೇಶ ಪ್ರತಿಷ್ಠಾಪನೆಗೆ ವಿವಿಧ ಇಲಾಖೆಗಳ ನಿಯಮಗಳ ಪಾಲನೆ ಕಡ್ಡಾಯ

• ಉದಯವಾಹಿನಿ, ಕೋಲಾರ

ನಗರದಲ್ಲಿ ಸಾರ್ವಜನಿಕವಾಗಿ ಗಣೇಶ ಮೂರ್ತಿ ಪ್ರತಿಷ್ಠಾಪನೆ ಮಾಡಬೇಕಾದಲ್ಲಿ ಕಾನೂನು ಬದ್ದವಾಗಿ ನಗರಸಭೆ ಸೇರಿದಂತೆ ವಿವಿಧ ಇಲಾಖೆಗಳ ಅನುಮತಿ ಕಡ್ಡಾಯವಾಗಿದೆ. ಅನುಮತಿ ಪಡೆಯದೆ ಪ್ರತಿಷ್ಟಾಪನೆ ಮಾಡಿದಲ್ಲಿ ಸಂಬಂಧ ಪಟ್ಟವರ ವಿರುದ್ದ ಕಾನೂನು ಉಲ್ಲಂಘನೆಯ ವಿರುದ್ದ ಪ್ರಕರಣ ದಾಖಲಿಸಿ ಕ್ರಮ ಕೈಗೊಳ್ಳಲಾಗುವುದು ಎಂದು ನಗರಸಭೆ ಪೌರಾಯುಕ್ತ ವೆಂಕಟೇಶ್ ನಾಗನೂರು ಖಡಕ್ ಎಚ್ಚರಿಕೆ ನೀಡಿದ್ದಾರೆ. ನಗರದಲ್ಲಿ ಮಾಧ್ಯಮದವರೊಂದಿಗೆ ಅವರು ಮಾತನಾಡಿ ಗೌರಿ ಗಣೇಶ ಮೂರ್ತಿಗಳನ್ನು ಪ್ರತಿಷ್ಠಾಪನೆಗೆ ಸಂಬಂಧಿಸಿದಂತೆ ಸಾರ್ವಜನಿಕರು ವಿವಿಧ ಇಲಾಖೆಗಳಿಗೆ ಅಲೆದಾಡುವ ಬದಲೂ ಒಂದೆ ಕಡೆ ಸಂಬಂಧ ಪಟ್ಟ ಇಲಾಖೆಗಳು ಅನುಮತಿ ನೀಡುವ ಹಾಗೂ ಅನುಮತಿ ನಿರಾಕರಿಸುವಂತ ಆದೇಶಗಳು ಜಾರಿ ಮಾಡುವ ವ್ಯವಸ್ಥೆಯಾದ ಸಿಂಗಲ್ ವಿಂಡೋ ಸಿಸ್ಟಮ್‌ನ್ನು ಜಿಲ್ಲಾಧಿಕಾರಿಗಳು ಜಾರಿ ಮಾಡಿದ್ದಾರೆ ಎಂದರು.

ಸಾರ್ವಜನಿಕರವಾಗಿ ಗೌರಿ ಗಣೇಶ ಪ್ರತಿಷ್ಟಾಪನೆ ಮಾಡ ಬೇಕಾದರೆ ಸಾರ್ವಜನಿಕರಿಗೆ ತೊಂದರೆಯಾಗದಂತ ಆಟದ ಮೈದಾನ ಮುಂತಾದ ಕಡೆ ಸೂಕ್ತ ಜಾಗದಲ್ಲಿ ಪ್ರತಿಷ್ಟಾಪನೆ ಮಾಡ ಬೇಕು.

ವಿದ್ಯುತ್ ಇಲಾಖೆ, ಪೊಲೀಸ್ ಇಲಾಖೆ, ನಗರಸಭೆಯಿಂದ, ಪರಿಸರ ಇಲಾಖೆಯಿಂದ ಅನುಮತಿಗಳನ್ನು ಪಡೆಯ ಬೇಕಾಗಿದೆ ಇವುಗಳೆಲ್ಲಾವು ನಗರಸಭೆಯಲ್ಲಿಯೇ ಒಂದೆಕಡೆ ಅನುಮತಿ ಪತ್ರ ಪಡೆಯುವಂತಾಗಲು ವ್ಯವಸ್ಥೆ ಮಾಡಲಾಗಿದೆ ಸಾರ್ವಜನಿಕರು ಇದನ್ನು ಸದ್ಬಳಿಸಿ ಕೊಳ್ಳುವಂತಾಗ ಬೇಕೆಂದರು.

# ಮನೆ-ಮನೆಗೂ ಹಬ್ಬಿದ ನಕಲಿ ಚಿಕಿತ್ಸೆಯ ಜಾಲ: ಮಾಮೂಲಿ ದಂದೆಯಲ್ಲಿ ಅಧಿಕಾರಿಗಳು ಬ್ಯುಸಿ ನಾ..?

## ಹಳ್ಳಿ-ಹಳ್ಳಿಯಲ್ಲೂ ನಕಲಿ ವೈದ್ಯರ ಹಾವಳಿ: ದಿನಾ-ದಿನಾ ಬಡವರ ಜೀವದ ಜೊತೆ ಚೆಲ್ಲಾಟ!

- **ಇಲಿಯಾಸ್ ಪಟೇಲ್. ಬಳಗಾನೂರ ರಾಜ್ಯ ವಿಶೇಷ ವರದಿಗರರು**

- **ಉದಯವಾಹಿನಿ,ಯಾದಗಿರಿ :**

ಜಿಲ್ಲೆಯ ಸುರಪುರ, ಶಹಾಪುರ, ಕೆಂಭಾವಿ ಹಾಗೂ ಹುಣಸಗಿ ತಾಲ್ಲೂಕು ವ್ಯಾಪ್ತಿಯ ಗ್ರಾಮೀಣ ಭಾಗಗಳಲ್ಲಿ ನಕಲಿ ವೈದ್ಯರ ಹಾವಳಿ ಮಿತಿಮೀರಿದ್ದು, ಸಾರ್ವಜನಿಕರ ಜೀವಕ್ಕೆ ಕಂಟಕವಾಗಿ ಪರಿಣಮಿಸಿದೆ. ಕನಿಷ್ಠ ವೈದ್ಯಕೀಯ ಶಿಕ್ಷಣವಾಗಲಿ, ಮಾನ್ಯತೆ ಪಡೆದ ಪತ್ರಗಳಾಗಲಿ ಇಲ್ಲದ ವ್ಯಕ್ತಿಗಳು ಹಳ್ಳಿಗಳನ್ನೇ ತಮ್ಮ

1. ಸ್ಟೀರಾಯ್ಡ್ ಆಂಟಿಬಯೋಟಿಕ್‌ಗಳ ದುರ್ಬಳಕೆ
2. ವ್ಯವಸ್ಥೆಯ ವೈಫಲ್ಯವೇ ನಕಲಿಗಳ ಬಂಡವಾಳ
3. ಸುಲಭ ಸಾಲ ಮತ್ತು ಮನೆ ಬಾಗಿಲ ಚಿಕಿತ್ಸೆ

'ಸಾಮ್ರಾಜ್ಯ'ವನ್ನಾಗಿ ಮಾಡಿಕೊಂಡು ಬಡ ಹಾಗೂ ಅಜ್ಞಾನಿ ಸಾರ್ವಜನಿಕರ ಆರೋಗ್ಯದ ಜೊತೆ ದಿನನಿತ್ಯ ಆಟವಾಡುತ್ತಿದ್ದಾರೆ.

**ಓದಿದ್ದು ಬೇರೆ, ನೀಡುವ ಚಿಕಿತ್ಸೆಯೇ ಬೇರೆ:** ಈ ಭಾಗದ ಪ್ರತಿಯೊಂದು ಸಣ್ಣ-ಪುಟ್ಟ ಹಳ್ಳಿಗಳಲ್ಲೂ ಯಾವುದೇ ಭಯವಿಲ್ಲದೇ ಕ್ಲಿನಿಕ್‌ಗಳನ್ನು ತೆರೆದಿರುವ ನಕಲಿ ವೈದ್ಯರು, ತಾವೇ ಮಹಾನ್ ಸ್ಪೆಷಲಿಸ್ಟ್‌ಗಳಂತೆ ವರ್ತಿಸುತ್ತಿದ್ದಾರೆ. ಕನಿಷ್ಠ ಪ್ರಥಮ ಚಿಕಿತ್ಸೆ ನೀಡಲು ಅರ್ಹತೆಯಿಲ್ಲದ ಇವರು, ಗಂಭೀರ ಸ್ವರೂಪದ ಕಾಯಿಲೆಗಳಿಗೆ ಹೈ-ಡೋಸ್ ಚಿಕಿತ್ಸೆ ನೀಡಲು ಮುಂದಾಗುತ್ತಿದ್ದಾರೆ.

**ಹೈ-ಡೋಸ್ ಇಂಜೆಕ್ಷನ್ ಮಾಫಿಯಾ:** ಒಂದೇ ದಿನದಲ್ಲಿ ಜ್ವರ ಓಡಿಹೋಗುತ್ತೆ, ಬೆಳಗ್ಗೆ ಇಂಜೆಕ್ಷನ್ ತಗೊಂಡ್ರೆ ಸಾಯಂಕಾಲಕ್ಕೆ ಕೆಲಸಕ್ಕೆ ಹೋಗಬಹುದು ಎಂದು ಕೂಲಿ ಕಾರ್ಮಿಕರಿಗೆ ಹಾಗೂ ರೈತರಿಗೆ ಆಸೆ ತೋರಿಸಲಾಗುತ್ತಿದೆ.





**ಸ್ಟೀರಾಯ್ಡ್ ಹಾಗೂ ಆಂಟಿಬಯೋಟಿಕ್ಸ್‌ಗಳ ದುರ್ಬಳಕೆ:** ರೋಗಿಗಳಿಗೆ ತಕ್ಷಣಕ್ಕೆ ಆರಾಮವೆನಿಸಲು ನಿಯಮಬಾಹಿರವಾಗಿ ಪ್ರಬಲ ಸ್ಟೀರಾಯ್ಡ್‌ಗಳು, ಪೇನ್‌ಕಿಲ್ಲರ್‌ಗಳು ಹಾಗೂ ಹೈ-ಡೋಸ್ ಆಂಟಿಬಯೋಟಿಕ್ಸ್ ಇಂಜೆಕ್ಷನ್‌ಗಳನ್ನು ನೀಡಲಾಗುತ್ತಿದೆ.

ಭವಿಷ್ಯದಲ್ಲಿ ಭೀಕರ ಅಡ್ಡಪರಿಣಾಮ ತಾತ್ಕಾಲಿಕವಾಗಿ ನೋವು ಶಮನವಾದರೂ, ಈ ಅಪಾಯಕಾರಿ ಪ್ರಯೋಗಗಳಿಂದಾಗಿ ಅನೇಕ ರೋಗಿಗಳಲ್ಲಿ ಮೂತ್ರಪಿಂಡ (ಕಿಡ್ನಿ) ವೈಫಲ್ಯ, ಪಿತ್ತಜನಕಾಂಗ (ಲಿವರ್) ಹಾನಿ ಹಾಗೂ ಉಂಟಾಗುತ್ತಿದೆ. ವೈದ್ಯಕೀಯ ಜ್ಞಾನವಿಲ್ಲದೆ ನೀಡುವ ಇಂಜೆಕ್ಷನ್‌ಗಳಿಂದ ಕೆಲವರಲ್ಲಿ ಅಂಗವಿಕಲತೆ ಹಾಗೂ ಶಾಶ್ವತ ವೈದ್ಯಕೀಯ ಸಮಸ್ಯೆಗಳು ತಲೆದೋರುತ್ತಿವೆ.

**ಸರ್ಕಾರಿ ಆರೋಗ್ಯ ವ್ಯವಸ್ಥೆಯ ವೈಫಲ್ಯವೇ ನಕಲಿಗಳ ಬಂಡವಾಳ!** ಗ್ರಾಮೀಣ ಭಾಗದಲ್ಲಿ ನಕಲಿ ವೈದ್ಯರ ನೆಟ್‌ವರ್ಕ್ ಇಷ್ಟೊಂದು ಬಲಗೊಳ್ಳಲು ಮೂಲ ಕಾರಣವೇ ಸರ್ಕಾರಿ ಆರೋಗ್ಯ ವ್ಯವಸ್ಥೆಯ ಅಧೋಗತಿ.

**ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ವೈದ್ಯರ ಅಭಾವ:** ಅನೇಕ ಹಳ್ಳಿಗಳಲ್ಲಿ ಆರೋಗ್ಯ ಕೇಂದ್ರಗಳಿದ್ದರೂ ವೈದ್ಯರಿರುವುದಿಲ್ಲ. ಇದ್ದರೂ ಸಮಯಕ್ಕೆ ಸರಿಯಾಗಿ ಸಿಗುವುದಿಲ್ಲ.

**ದೂರದ ತಾಲ್ಲೂಕು ಆಸ್ಪತ್ರೆಗಳು:** ಸಣ್ಣ-ಪುಟ್ಟ ಜ್ವರ ಅಥವಾ ನೋವಿಗೂ ಕಿಲೋಮೀಟರ್‌ಗಟ್ಟಲೆ ಪ್ರಯಾಣಿಸಿ ಶಹಾಪುರ ಅಥವಾ ಸುರಪುರಕ್ಕೆ ಹೋಗುವುದು ಬಡವರಿಗೆ ಆರ್ಥಿಕವಾಗಿ ಹೊರೆಯಾಗುತ್ತದೆ.

**ಸುಲಭ ಸಾಲ ಮತ್ತು ಮನೆ ಬಾಗಿಲ ಚಿಕಿತ್ಸೆ:** ನಕಲಿ ವೈದ್ಯರು ಮನೆ ಬಾಗಿಲಿಗೇ ಬಂದು ಚಿಕಿತ್ಸೆ ನೀಡುವುದು, ಸಾಲದ ರೂಪದಲ್ಲಿ ಆಮೇಲೆ ಹಣ ಪಡೆಯುವುದು ಮಾಡುತ್ತಿರುವುದರಿಂದ ಸಾರ್ವಜನಿಕರು ಅನಿವಾರ್ಯವಾಗಿ ಇವರ ಬಲೆಗೆ ಬೀಳುತ್ತಿದ್ದಾರೆ.

**ಫೋಟೋ ಶೂಟ್‌ಗಷ್ಟೇ ಸೀಮಿತವೇ ಅಧಿಕಾರಿಗಳ ದಾಳಿ?** ಸಾರ್ವಜನಿಕರಿಂದ ದೂರುಗಳು ಬಂದಾಗ ಅಥವಾ ಮಾಧ್ಯಮಗಳಲ್ಲಿ ವರದಿ ಪ್ರಸಾರವಾದಾಗ ಮಾತ್ರ ಆರೋಗ್ಯ ಇಲಾಖೆಯ ಅಧಿಕಾರಿಗಳು ಜಾಗೃತರಾದಂತೆ ನಟಿಸುತ್ತಾರೆ.

**ಕ್ಯಾಮೆರಾಗೆ ಪೋಸ್, ಆಮೇಲೆ ಸೈಲೆಂಟ್:** ಒಂದೆರಡು ಕ್ಲಿನಿಕ್‌ಗಳಿಗೆ ಭೇಟಿ ನೀಡಿ, ದಾಳಿ ಮಾಡಿದ್ದೇವೆ, ಕ್ಲಿನಿಕ್ ಬಂದ್ ಮಾಡಿಸಿದ್ದೇವೆ ಎಂದು ಪತ್ರಿಕೆಗಳಿಗೆ ಫೋಟೋ ನೀಡಿ ಪ್ರಚಾರ ಗಿಟ್ಟಿಸಿಕೊಳ್ಳುತ್ತಾರೆ.



> ಸುರಪುರ, ಕೆಂಭಾವಿ, ಶಹಾಪುರ ಹಾಗೂ ಹುಣಸಗಿ ಭಾಗದಲ್ಲಿ ನಕಲಿ ವೈದ್ಯರ ಜಾಲ ದೊಡ್ಡ ಮಟ್ಟದಲ್ಲಿ ಹಬ್ಬಿದೆ. ಇವರ ಚಿಕಿತ್ಸೆಯಿಂದ ಬಡ ರೋಗಿಗಳ ಕಿಡ್ನಿ ವೈಫಲ್ಯವಾಗುತ್ತಿರುವುದು ಗಂಭೀರವಾದ ವಿಷಯ. ಆರೋಗ್ಯ ಇಲಾಖೆಯ ಅಧಿಕಾರಿಗಳು ದಾಳಿಯ ಹೆಸರಿನಲ್ಲಿ ಫೋಟೋ ಫ್ರೇಮ್‌ಗೋಸ್ಕರ ಡ್ರಾಮಾ ಮಾಡುವುದನ್ನು ತಕ್ಷಣವೇ ನಿಲ್ಲಿಸಬೇಕು. ತಪ್ಪಿತಸ್ಥರ ವಿರುದ್ಧ ಜೈಲು ಶಿಕ್ಷೆಯಾಗುವಂತೆ ಜಾಮೀನು ರಹಿತ FIR ದಾಖಲಿಸಬೇಕು. ಮುಂಬರುವ ದಿನಗಳಲ್ಲಿ ಈ ನಕಲಿ ವೈದ್ಯರ ನಿಯಂತ್ರಣಕ್ಕೆ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳದಿದ್ದರೆ ಜಿಲ್ಲಾಡಳಿತ ಹಾಗೂ DHO ಕಚೇರಿಗೆ ಮುತ್ತಿಗೆ ಹಾಕಿ ಉಗ್ರ ಹೋರಾಟ ನಡೆಸುತ್ತೇವೆ.
>
> ನಿಂಗಣ್ಣ ಗೋನಾಲ್ ( ಜಿಲ್ಲಾ ಸಂಚಾಲಕರು, ದಲಿತ ಸಂಘರ್ಷ ಸಮಿತಿ ಯಾದಗಿರಿ )

**ಹಣದ ಲಾಬಿ ಮತ್ತು ಸೀಜ್ ಹೆಸರಿನ ಕಣ್ಣಾಮುಚ್ಚಾಲೆ:** ಅಧಿಕಾರಿಗಳ ದಾಳಿ ಮುಗಿದು ಒಂದೆರಡು ದಿನ ಕಳೆಯುತ್ತಿದ್ದಂತೆ, ಅದೇ ನಕಲಿ ವೈದ್ಯರು ಮತ್ತೆ ಬಾಗಿಲು ತೆರೆದು ದರ್ಬಾರ್ ಮುಂದುವರಿಸುತ್ತಾರೆ. ಸ್ಥಳೀಯ ಅಧಿಕಾರಿಗಳ ಕಣ್ಣೊರೆಸುವ ತಂತ್ರ ಹಾಗೂ ತಿಂಗಳ ಮಾಮೂಲಿ ಒಪ್ಪಂದವೇ ಇದಕ್ಕೆ ಕಾರಣ ಎಂಬ ಗಂಭೀರ ಆರೋಪಗಳು ಕೇಳಿಬರುತ್ತಿವೆ.

## ತೇಗು ಸಿರಿ ಯೋಜನೆಯ ಸದ್ಬಳಕೆಗೆ ಶಾಸಕ ವಿಠ್ಠಲ ಕಟಕದೊಂಡ ಮನವಿ

- **ಉದಯವಾಹಿನಿ, ವಿಜಯಪುರ, :**

ಗ್ರಾಮೀಣ ಜನರ ಸಮಸ್ಯೆಗಳಿಗೆ ತ್ವರಿತವಾಗಿ ಸ್ಪಂದಿಸಿ, ಸಾಧ್ಯವಾದಷ್ಟು ಅಹವಾಲುಗಳನ್ನು ಸ್ಥಳದಲ್ಲೇ ಪರಿಹರಿಸುವ ಉದ್ದೇಶದಿಂದ ಸರ್ಕಾರ ಪ್ರಜಾ ಸೇವಾ ಆಂದೋಲನವನ್ನು ಜಾರಿಗೊಳಿಸಿದ್ದು, ಸಾರ್ವಜನಿಕರು ಇದರ ಸದುಪಯೋಗ ಪಡೆದುಕೊಳ್ಳಬೇಕು ಎಂದು ನಾಗಠಾಣ ಶಾಸಕ ವಿಠ್ಠಲ ಕಟಕದೊಂಡ ಹೇಳಿದರು.

ವಿಜಯಪುರ ತಾಲ್ಲೂಕಿನ ನಾಗಠಾಣದಲ್ಲಿ ನಡೆದ ತಾಲ್ಲೂಕು ಮಟ್ಟದ ಪ್ರಜಾ ಸೇವಾ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದ ವಿವಿಧ ಇಲಾಖೆಗಳ ಅಧಿಕಾರಿಗಳು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದು, ಸಾರ್ವಜನಿಕರ ಅಹವಾಲು ಸ್ವೀಕರಿಸಲು ಪ್ರತ್ಯೇಕ ಕೌಂಟರ್‌ಗಳನ್ನು ತೆರೆಯಲಾಗಿದೆ. ಅಧಿಕಾರಿಗಳು ಸ್ವೀಕರಿಸಿದ ಅರ್ಜಿಗಳನ್ನು ಪರಿಶೀಲಿಸಿ, ಅರ್ಹ ಸಮಸ್ಯೆಗಳಿಗೆ ತ್ವರಿತವಾಗಿ ಪರಿಹಾರ ಒದಗಿಸಬೇಕು ಎಂದು ಸೂಚಿಸಿದರು.

ಅರಣ್ಯೀಕರಣಕ್ಕೆ ಉತ್ತೇಜನ ನೀಡುವ ಮೂಲಕ ಪರಿಸರ ಸಂರಕ್ಷಣೆ ಹಾಗೂ ಮಳೆಯ ಪ್ರಮಾಣ ಹೆಚ್ಚಿಸುವ ಉದ್ದೇಶದಿಂದ ರಾಜ್ಯ ಸರ್ಕಾರ ತೇಗು ಸಿರಿ ಯೋಜನೆ ಜಾರಿಗೊಳಿಸಿದೆ. ರೈತರು ಯೋಜನೆಯಡಿ ಉಚಿತವಾಗಿ ತೇಗು ಸಸಿಗಳನ್ನು ಪಡೆದು ತಮ್ಮ ಜಮೀನಿನಲ್ಲಿ ಬೆಳೆಸಬೇಕು. ಸುಮಾರು 18 ವರ್ಷಗಳ ಕಾಲ ತೇಗು ಮರಗಳನ್ನು ಬೆಳೆಸಿದರೆ ಉತ್ತಮ ಆದಾಯ ಗಳಿಸುವ ಅವಕಾಶವಿದ್ದು, ರೈತರು ಯೋಜನೆಯ ಸಂಪೂರ್ಣ ಪ್ರಯೋಜನ ಪಡೆದುಕೊಳ್ಳಬೇಕು ಎಂದು ಮನವಿ ಮಾಡಿದರು.

ಮಹಾತ್ಮ ಗಾಂಧೀಜಿಯವರ 'ಗ್ರಾಮಗಳ ಅಭಿವೃದ್ಧಿಯೇ ದೇಶದ ಅಭಿವೃದ್ಧಿ' ಎಂಬ ಆಶಯದಂತೆ ಗ್ರಾಮೀಣ ಪ್ರದೇಶಗಳ ಸಮಗ್ರ ಅಭಿವೃದ್ಧಿಗೆ ಸರ್ಕಾರ ಆದ್ಯತೆ ನೀಡುತ್ತಿದೆ. ಪ್ರಜಾ ಸೇವಾ ಆಂದೋಲನದ ಮೂಲಕ ಗ್ರಾಮೀಣ ಮಟ್ಟದಲ್ಲಿಯೇ ಜನರ ಅಹವಾಲುಗಳನ್ನು ಆಲಿಸಿ, ಅವುಗಳಿಗೆ ಪರಿಹಾರ ಕಲ್ಪಿಸುವ ಪ್ರಯತ್ನ ನಡೆಯುತ್ತಿದೆ ಎಂದರು.

## ವಿದ್ಯಾರ್ಥಿಗಳ ಶಿಕ್ಷಣಕ್ಕೆ ಪ್ರೋತ್ಸಾಹ ನಮ್ಮೆಲ್ಲರ ಜವಾಬ್ದಾರಿ : ಸಚಿವ ಲಕ್ಷ್ಮಣ ಸವದಿ

- **ಉದಯವಾಹಿನಿ, ಅಥಣಿ:**

ವಿದ್ಯಾರ್ಥಿಗಳ ವಿದ್ಯಾಭ್ಯಾಸಕ್ಕೆ ಪ್ರೋತ್ಸಾಹ ನೀಡುವುದರ ಜೊತೆಗೆ ಅವರ ಬದುಕಿಗೆ ಸ್ಫೂರ್ತಿ ನೀಡುವ ಉದ್ದೇಶದಿಂದ ಶ್ರೀ ರಾಮ್ ಫೈನಾನ್ಸ್ ಬ್ಯಾಂಕ್‌ನ ಸಂಸ್ಥೆಗಳು ಸಾಮಾಜಿಕ ಸೇವಾ ಕಾರ್ಯಗಳಿಗೆ ಮುಂದಾಗುತ್ತಿರುವುದು ಉತ್ತಮ ಬೆಳವಣಿಗೆಯಾಗಿದೆ ಎಂದು ಸಹಕಾರ ಸಚಿವ ಲಕ್ಷ್ಮಣ ಸವದಿ ಹೇಳಿದರು.

ಅಥಣಿ ನಗರದ ಆರ್ ಹೆಚ್ ಕುಲಕರ್ಣಿ ಸಭಾಭವನದಲ್ಲಿ ಶ್ರೀ ರಾಮ್ ಫೈನಾನ್ಸ್ ಬ್ಯಾಂಕ್‌ನ ''ರಾಮ ಸೇವಾ ಸಂಕಲ್ಪ'' ವತಿಯಿಂದ ಆಯೋಜಿಸಲಾಗಿದ್ದ ವಿದ್ಯಾರ್ಥಿ ವೇತನ ವಿತರಣಾ ಕಾರ್ಯಕ್ರಮಕ್ಕೆ ಸಹಕಾರಿ ಸಚಿವ ಲಕ್ಷ್ಮಣ ಸವದಿ ಅವರು ದೀಪ ಬೆಳಗಿಸುವ ಮೂಲಕ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಶಿಷ್ಯ ವೇತನಕ್ಕೆ ಅರ್ಹರಾದ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿ ವೇತನ ಪತ್ರಿಕೆಗಳನ್ನು ನೀಡಿ ಮಾತನಾಡಿದರು

ವಿದ್ಯಾಭ್ಯಾಸಕ್ಕೆ ಪ್ರೋತ್ಸಾಹ, ಬದುಕಿಗೆ ಸ್ಫೂರ್ತಿ ಎಂಬ ಧ್ಯೇಯವಾಕ್ಯದೊಂದಿಗೆ ಶ್ರೀ ರಾಮ್ ಫೈನಾನ್ಸ್ ಬ್ಯಾಂಕ್‌ನ ''ರಾಮ ಸೇವಾ ಸಂಕಲ್ಪ'' ಯೋಜನೆಯಡಿ ಅಥಣಿ ಮತಕ್ಷೇತ್ರದ 1 ಸಾವಿರ ವಿದ್ಯಾರ್ಥಿಗಳಿಗೆ ಸುಮಾರು 40 ಲಕ್ಷ ರೂ.ಗಳನ್ನು ವಿದ್ಯಾರ್ಥಿಗಳ ಶೈಕ್ಷಣಿಕ ಭವಿಷ್ಯಕ್ಕೆ ನೆರವಾಗುತ್ತಿರುವುದು ಶ್ಲಾಘನೀಯ.

ಸಂಸ್ಥೆಯ ಲಾಭಾಂಶದಲ್ಲಿನ ಸಿಎಸ್‌ಆರ್ ನಿಧಿಯನ್ನು ಸಮಾಜದ ಸದ್ವಿನಿಯೋಗಕ್ಕೆ ಬಳಸಿಕೊಂಡು ಆರ್ಥಿಕವಾಗಿ ಹಿಂದುಳಿದ ವಿದ್ಯಾರ್ಥಿಗಳಿಗೆ ನೆರವು ನೀಡುತ್ತಿರುವುದು ಉತ್ತಮ ಸೇವಾ ಕಾರ್ಯವಾಗಿದೆ. ವಿದ್ಯಾರ್ಥಿಗಳ ಶಿಕ್ಷಣಕ್ಕೆ ಸರ್ಕಾರದ ಜೊತೆಗೆ ವಿವಿಧ ಸಂಘ-ಸಂಸ್ಥೆಗಳು, ಬ್ಯಾಂಕ್‌ಗಳು ಹಾಗೂ ಉದ್ಯಮಿಗಳು ಕೈಜೋಡಿಸಿದರೆ ಸಮಾಜದ ಶೈಕ್ಷಣಿಕ ಪ್ರಗತಿಗೆ ಮತ್ತಷ್ಟು ವೇಗ ದೊರೆಯಲಿದೆ ಎಂದು ಲಕ್ಷ್ಮಣ ಸವದಿ ಹೇಳಿದರು.ಈ ವೇಳೆ ಕವಲಗುಡ್ಡದ ಅಮರೇಶ್ವರ ಮಹಾರಾಜರು, ಶಾಖಾ ವ್ಯವಸ್ಥಾಪಕ ಪ್ರವೀಣ ಪಾಟೀಲ ಸೇರಿದಂತೆ ಶ್ರೀರಾಮ ಫೈನಾನ್ಸ ಅಥಣಿ ಘಟಕದ ಸಿಬ್ಬಂದಿಗಳು ಹಾಗೂ ವಿದ್ಯಾರ್ಥಿಗಳು ಮತ್ತು ಪೊಷಕರು ಉಪಸ್ಥಿತರಿದ್ದರು.

# ಗಣೇಶ ಹಬ್ಬವನ್ನು ಶಾಂತಿಯುತವಾಗಿ ಆಚರಿಸಿ; ಡಿವೈಎಸ್ಪಿ ಶಂಕರಗೌಡ ಪಾಟೀಲ್

- **ಉದಯವಾಹಿನಿ, ಚಿತ್ತಾಪುರ:**

ಪ್ರತಿವರ್ಷದಂತೆ ಈ ವರ್ಷವು ಕೂಡ ಚಿತ್ತಾಪುರದಲ್ಲಿ ಶಾಂತಿಯುತವಾಗಿ, ಸಡಗರ, ಸಂಭ್ರಮ ಹಾಗೂ ವಿಜೃಂಭಣೆಯಿಂದ ಗಣೇಶ ಹಬ್ಬವನ್ನು ಆಚರಿಸಿ ಎಂದು ಡಿವೈಎಸ್ಪಿ ಶಂಕರಗೌಡ ಪಾಟೀಲ್ ಹೇಳಿದರು.

ಪಟ್ಟಣದ ಪೊಲೀಸ್ ಠಾಣೆ ಆವರಣದಲ್ಲಿ ಗಣೇಶ ಚತುರ್ಥಿ ಹಬ್ಬದ ಪ್ರಯುಕ್ತ ಚಿತ್ತಾಪುರ ಪೊಲೀಸ್ ಠಾಣೆ ವತಿಯಿಂದ ಹಮ್ಮಿಕೊಂಡಿದ್ದ ಶಾಂತಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಚಿತ್ತಾಪುರದಲ್ಲಿ ಯಾವುದೇ ಜಾತಿ ಜನಾಂಗದವರ ಹಬ್ಬಗಳಾಗಿರಲಿ, ಎಲ್ಲರೂ ಸೇರಿಕೊಂಡು ಶಾಂತಿಯುತವಾಗಿ ಹಬ್ಬಗಳನ್ನು ಆಚರಿಸುತ್ತಾರೆ. ಇಲ್ಲಿ ನಾನು 12 ವರ್ಷಗಳಿಂದ ಸೇವೆ ಸಲ್ಲಿಸುತ್ತಿದ್ದೇನೆ. ನಾನು ಯಾವತ್ತೂ ಅಹಿತಕರ ಘಟನೆಗಳು ಜರುಗಿದ್ದು ನೋಡಿಲ್ಲ, ಹೀಗಾಗಿಯೇ ಚಿತ್ತಾಪುರ ಶಾಂತಿ ಪ್ರಿಯ ತಾಲ್ಲೂಕು ಎಂದು ಹೆಸರುವಾಸಿಯಾಗಿದೆ ಎಂದು ಮೆಚ್ಚುಗೆ ವ್ಯಕ್ತ ಪಡಿಸಿದರು.

ಗಣೇಶ ಮಂಡಳಿಯವರು ಐದು ಜನರನ್ನು ಸ್ವಯಂ ಸೇವಕರನ್ನು ನೇಮಿಸಬೇಕು. ಸುರಕ್ಷತೆಗೆ ಹೆಚ್ಚು ಒತ್ತು ಕೊಡಬೇಕು. ಗಣೇಶ ಭಾವಚಿತ್ರವಿರುವ ಬ್ಯಾನರ್'ಗಳಲ್ಲಿ ಸಭ್ಯತೆ ಇರಬೇಕು. ಪ್ರತಿಯೊಬ್ಬರು ಕಾನೂನಿನ ಚೌಕಟ್ಟಿನಲ್ಲಿಯೇ ಹಬ್ಬವನ್ನು ಆಚರಿಸಬೇಕು. ಪರಿಸಕ್ಕೆ ಹಾನಿಯಾಗದಂತೆ ಪರಿಸರ ಸ್ನೇಹಿ ಗಣಪತಿಯನ್ನು ಕೂರಿಸಬೇಕು ಎಂದರು. ಗಣೇಶ ಮಂಡಳಿಯವರು ಎಲ್ಲಿ ಕೂರಿಸುತ್ತೀರಿ, ಎಷ್ಟು ದಿನ ಕೂರಿಸುತ್ತಿರಿ, ಗಣೇಶನ




> ಗಣೇಶ ಪ್ರತಿಷ್ಠಾಪನೆ ಮಾಡುವ ಪ್ರತಿಯೊಬ್ಬರಿಗೂ ಡಿಜೆ ಹಚ್ಚಬೇಕೆನ್ನುವ ಆಸೆ ಇರುತ್ತದೆ. ಹೀಗಾಗಿ ಪೊಲೀಸ್ ಇಲಾಖೆಯಿಂದ ಐದು ದಿನ, ಒಂಬತ್ತು ದಿನ, ಹನ್ನೊಂದು ದಿನದ ಗಣಪತಿ ವಿಸರ್ಜನೆ ವೇಳೆ ಒಂದು ಟಾಪ್, ಒಂದು ಬೇಸ್'ಗೆ ಮಾತ್ರ ಅವಕಾಶ ಮಾಡಿಕೊಡಬೇಕು ಎಂದು ಅವರು ಮನವಿ ಮಾಡಿದರು.
>
> - ಪುರಸಭೆ ಮಾಜಿ ಅಧ್ಯಕ್ಷ ನಾಗರಾಜ ಭಂಕಲಗಿ

ವಿಸರ್ಜನೆ ಮಾಡುವಾಗ ಮೆರವಣಿಗೆ ಯಾವ ರಸ್ತೆಯಲ್ಲಿ ಮಾಡುತ್ತೀರಿ ಎನ್ನುವ ಸಂಪೂರ್ಣ ಮಾಹಿತಿ ಪೊಲೀಸ್ ಇಲಾಖೆಗೆ ಮಾಹಿತಿ ನೀಡಿದರೇ ನಮಗೂ ಸಿಬ್ಬಂದಿಗಳನ್ನು ನಿಯೋಜನೆ ಮಾಡಲು ಸಹಾಯವಾಗುತ್ತದೆ ಎಂದರು.

ಪಿಎಸ್'ಐ ಮಂಜುನಾಥರೆಡ್ಡಿ ಮಾತನಾಡಿ, ಗಣೇಶ ಚತುರ್ಥಿ ದಿನದಂದು ಯಾರು ಗಣೇಶ ಪ್ರತಿಷ್ಠಾಪನೆ ಮಾಡುತ್ತೀರಿ, ಅವರೆಲ್ಲರು ಸ್ಥಳೀಯ ಪೊಲೀಸ್ ಇಲಾಖೆಯಿಂದ ಪರ್ಮಿಶನ್ ತೆಗೆದುಕೊಳ್ಳಬೇಕು, ರಸ್ತೆ ಪಕ್ಕದಲ್ಲಿ ದೊಡ್ಡ ಮಟ್ಟದ ಪೆಂಡಾಲಗಳನ್ನು ಹಾಕಿ ಕೂರಿಸಬಾರದು. ಯಾಕೆಂದರೆ ಅನಾಹುತಗಳು ಸಂಭವಿಸುವ ಸಾಧ್ಯತೆ ಇರುತ್ತವೆ. ಈ ಬಾರಿಯು ಕೂಡ ದೊಡ್ಡ ಮಟ್ಟದ ಡಿಜೆಗೆ ಅವಕಾಶ ಇಲ್ಲ. ನೀವೇನಾದರು ಟ್ರ್ಯಾಕ್ಟರ್, ಲಾರಿ, ಟೆಂಪುಗಳಲ್ಲಿ ದೊಡ್ಡ ದೊಡ್ಡ ಡಿಜೆಗಳನ್ನು ತರಿಸಿ ಹಚ್ಚಬಾರದು. ದೊಡ್ಡ ದೊಡ್ಡ ಡಿಜೆಗಳನ್ನು ಹಚ್ಚಿದಾಗ ಕೆಲವರಿಗೆ ಹಾರ್ಟ್ ಅಟ್ಯಾಕ್ ಆಗಿರುವ ಘಟನೆಗಳು ಜರುಗಿವೆ. ಹೀಗಾಗಿ ಸಣ್ಣ ಮಟ್ಟದ ಡಿಜೆಗಳು ಹಚ್ಚಿದರೇ ಯಾರಿಗೂ ಯಾವುದೇ ಸಮಸ್ಯೆಯಾಗಲ್ಲ. ಆದ್ದರಿಂದ ಪ್ರತಿಯೊಬ್ಬರು ಶಾಂತಿಯಿಂದ, ಸೌಹಾರ್ದಯುತವಾಗಿ ಗಣೇಶ ಚತುರ್ಥಿ ಆಚರಿಸಬೇಕು ಎಂದು ಅವರು ಮನವಿ ಮಾಡಿದರು.

ಮುಖಂಡರಾದ ಜಗದೀಶ ಚವ್ಹಾಣ ಮಾತನಾಡಿ, ಚಿತ್ತಾಪುರದಲ್ಲಿ ಎಲ್ಲಾ ಸಮಾಜದವರು ಸೇರಿಕೊಂಡು ಪ್ರತಿಯೊಂದು ಹಬ್ಬಗಳನ್ನು ಆಚರಿಸಿಕೊಳ್ಳುತ್ತಾ ಬಂದಿದ್ದೇವೆ. ಇಲ್ಲಿ ಆ ಜಾತಿ ಈ ಜಾತಿ ಎನ್ನುವ ಭೇಧ ಬಾವವಿಲ್ಲ. ಹೀಗಾಗಿ ನಾವೆಲ್ಲರು ಸೇರಿಕೊಂಡು ಯಾವುದೇ ಅಹಿತಕರ ಘಟನೆಗಳಿಗೆ ಆಸ್ಪದ ನೀಡಲ್ಲ ಎಂದು ಭರವಸೆ ನೀಡಿದರು.ತಹಶೀಲ್ದಾರ್ ನಾಗಯ್ಯ ಹಿರೇಮಠ, ಪುರಸಭೆ ಮಾಜಿ ಅಧ್ಯಕ್ಷ ಮಲ್ಲಿಕಾರ್ಜುನ ಕಾಳಗಿ, ಮುಖಂಡರಾದ ಹಣಮಂತ ಸಂಕನೂರ, ಬಾಬು ಕಾಶಿ, ಅಂಬರೀಶ್ ಸುಲೇಗಾಂವ ಮಾತನಾಡಿದರು.

## ಬರಗಾಲದ ಹಿನ್ನೆಲೆಯಲ್ಲಿ ನೀರು ಮಿತ ಬಳಕೆಗೆ ತಾಪಂ ಇಒ ಮಾಣಿಕ್‌ರಾವ್ ಪಾಟೀಲ್ ಕರೆ

- **ಉದಯವಾಹಿನಿ, ಬೀದರ್:**

ಬರಗಾಲದ ಪರಿಸ್ಥಿತಿಯನ್ನು ಗಮನದಲ್ಲಿಟ್ಟುಕೊಂಡು ಕುಡಿಯುವ ನೀರನ್ನು ಮಿತವಾಗಿ ಹಾಗೂ ಸಮರ್ಪಕವಾಗಿ ಬಳಸುವಂತೆ ಬೀದರ್ ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ಮಾಣಿಕ್‌ರಾವ್ ಪಾಟೀಲ್ ಗ್ರಾಮಸ್ಥರಿಗೆ ಮನವಿ ಮಾಡಿದ್ದಾರೆ. ತಾಲ್ಲೂಕಿನ ಎಲ್ಲಾ 32 ಗ್ರಾಮ ಪಂಚಾಯಿತಿಗಳ ವ್ಯಾಪ್ತಿಯಲ್ಲಿ 'ನೀರು ಉಳಿಸಿ-ಭವಿಷ್ಯ ಉಳಿಸಿ' ಅಭಿಯಾನವನ್ನು ಪರಿಣಾಮಕಾರಿಯಾಗಿ ನಡೆಸಿ, ಗ್ರಾಮಸ್ಥರಲ್ಲಿ ನೀರಿನ ಸಂರಕ್ಷಣೆ ಕುರಿತು ಜಾಗೃತಿ ಮೂಡಿಸುವಂತೆ ಗ್ರಾಮ ಪಂಚಾಯಿತಿ ಅಧಿಕಾರಿಗಳಿಗೆ ಸೂಚಿಸಲಾಗಿದೆ.

ಕುಡಿಯುವ ನೀರನ್ನು ಅಗತ್ಯಕ್ಕೆ ತಕ್ಕಷ್ಟು ಮಾತ್ರ ಬಳಸಬೇಕು. ನಲ್ಲಿಗಳನ್ನು ತೆರೆದಿಟ್ಟು ನೀರು ಪೋಲು ಮಾಡಬಾರದು. ಕೊಳಾಯಿ, ಪೈಪ್‌ಗಳು ಹಾಗೂ ನೀರಿನ ಟ್ಯಾಂಕ್‌ಗಳಲ್ಲಿ ಸೋರಿಕೆ ಕಂಡುಬಂದರೆ ತಕ್ಷಣ ದುರಸ್ತಿ ಮಾಡಬೇಕು. ಕುಡಿಯುವ ನೀರನ್ನು ವಾಹನ, ರಸ್ತೆ, ಅಂಗಳ ಹಾಗೂ ಕಟ್ಟಡ ತೊಳೆಯಲು ಬಳಸಬಾರದು ಎಂದು ಅವರು ತಿಳಿಸಿದ್ದಾರೆ. ತೋಟ ಹಾಗೂ ಇತರ ಬೆಳೆಗಳಿಗೆ ಸಾಧ್ಯವಾದಷ್ಟು ಮರುಬಳಕೆಯ ನೀರನ್ನು ಬಳಸಬೇಕು. ಮಳೆನೀರನ್ನು ಸಂಗ್ರಹಿಸುವ ಮೂಲಕ ಜಲಮೂಲಗಳ ಸಂರಕ್ಷಣೆಗೆ ಪ್ರತಿಯೊಬ್ಬರೂ ಸಹಕರಿಸಬೇಕು.

## ಮರ ಕಡಿದ ಕೈಗಳಲ್ಲೇ ಹಸಿರು ಸಂಕಲ್ಪ: 75 ಸಸಿಗಳ ನೆಡುವಿಕೆ

- **ಉದಯವಾಹಿನಿ, ವಿಜಯಪುರ, :**

ಮನುಷ್ಯ ತನ್ನ ಜೀವಿತಾವಧಿಯಲ್ಲಿ ಗಳಿಸುವ ಆಸ್ತಿ-ಪಾಸ್ತಿ ಹಾಗೂ ಸಂಪತ್ತಿಗಿಂತ ಒಂದು ಸಸಿಯನ್ನು ನೆಟ್ಟು, ಅದನ್ನು ಪೋಷಿಸಿ ಬೆಳೆಸುವುದರಿಂದ ದೊರೆಯುವ ಸಂತೋಷ ಮತ್ತು ತೃಪ್ತಿ ಹೆಚ್ಚು ಮಹತ್ವದ್ದಾಗಿದೆ. ಬೆಳೆದ ಮರಗಳನ್ನು ಕಡಿದಾಗ ಸಾರ್ವಜನಿಕರು ವ್ಯಕ್ತಪಡಿಸುವ ಆಕ್ರೋಶವು ಪರಿಸರ ಮತ್ತು ಹಸಿರೀಕರಣದ ಕುರಿತು ಜನರಲ್ಲಿ ಹೆಚ್ಚುತ್ತಿರುವ ಜಾಗೃತಿಗೆ ಸಾಕ್ಷಿಯಾಗಿದೆ ಎಂದು ವಿಜಯಪುರ ಸೈಕ್ಲಿಂಗ್ ಗ್ರೂಪ್ ಅಧ್ಯಕ್ಷ ಡಾ. ಮಹಾಂತೇಶ ಬಿರಾದಾರ ಹೇಳಿದರು. ನಗರದ ಐಶ್ವರ್ಯ ನಗರದ ಉದ್ಯಾನವನದಲ್ಲಿ 75 ಸಸಿಗಳನ್ನು ನೆಡುವ ವನಮಹೋತ್ಸವಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಗಣಪತಿ ಪೆಂಡಾಲ್ ನಿರ್ಮಿಸಲು ಉದ್ಯಾನವನದಲ್ಲಿದ್ದ ಮರಗಳನ್ನು ಕಡಿದ ಸಂದರ್ಭದಲ್ಲಿ ಸಾರ್ವಜನಿಕರಿಂದ ತೀವ್ರ ಆಕ್ರೋಶ ವ್ಯಕ್ತವಾಗಿತ್ತು. ತಮ್ಮ ತಪ್ಪನ್ನು ಅರಿತು, ಕಡಿದ ನಾಲ್ಕು ಮರಗಳಿಗೆ ಪರ್ಯಾಯವಾಗಿ 75 ಸಸಿಗಳನ್ನು ನೆಟ್ಟು ಅವುಗಳ ರಕ್ಷಣೆಗೆ ಮುಂದಾಗಿರುವುದು ಶ್ಲಾಘನೀಯ. ಪರಿಸರದ ಮೇಲಿನ ಕಾಳಜಿಗೆ ಇದು ಉತ್ತಮ ಉದಾಹರಣೆಯಾಗಿದೆ ಎಂದರು. ಐಶ್ವರ್ಯ ನಗರದ ನಿವಾಸಿ ಜಯಪ್ರಕಾಶ ಸೊಡ್ಡಗಿ ಮಾತನಾಡಿ, ಮನೆ-ಮಠಗಳಲ್ಲಿ ಹೋಮ-ಹವನ ಹಾಗೂ ಮಂತ್ರಪಠಣದಿಂದ ದೊರೆಯುವ ಪುಣ್ಯದಷ್ಟೇ ಸಸಿಯನ್ನು ನೆಟ್ಟು ಬೆಳೆಸುವುದಕ್ಕೂ ಮಹತ್ವವಿದೆ ಎಂಬ ಸಂದೇಶ ಅಗ್ನಿಪುರಾಣದಲ್ಲಿದೆ. ಜನ್ಮದಿನ ಹಾಗೂ ವಿವಿಧ ಸಭೆ-ಸಮಾರಂಭಗಳಲ್ಲಿ ದುಂದು ವೆಚ್ಚ ಮಾಡುವ ಬದಲು ಮನೆಗಳ ಸುತ್ತಮುತ್ತ,




ಐಶ್ವರ್ಯ ನಗರದ ನಿವಾಸಿ ಬಸವರಾಜ ಕೋರಿ ಮಾತನಾಡಿ, ನೆಡಲಾದ ಸಸಿಗಳಿಗೆ ಡ್ರಿಪ್ ನೀರಾವರಿ ವ್ಯವಸ್ಥೆ ಕಲ್ಪಿಸಿ, ಅವುಗಳ ನಿರಂತರ ಪೋಷಣೆಯ ಜವಾಬ್ದಾರಿ ವಹಿಸುವುದಾಗಿ ತಿಳಿಸಿದರು.

ರಸ್ತೆ ಬದಿ ಮತ್ತು ಉದ್ಯಾನಗಳಲ್ಲಿ ಸಸಿಗಳನ್ನು ನೆಟ್ಟು ಪೋಷಿಸುವ ಮೂಲಕ ಹಸಿರು ಪರಿಸರ ನಿರ್ಮಿಸಬೇಕು. ಇದರಿಂದ ತಾಪಮಾನ ನಿಯಂತ್ರಣಕ್ಕೆ ಸಹಕಾರಿಯಾಗುವುದಲ್ಲದೆ, ನಗರವೂ ಸುಂದರವಾಗುತ್ತದೆ. ವ್ಯಕ್ತಿಯು ತನ್ನ ಜೀವನದಲ್ಲಿ ತಿಳಿದು-ತಿಳಿಯದೆ ಮಾಡಿದ ತಪ್ಪುಗಳಿಗೆ ಪ್ರಾಯಶ್ಚಿತ್ತವಾಗಿ ಸಸಿ ನೆಟ್ಟು ಪೋಷಿಸುವುದು ಉತ್ತಮ ಕಾರ್ಯವಾಗಿದೆ ಎಂದು ಹೇಳಿದರು.

### ಪರಿಹಾರ ನೀಡಬೇಕು ಬರ ಘೋಷಣೆ ಮಾಡುವುದಷ್ಟೇ ಅಲ್ಲಾ ರೈತರ ಮೇಲಿರುವ ಸಾಲವನ್ನು ಸಂಪೂರ್ಣವಾಗಿ ಮನ್ನಾ ಮಾಡಬೇಕು

# ಬರ ಘೋಷಿಸದಿದ್ದರೆ ಮತ್ತೆ ಧರಣಿ ಸತ್ಯಾಗ್ರಹ : ನಡಹಳ್ಳಿ

- **ಉದಯವಾಹಿನಿ, ತಾಳಿಕೋಟಿ:**

ತಾಲ್ಲೂಕನ್ನು ಬರಪೀಡಿತ ಎಂದು ಘೋಷಿಸುವುದರ ಜೊತೆಗೆ ರೈತರ ಸಂಪೂರ್ಣ ಸಾಲ ಮನ್ನಾ ಮಾಡಬೇಕು ಹಾಗೂ ಬೆಳೆ ನಷ್ಟಕ್ಕೆ ಎಕರೆಗೆ ಕನಿಷ್ಠ 50 ಸಾವಿರ ಪರಿಹಾರ ನೀಡಬೇಕೆಂದು ಬಿಜೆಪಿ ರೈತ ಮೋರ್ಚಾ ರಾಜ್ಯಾಧ್ಯಕ್ಷ, ಮಾಜಿ ಶಾಸಕ ಎ.ಎಸ್. ಪಾಟೀಲ (ನಡಹಳ್ಳಿ) ಸರ್ಕಾರಕ್ಕೆ ಆಗ್ರಹಿಸಿದರು.

1 : ರೈತರು ತೀವ್ರ ಸಂಕಷ್ಟಕ್ಕೆ ಸಿಲುಕಿದ್ದಾರೆ
2 : ಮಳೆಯಾಗದೆ ರೈತರು ತೀವ್ರ ಸಂಕಷ್ಟಕ್ಕೆ
3 : ಸಾಲವನ್ನು ಸಂಪೂರ್ಣವಾಗಿ ಮಾಡಬೇಕು

ವಿಜಯಪುರ ಜಿಲ್ಲೆಯನ್ನು ಸಂಪೂರ್ಣವಾಗಿ ಬರಪೀಡಿತ ಜಿಲ್ಲೆ ಎಂದು ಘೋಷಿಸಬೇಕು ಹಾಗೂ ಮುದ್ದೇಬಿಹಾಳ ಮತ್ತು ತಾಳಿಕೋಟಿ ತಾಲ್ಲೂಕುಗಳನ್ನು ಬರಪೀಡಿತ ತಾಲ್ಲೂಕುಗಳೆಂದು ಘೋಷಿಸಬೇಕೆಂದು ಆಗ್ರಹಿಸಿ ನಡೆಯುತ್ತಿರುವ 6 ನೇ ದಿನದ ಅನಿರ್ದಿಷ್ಟಾವಧಿ ಧರಣಿ ಸತ್ಯಾಗ್ರಹದಲ್ಲಿ ಮಾತನಾಡಿದ ಅವರು, ತಾಲ್ಲೂಕಿನಲ್ಲಿ ಸಮರ್ಪಕ ಮಳೆಯಾಗದೆ ರೈತರು ತೀವ್ರ ಸಂಕಷ್ಟಕ್ಕೆ ಸಿಲುಕಿದ್ದಾರೆ.

ಬಿತ್ತನೆಗಾಗಿ ಮಾಡಿರುವ ಖರ್ಚು, ಬೀಜ-ರಸಗೊಬ್ಬರದ ವೆಚ್ಚ ಸೇರಿದಂತೆ ಕೃಷಿಗಾಗಿ ಮಾಡಿರುವ ಸಾಲವನ್ನು ಮರಳಿ ಪಾವತಿಸುವ ಸ್ಥಿತಿಯಲ್ಲಿ ರೈತರು ಇಲ್ಲ. ಆದ್ದರಿಂದ ಸರ್ಕಾರ ಕೂಡಲೇ ತಾಲ್ಲೂಕನ್ನು ಬರಪೀಡಿತ



ಪ್ರದೇಶವೆಂದು ಘೋಷಿಸಿ ರೈತರ ನೆರವಿಗೆ ಧಾವಿಸಬೇಕು ಎಂದರು. ಸೋಮವಾರದೊಳಗೆ ಬರ ಘೋಷಣೆ ಮಾಡಿ ರೈತರಿಗೆ ಪರಿಹಾರ ನೀಡಬೇಕು. ಬರ ಘೋಷಣೆ ಮಾಡುವುದಷ್ಟೇ ಅಲ್ಲಾ ರೈತರ ಮೇಲಿರುವ ಸಾಲವನ್ನು ಸಂಪೂರ್ಣವಾಗಿ ಮನ್ನಾ ಮಾಡಬೇಕು. ಮಳೆಯಿಂದ ಹಾಗೂ ಬರದಿಂದ ಹಾನಿಗೊಳಗಾದ ಬೆಳೆಗಳಿಗೆ ಎಕರೆಗೆ ಕನಿಷ್ಠ 50 ಸಾವಿರ ಪರಿಹಾರ ನೀಡಬೇಕು. ರೈತರು ಸಂಕಷ್ಟದಲ್ಲಿರುವ ಸಂದರ್ಭದಲ್ಲಿ ಸರ್ಕಾರ ರೈತರ ಬೆನ್ನಿಗೆ ನಿಲ್ಲಬೇಕು ಎಂದು ಅವರು ಒತ್ತಾಯಿಸಿದರು. ತಮ್ಮ ಹೋರಾಟಕ್ಕೆ ಯಾವುದೇ ರಾಜಕೀಯ ಕ್ರೆಡಿಟ್ ಅಗತ್ಯವಿಲ್ಲ ಎಂದು ಸ್ಪಷ್ಟಪಡಿಸಿದ ನಡಹಳ್ಳಿ ಅವರು ರೈತರಿಗೆ ನ್ಯಾಯ ದೊರಕಿಸುವುದೇ ತಮ್ಮ ಏಕೈಕ ಉದ್ದೇಶವಾಗಿದೆ ಎಂದರು.

ಕಾಂಗ್ರೆಸ್ ಮುಖಂಡರು ಹಾಗೂ ಕಾರ್ಯಕರ್ತರು ಮುಂದೆ ನಿಂತು ಹೋರಾಟ ನಡೆಸಿದರೂ ನನಗೆ ಯಾವುದೇ ಅಭ್ಯಂತರವಿಲ್ಲ. ಅವರೇ ಕ್ರೆಡಿಟ್ ತೆಗೆದುಕೊಳ್ಳಲಿ. ನಾನು ಅವರೊಂದಿಗೆ ಕುಳಿತು ಬೆಂಬಲ ನೀಡುತ್ತೇನೆ. ಬಿಜೆಪಿ, ಕಾಂಗ್ರೆಸ್ ಎಂಬ ರಾಜಕೀಯ

> ಈ ಬೇಡಿಕೆಗಳು ಈಡೇರುವವರೆಗೆ ಹೋರಾಟ ಮುಂದುವರಿಯುತ್ತದೆ. ಒಂದು ವಾರವಾಗಲಿ, 15 ದಿನವಾಗಲಿ ಅಥವಾ ಒಂದು ತಿಂಗಳಾಗಲಿ ರೈತರ ಪರವಾಗಿ ಹೋರಾಟ ನಡೆಸುತ್ತೇನೆ ಎಂದು ಘೋಷಿಸಿದರು.
>
> -ಎಂ.ಎಸ್. ಪಾಟೀಲ ನಡಹಳ್ಳಿ

ಬೇಧ ಬೇಡ. ಮೊದಲು ರೈತರಿಗೆ ನ್ಯಾಯ ಸಿಗಬೇಕು ಎಂದು ಹೇಳಿದರು. ಸೋಮವಾರದೊಳಗೆ ಬರ ಘೋಷಣೆ ಮಾಡಿ ರೈತರಿಗೆ ಪರಿಹಾರ ಕಲ್ಪಿಸದಿದ್ದರೆ ಮಂಗಳವಾರದಿಂದ ಇದೇ ಸ್ಥಳದಲ್ಲಿ ಮತ್ತೆ ಧರಣಿ ನಡೆಸಲಾಗುವುದು. ರೈತರಿಗೆ ನ್ಯಾಯ ದೊರೆಯುವವರೆಗೆ ಹೋರಾಟವನ್ನು ಯಾವುದೇ ಕಾರಣಕ್ಕೂ ಹಿಂಪಡೆಯುವುದಿಲ್ಲ ಎಂದು ಅವರು ಎಚ್ಚರಿಸಿದರು. ಮುದ್ದೇಬಿಹಾಳ ಪಟ್ಟಣದಲ್ಲಿ ಸಣ್ಣ ಗ್ಯಾರೇಜ್, ಪಂಚರ್ ಅಂಗಡಿ ಸೇರಿದಂತೆ ಜೀವನ ನಡೆಸುತ್ತಿರುವ ಬಡ ವ್ಯಾಪಾರಿಗಳು ಹಾಗೂ ಅಲ್ಪಸಂಖ್ಯಾತ ಸಮುದಾಯದವರು ತಮ್ಮ ಅಂಗಡಿ ಮುಂಗಟ್ಟುಗಳನ್ನು ಬಂದ್ ಮಾಡಿ ರೈತರ ಹೋರಾಟಕ್ಕೆ

> ನಾನು ಇದೇ ತಾಲ್ಲೂಕಿನ ಮಣ್ಣಿನ ಮಗ. ರೈತರಿಗೆ ಎಂದಿಗೂ ಮೋಸ ಮಾಡುವುದಿಲ್ಲ. ಬರ ಘೋಷಣೆ, ಸಂಪೂರ್ಣ ಸಾಲ ಮನ್ನಾ ಹಾಗೂ ಬೆಳೆ ನಷ್ಟಕ್ಕೆ ಎಕರೆಗೆ ಕನಿಷ್ಠ 50 ಸಾವಿರ ಪರಿಹಾರ ದೊರೆಯಬೇಕು.

> ತಾಲ್ಲೂಕಿನ ವಿವಿಧ ಗ್ರಾಮಗಳಿಂದ ರೈತರು ಹಾಗೂ ಮುಖಂಡರು ಯಾವುದೇ ವಾಹನ ವ್ಯವಸ್ಥೆ ಮಾಡದೆ ಸ್ವಯಂಪ್ರೇರಿತವಾಗಿ ಹೋರಾಟಕ್ಕೆ ಆಗಮಿಸಿರುವುದು ರೈತರ ಸಮಸ್ಯೆಯ ತೀವ್ರತೆಯನ್ನು ತೋರಿಸುತ್ತದೆ ಎಂದರು.

ಬೆಂಬಲಿಸಿರುವುದು ಶ್ಲಾಘನೀಯವಾಗಿದ್ದು ಇಲ್ಲಿ ಹಿಂದೂ-ಮುಸ್ಲಿಂ ಎಂಬ ಭೇದವಿಲ್ಲ. ರೈತರು ಬೆಳೆದ ಬೆಳೆಯನ್ನೇ ಎಲ್ಲರೂ ತಿನ್ನಬೇಕು. ರೈತರ ಸಂಕಷ್ಟ ಎಲ್ಲರ ಸಂಕಷ್ಟವಾಗಿದೆ ಎಂದರು.

ರೈತರ ಪರವಾಗಿ ಇಷ್ಟೊಂದು ಒಗ್ಗಟ್ಟಿನಿಂದ ಬಂದ್ ನಡೆದಿರುವುದು ಗಮನಾರ್ಹ. ಈ ಬೆಂಬಲ ರೈತರಿಗೆ ಆಶೀರ್ವಾದದ ರೂಪದಲ್ಲಿ ತಲುಪಲಿದೆ. ಜನರ ಒಗ್ಗಟ್ಟು ಹಾಗೂ ಬೆಂಬಲದಿಂದ ರೈತರಿಗೆ ನ್ಯಾಯ ದೊರೆಯಲಿದೆ ಎಂಬ ವಿಶ್ವಾಸವಿದೆ ಎಂದು ಹೇಳಿದರು. ಹೋರಾಟದ ಸಂದರ್ಭದಲ್ಲಿ ಭದ್ರತೆ ಹಾಗೂ ಸಹಕಾರ ನೀಡಿದ ಪೊಲೀಸ್ ಇಲಾಖೆಯ ಅಧಿಕಾರಿಗಳಿಗೆ ಧನ್ಯವಾದ ಸಲ್ಲಿಸಿದ ಅವರು, ಅಧಿಕಾರಿಗಳು ಯಾವುದೇ ರಾಜಕೀಯ ಒತ್ತಡಕ್ಕೆ ಒಳಗಾಗದೆ ಜನಸಾಮಾನ್ಯರು ಹಾಗೂ ರೈತರ ರಕ್ಷಣೆಗೆ ಆದ್ಯತೆ ನೀಡಬೇಕು ಎಂದು ಮನವಿ ಮಾಡಿದರು.


# ಉದಯ ವಾಹಿನಿ

ಸೋಮವಾರ

14 ಸೆಪ್ಟೆಂಬರ್ 2026

05




## ಮಿನಿ ನ್ಯೂಸ್

### ಸೆ.15ರಂದು ವೀರಭದ್ರೇಶ್ವರ ಜಯಂತಿ

- **ಉದಯವಾಹಿನಿ, ಮುದ್ದೇಬಿಹಾಳ:**



ಶ್ರೀ ವೀರಭದ್ರೇಶ್ವರ ಸ್ವಾಮಿಯ ಜಯಂತ್ಯುತ್ಸವ 2026 ಅನ್ನು ಸೆ.15ರಂದು ಭಾದ್ರಪದ ಮಾಸದ ಮೊದಲನೇ ಮಂಗಳವಾರದಂದು ಮನೆ-ಮನೆಗಳಲ್ಲಿ ಹಾಗೂ ದೇವಸ್ಥಾನಗಳಲ್ಲಿ ಶ್ರದ್ಧಾ-ಭಕ್ತಿಯಿಂದ ಆಚರಿಸಲಾಗುವುದು ಎಂದು ವೀರಶೈವ ಲಿಂಗಾಯತ ಸಂಘಟನಾ ವೇದಿಕೆಯ ಕಿತ್ತೂರು ಕರ್ನಾಟಕ ಮಹಿಳಾ ಘಟಕದ ಅಧ್ಯಕ್ಷೆ ಕಾಶಿಬಾಯಿ ರಾಂಪೂರ ತಿಳಿಸಿದ್ದಾರೆ.

ಮುದ್ದೇಬಿಹಾಳ ಪಟ್ಟಣ ಸೇರಿದಂತೆ ಗ್ರಾಮೀಣ ಭಾಗದ ಹಲವು ದೇವಸ್ಥಾನಗಳಲ್ಲಿ ವಿಶೇಷ ಪೂಜೆ ಹಾಗೂ ಧಾರ್ಮಿಕ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ. ಭಕ್ತರು ಸಡಗರದಿಂದ ಜಯಂತಿ ಆಚರಿಸುವಂತೆ ಅವರು ಮನವಿ ಮಾಡಿದ್ದಾರೆ.

### ಹೊಳಸಮುದ್ರದಲ್ಲಿ 51ನೇ ಮನೆಗೊಂದು ಅನುಭವ ಮಂಟಪ ಸುವರ್ಣ ಮಹೋತ್ಸವ

- **ಉದಯವಾಹಿನಿ, ಕಮಲನಗರ:**

ಶರಣರು ಕೊಟ್ಟಿರುವ ವಚನಗಳು, ವಿಚಾರಗಳು ಎಂದಿಗೂ ಸಾಯುವುದಿಲ್ಲ ಎಂದು ನಾಡೋಜ ಡಾ। ಬಸವಲಿಂಗ ಪಟ್ಟದ್ದೇವರು ತಿಳಿಸಿದರು.ತಾಲ್ಲೂಕಿನ ಹೊಳಸಮುದ್ರ ಗ್ರಾಮದ ಹರಿನಾಥ ಮಹಾರಾಜ ಮಂದಿರ ಆವರಣದಲ್ಲಿ 51ನೇ ಮನೆಗೊಂದು ಅನುಭವ ಮಂಟಪ ಸುವರ್ಣಮಹೋತ್ಸವ ಕಾರ್ಯಕ್ರಮದಲ್ಲಿ ದಿವ್ಯಸಾನಿಧ್ಯ ವಹಿಸಿ ವಿಶೇಷ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಶರಣರ ತತ್ವ ಬದುಕಿನಲ್ಲಿ ಅಳವಡಿಸಿಕೊಳ್ಳಿ ಅವು ಜೀವರಾಶಿಗಳ ಒಳಿತಿಗೆ ಮೂಲದಾರಿಯಾಗಿದೆ ಎಂದರು.ಸಂಗಮದ ಡಾ।। ಮಹಾದೇವಮ್ಮಾ ತಾಯಿ ಮಾತನಾಡಿ, ಜೀವನ ಆದರ್ಶವಾಗಲು ಬಸವಣ್ಣವರ ಬದುಕು ತಿಳಿದುಕೊಳ್ಳಬೇಕು ಹೀಗಾಗಿ ಶರಣರ ಜೀವನ, ಅರಿಯಬೇಕು. ಸನ್ಮಾನ ಮತ್ತು ಪ್ರತಿಷ್ಠೆಗೆ ಮೊರೆ ಹೋಗದೆ ಆದರ್ಶ ಜೀವನವಾಗಲು ಬಸವಣ್ಣವರ ತತ್ವ ಸಿದ್ಧಾಂತಗಳನ್ನು ರೂಢಿಸಿಕೊಳ್ಳುವುದು ಅತಿ ಮುಖ್ಯವೆಂದರು. ಕಪಲಾಪೂರದ ಚನ್ನಬಸವ ಆಶ್ರಮದ ಪೂಜ್ಯ ನೀಲಾಂಬಿಕಾ ತಾಯಿ ಮತ್ತು ಬಸವ ಮಂಟಪ ಅತಿವಾಳದ ಶರಣಾಂಬಿಕಾ, ಅಧ್ಯಕ್ಷತೆ ವಹಿಸಿದ ಗುರುಲಿಂಗಪ್ಪ ಬೆಣ್ಣೆ, ಡಾ।। ಧನರಾಜ ರಾಗಾ, ಊರಿನ ಗಣ್ಯ ವ್ಯಕ್ತಿಗಳು ವೇದಿಕೆ ಮೇಲೆ ಉಪಸ್ಥಿತರಿದ್ದರು.

### ರಾಷ್ಟ್ರ ನಿರ್ಮಾಣದಲ್ಲಿ ವಕೀಲರ ಪಾತ್ರ: ಸಂವಾದ

- **ಉದಯವಾಹಿನಿ, ಬೀದರ್:**

ರಾಷ್ಟ್ರ ನಿರ್ಮಾಣದಲ್ಲಿ ವಕೀಲರ ಪಾತ್ರ ಕುರಿತ ಸಂವಾದ ಇಲ್ಲಿಯ ಜಿಲ್ಲಾ ನ್ಯಾಯಾಲಯದ ಆವರಣದಲ್ಲಿ ಇರುವ ಜಿಲ್ಲಾ ವಕೀಲರ ಸಂಘದ ಸಭಾಂಗಣದಲ್ಲಿ ಶುಕ್ರವಾರ ನಡೆಯಿತು.

ಕರ್ನಾಟಕ ಹಾಗೂ ಒಡಿಶಾ ಹೈಕೋರ್ಟ್ ನಿವೃತ್ತ ನ್ಯಾಯಮೂರ್ತಿ ಕೃಷ್ಣ ಎಸ್. ದೀಕ್ಷಿತ್ ಅವರು ವಕೀಲರೊಂದಿಗೆ ಸಂವಾದ ನಡೆಸಿದರು. ಉತ್ತಮ ರಾಷ್ಟ್ರ ನಿರ್ಮಾಣ, ಸಾಮಾಜಿಕ ನ್ಯಾಯ ಹಾಗೂ ಸಂವಿಧಾನದ ಆಶಯಗಳ ರಕ್ಷಣೆಯಲ್ಲಿ ವಕೀಲರ ಪಾತ್ರ ಬಹಳ ಮಹತ್ವದ್ದಾಗಿದೆ ಎಂದು ಅವರು ತಿಳಿಸಿದರು. ಪರಿಶ್ರಮದಿಂದ ಮಾತ್ರ ವೃತ್ತಿಯಲ್ಲಿ ಯಶಸ್ಸು ಕಾಣಬಹುದು ಎಂದು ಬೆಂಗಳೂರಿನ ವಿಶೇಷ ಸಾರ್ವಜನಿಕ ಅಭಿಯೋಜಕ(ಸಿಬಿಐ, ಇ.ಡಿ, ಎನ್‌ಐಎ ಹಾಗೂ ನಟ ದರ್ಶನ್ ವಿರುದ್ಧ) ಪಿ. ಪ್ರಸನ್ನಕುಮಾರ್ ಯುವ ವಕೀಲರಿಗೆ ಸಲಹೆ ಮಾಡಿದರು.

ಜಿಲ್ಲಾ ವಕೀಲರ ಸಂಘದ ಅಧ್ಯಕ್ಷ ಸಂಜಯ್ ಮಠಪತಿ ಅಧ್ಯಕ್ಷತೆ ವಹಿಸಿದ್ದರು. ಜಿಲ್ಲಾ ಸತ್ರ ನ್ಯಾಯಾಧೀಶ ಸೈಯದ್ ಬಲಿಗುರ್ ರೆಹಮಾನ್, ಕಲಬುರಗಿಯ ಮರತೂರಿನ ವಿಘ್ನೇಶ್ವರ ಪ್ರತಿಷ್ಠಾನ ಟ್ರಸ್ಟ್‌ನ ಅಮಿತಕುಮಾರ ದೇಶಪಾಂಡೆ, ಮಹಾದೇವಯ್ಯ ಕರದಳ್ಳಿ, ಜಿಲ್ಲಾ ವಕೀಲರ ಸಂಘದ ಉಪಾಧ್ಯಕ್ಷ ಸಂಜೀವ್ ಬಾಬಶೆಟ್ಟಿ, ಅಧಿಕಾರಿಗಳು, ವಕೀಲರು ಇದ್ದರು. ಜಿಲ್ಲಾ ವಕೀಲರ ಸಂಘ ಹಾಗೂ ವಿಜ್ಞಾನೇಶ್ವರ ಪ್ರತಿಷ್ಠಾನ ಟ್ರಸ್ಟ್ ಸಹಯೋಗದಲ್ಲಿ ಸಂವಾದ ಆಯೋಜಿಸಲಾಗಿತ್ತು.

### ಅಂತರ್ ದೃಷ್ಟಿ ಸಮಾಜ ಮುನ್ನಡೆಸುವ ಚಿಂತನೆ

- **ಉದಯವಾಹಿನಿ, ಕಲಬುರಗಿ,:**

ಪೂಜ್ಯ ಡಾ. ಶರಣಬಸವಪ್ಪ ಅಪ್ಪ ಅವರ ''ಅಂತರದೃಷ್ಟಿ'' ಎಂದರೆ ಕೇವಲ ಭವಿಷ್ಯವನ್ನು ಊಹಿಸುವ ದೃಷ್ಟಿಯಲ್ಲ. ಸಮಾಜದ ಅಗತ್ಯಗಳನ್ನು ಆಳವಾಗಿ ಗ್ರಹಿಸಿ, ಶಿಕ್ಷಣ, ಜ್ಞಾನ, ವಿಜ್ಞಾನ, ಸಂಸ್ಕೃತಿ, ಮಾನವೀಯತೆ ಮತ್ತು ದಾಸೋಹದ ಮೂಲಕ ಸಮಾಜವನ್ನು ಹೇಗೆ ಮುನ್ನಡೆಸಬೇಕು ಎಂಬುದನ್ನು ಅಂತರ್ದೃಷ್ಟಿಯಿಂದ ಕಂಡ ಚಿಂತನೆಯಾಗಿದೆ ಎಂದು ನಿವೃತ್ತ ಶಿಕ್ಷಕಿ ಮಂಗಲಾ ಕಪರೆ ಹೇಳಿದರು.

ಅಖಿಲ ಭಾರತ ಶಿವಾನುಭವ ಮಂಟಪ ಶರಣಬಸವೇಶ್ವರ ದೇವಸ್ಥಾನದಲ್ಲಿ ಶ್ರಾವಣ ಮಾಸದ 40 ದಿನಗಳ ಉಪನ್ಯಾಸ ಮಾಲಿಕೆಯಲ್ಲಿ ಪೂಜ್ಯ ಡಾ. ಶರಣಬಸವಪ್ಪ ಅಪ್ಪ ಅವರ ಅಂತರ್ದೃಷ್ಟಿ ವಿಷಯ ಕುರಿತು ಮಾತನಾಡಿ, ಡಾ. ಅಪ್ಪನವರ ಅಂತರ್ದೃಷ್ಟಿಯ ಪ್ರಮುಖ ಕ್ಷೇತ್ರ ಶಿಕ್ಷಣ. ಶಿಕ್ಷಣವು ಕೇವಲ ಉದ್ಯೋಗ ಅಥವಾ ಪದವಿ ಪಡೆಯುವ ಸಾಧನವಲ್ಲ, ಅದು ವ್ಯಕ್ತಿಯಲ್ಲಿ ಸ್ವತಂತ್ರ ಚಿಂತನೆ, ಮೌಲ್ಯಗಳು, ಜವಾಬ್ದಾರಿ ಮತ್ತು ಸೇವಾ ಮನೋಭಾವ ಬೆಳೆಸಬೇಕು ಎಂಬುದು ಅವರ ನಿಲುವಾಗಿತ್ತು. ಅವರ ಸಂಸ್ಥೆಗಳ ಶೈಕ್ಷಣಿಕ ದೃಷ್ಟಿಯಲ್ಲಿ ಸ್ವತಂತ್ರವಾಗಿ ಆಲೋಚಿಸುವುದು, ಬರೆಯುವುದು,

ಮಾತನಾಡುವುದು ಮತ್ತು ಬದುಕುವುದು ಪ್ರಮುಖ ಅಂಶಗಳಾಗಿವೆ. ಅಪ್ಪನವರು ಅಂತರ್ದೃಷ್ಟಿಯಲ್ಲಿ ಜ್ಞಾನದ ಜ್ಯೋತಿ ಬೆಳಗಿಸಬೇಕು ಎಂದಿರುವರು. ವಿಜ್ಞಾನ ಮತ್ತು ತಂತ್ರಜ್ಞಾನವನ್ನು ಸಮಾಜದ ಅಭಿವೃದ್ಧಿಗೆ ಬಳಸಬೇಕು ಎಂಬ ಚಿಂತನೆ ಅವರ ಶೈಕ್ಷಣಿಕ ಕಾರ್ಯದಲ್ಲಿ ಕಾಣುತ್ತದೆ. ಅವರ ಅಂತರ್ದೃಷ್ಟಿಯ ವಿಶಿಷ್ಟತೆ ಎಂದರೆ ಕಾಯಕದಾಸೋಹವನ್ನು ಶಿಕ್ಷಣದೊಂದಿಗೆ ಸಂಯೋಜಿಸಿದ್ದು. ಕಲಿತ ಜ್ಞಾನವನ್ನು ಸ್ವಾರ್ಥಕ್ಕಾಗಿ ಮಾತ್ರ ಬಳಸದೆ, ಸಮಾಜದ ಒಳಿತಿಗಾಗಿ ಹಂಚಿಕೊಳ್ಳಬೇಕು ಎಂಬುದು ಇದರ ತಾತ್ಪರ್ಯ.

### ತಲೆ ಮರೆಸಿಕೊಂಡಿದ್ದ ಆರೋಪಿ ಬಂಧನ

- **ಉದಯವಾಹಿನಿ, ಕಲಬುರಗಿ-**

ವಾಡಿ ಪಟ್ಟಣದ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ನಡೆದ ದರೋಡೆ ಹಾಗೂ ಕಳ್ಳತನ ಪ್ರಕರಣಗಳಿಗೆ ಸಂಬಂಧಿಸಿದಂತೆ 2013ರಿಂದ ತಲೆಮರೆಸಿಕೊಂಡಿದ್ದ ಆರೋಪಿಯನ್ನು ವಾಡಿ ಪೊಲೀಸರು ಸುಮಾರು 13 ವರ್ಷಗಳ ಬಳಿಕ ಬಂಧಿಸಿದ್ದಾರೆ. ಚಿತ್ತಾಪುರ ತಾಲ್ಲೂಕಿನ ವಾಡಿ ಸಮೀಪದ ಕಡಬೂರು ಗ್ರಾಮದ ಮುಕ್ತುಂ ಶಹಾ ಮಹೆಬೂಬ್ ಶಹಾ ಬಾವಾಗೋಳ (38) ಬಂಧಿತ ಆರೋಪಿ. 2013ರಲ್ಲಿ ನ್ಯಾಯಾಲಯದಿಂದ ಜಾಮೀನು ಪಡೆದು ಬಳಿಕ ತಲೆಮರೆಸಿಕೊಂಡಿದ್ದ ಈತ, ಒಟ್ಟು ನಾಲ್ಕು ಪ್ರಕರಣಗಳಲ್ಲಿ ಆರೋಪಿಯಾಗಿದ್ದಾನೆ ಎಂದು ಪೊಲೀಸರು ತಿಳಿಸಿದ್ದಾರೆ.

ಆರೋಪಿಯ ಪತ್ತೆಗಾಗಿ ಶಹಬಾದ್ ಡಿವೈಎಸ್ಪಿ ಶಂಕರಗೌಡ ಪಾಟೀಲ ಹಾಗೂ ಚಿತ್ತಾಪುರ ಸಿಪಿಐ ಎಸ್.ಸಿ.ಪಾಟೀಲ ಅವರ ಮಾರ್ಗದರ್ಶನದಲ್ಲಿ ವಾಡಿ ಪಿಎಸ್‌ಐ ತಿರುಮಲೇಶ ಕೆ. ಮಂಜುನಾಥ ರೆಡ್ಡಿ ನೇತೃತ್ವದಲ್ಲಿ ವಿಶೇಷ ಪೊಲೀಸ್ ತಂಡ ರಚಿಸಲಾಗಿತ್ತು.ಖಚಿತ ಮಾಹಿತಿ ಪಡೆದ ಪೊಲೀಸರು ಕಾರ್ಯಾಚರಣೆ ನಡೆಸಿ ಆತನನ್ನು ಬಂಧಿಸಿದರು.

